ಸಂಪುಟ: 05 ಸಂಚಿಕೆ: 77 ಪುಟಗಳು: 08 ಶನಿವಾರ 31 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಬೆಂಕಿಯ ಶಾಖವು ಮರವನ್ನು ಬೂದಿಯಾಗಿಸುವಂತೆ, ಜ್ಞಾನದ ಬೆಂಕಿಯು ಎಲ್ಲಾ ಕರ್ಮಗಳನ್ನು ಸುಟ್ಟು ಬೂದಿ ಮಾಡುತ್ತದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 15 ನರ್ಸ್‌ಗಳಿಗೆ ರಾಷ್ಟ್ರಪತಿಗಳಿಂದ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸಿ

• ಉದಯವಾಹಿನಿ, ಬೆಂಗಳೂರು

ನರ್ಸಿಂಗ್‌ನಲ್ಲಿ ಪಿಎಚ್‌ಡಿ ಪದವಿ ಪಡೆದಿರುವ, ಪಠ್ಯಪುಸ್ತಕಗಳನ್ನು ಬರೆದಿರುವ, ಹಲವಾರು ಸಂಶೋಧನಾ ಲೇಖನಗಳನ್ನು ಪ್ರಕಟಿಸಿರುವ, ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ಸಹಾಯಕ ನರ್ಸಿಂಗ್ ಸೂಪರಿಂಟೆಂಡೆಂಟ್ ಆಗಿ ಸೇವೆ ಸಲ್ಲಿಸುತ್ತಿರುವ ಪ್ರತಿಭಾನ್ವಿತ ಶಿಕ್ಷಣ ತಜ್ಞ ಡಾ. ಬಾನು ಎಂ.ಆರ್ ಅವರು ಸೇರಿದಂತೆ 15 ನರ್ಸ್‌ಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರತಿಷ್ಠಿತ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ-2025 ಅನ್ನು ಪ್ರದಾನ ಮಾಡಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನರ್ಸಿಂಗ್ ವೃತ್ತಿಪರರಿಗೆ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಕೋವಿಡ್-19 ಸಾಂಕ್ರಾಮಿಕ ರೋಗದ ಸಮಯದಲ್ಲಿ ಅನುಕರಣೀಯ ನಾಯಕತ್ವ ಪ್ರದರ್ಶಿಸಿದ್ದಕ್ಕಾಗಿ ಮತ್ತು ಇತರ ನರ್ಸ್‌ಗಳಿಗೆ ಮಾದರಿಯಾಗುವಂತ ಕೆಲಸ ಮಾಡಿದ ಡಾ. ಬಾನು ಅವರಿಗೆ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ನೀಡಲಾಗಿದೆ. ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎಎನ್‌ಎಂ ಆಗಿ ವೃತ್ತಿ ಜೀವನ ಆರಂಭಿಸಿ, ನಿರ್ವಹಣಾ ಬೋಧಕಿ ಸ್ಥಾನಕ್ಕೇರಿ ಈ ವರ್ಷ ನಿವೃತ್ತಿಯಾದ ಆರೋಗ್ಯ ಶಿಕ್ಷಕಿ ವಲಿವೇಟಿ ಸುಭಾವತಿ ಅವರು ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ಸ್ವೀಕರಿಸಿದರು.

## ದಕ್ಷಿಣ ಕನ್ನಡದಲ್ಲಿ 5 ಬಲಿ ಪಡೆದ ವರುಣ ಶಾಲೆಗಳಿಗೆ ರಜೆ

• ಉದಯವಾಹಿನಿ, ದಕ್ಷಿಣ ಕನ್ನಡ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಭಾರಿ ಮಳೆಯಾಗುತ್ತಿದೆ. ತಡರಾತ್ರಿ ಸುರಿದ ಮಳೆ ಆರ್ಭಟಕ್ಕೆ ಜನರು ನಲುಗಿ ಹೋಗಿದ್ದಾರೆ. ನಿರಂತರ ಮಳೆಗೆ ಜಲ ಪ್ರವಾಹ ಉಂಟಾಗಿದೆ. ನೂರಾರು ಮನೆಗಳಿಗೆ ನೀರು ನುಗ್ಗಿದೆ. ಹಲವೆಡೆ ಗುಡ್ಡ ಕುಸಿದಿದೆ. ಉಳ್ಳಾಲ, ಕಲ್ಲಾಪು, ಬಿಗಂಬಿಲ, ಪಿಲಾರ್, ತಲಪಾಡಿ, ಅಂಬಿಕಾರಸ್ತೆ, ಕೋಟೆಕಾರು, ಪಾವೂರು, ಹರೇಕಳದ ಜನರು ಹೈರಾಣಾಗಿದ್ದಾರೆ.
ಮಳೆಯಿಂದಾಗಿ ಜಿಲ್ಲೆಯಲ್ಲಿ ಒಂದೇ ದಿನ ಐವರು ಮೃತಪಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಮಳೆಯಾಗುವುದರಿಂದ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಜಿಲ್ಲಾಡಳಿತ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಿದೆ. ಉಳ್ಳಾಲ ತಾಲ್ಲೂಕಿನ ಉರುಮನೆ ಕೋಡಿ ಎಂಬಲ್ಲಿ ಮಳೆಯಿಂದ ನಸುಕಿನ ಜಾವ 4:30ರ ಸುಮಾರಿಗೆ ಗುಡ್ಡ ಕುಸಿದು, ಪಕ್ಕದಲ್ಲೇ ಇದ್ದ ಕಾಂತಪ್ಪ ಪುಜಾರಿ ಎಂಬುವರ ಮನೆ ಮೇಲೆ ಬಿದ್ದಿದೆ. ಗುಡ್ಡ ಕುಸಿಯುವ ಶಬ್ಧ ಕೇಳಿ ಕಾಂತಪ್ಪ ಪೂಜಾರಿ ಎದ್ದು ಹೊರಗೆ ಓಡಿ ಬರುವಷ್ಟರಲ್ಲಿ ಗುಡ್ಡ ಕುಸಿದು ಮನೆ ಮೇಲೆ ಬಿದ್ದಿದೆ. ಕಾಂತಪ್ಪ ಪೂಜಾರಿ ಅವರ ಮೇಲೆ ಮನೆಯ ಸ್ಲ್ಯಾಬ್ ಬಿದ್ದಿದೆ. ಇದರಿಂದ ಕಾಂತಪ್ಪ ಪೂಜಾರಿ ಅವರು ಕಾಲು ಮುರಿದಿದ್ದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಮನೆ ಕುಸಿದು ಕಾಂತಪ್ಪ ಪೂಜಾರಿ ಪತ್ನಿ ಪ್ರೇಮಾ ಮೃತಪಟ್ಟಿದ್ದಾರೆ.

## ಹಳದಿ ಮಾರ್ಗ: ಜೂನ್‌ನಲ್ಲಿ ಸಂಚರಿಸಬೇಕೆಂಬ ಕನಸಿಗೆ ಕೊಳ್ಳಿ!

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಹಳದಿ ಮಾರ್ಗ ಜೂನ್‌ನಲ್ಲಿ ಆರಂಭವಾಗುತ್ತದೆ ಎಂಬ ನಿರೀಕ್ಷೆಯಲ್ಲಿದ್ದ ಪ್ರಯಾಣಿಕರ ಕನಸಿಗೆ ಬಿಎಂಆರ್‌ಸಿಎಲ್ ಕೊಳ್ಳಿ ಇಟ್ಟಿದೆ. ಈ ಹೊಸ ಮಾರ್ಗ ಉದ್ಘಾಟನೆ ಮತ್ತಷ್ಟು ವಿಳಂಬವಾಗುತ್ತಿದ್ದು, ಜುಲೈಗೆ ಆರಂಭವಾಗುವ ಸಾಧ್ಯತೆ ಇದೆ. ಬೆಂಗಳೂರು ಜನರ ಬಹು ನಿರೀಕ್ಷಿತ ನಮ್ಮ ಮೆಟ್ರೋ ಮಾರ್ಗಗಳಲ್ಲಿ ಹಳದಿ ಮಾರ್ಗ ಒಂದಾಗಿದೆ. ಆರ್‌ವಿ ರಸ್ತೆ - ಬೊಮ್ಮಸಂದ್ರ ನಡುವಿನ 18.8 ಕಿ.ಮೀ ಉದ್ದದ ಈ ಮಾರ್ಗದಲ್ಲಿ ಒಟ್ಟು 16 ನಿಲ್ದಾಣಗಳು ಬರಲಿವೆ. ಮಾರ್ಗವು ದಕ್ಷಿಣ ಬೆಂಗಳೂರಿನ ವಿವಿಧ ಬಡಾವಣೆಗಳಲ್ಲಿ ವ್ಯಾಪಿಸಿದೆ. ಜತೆಗೆ ಗ್ರೀನ್‌ಲೈನ್ ಜತೆ ಸಂಪರ್ಕ ಹೊಂದಿರುವುದರಿಂದ ಈ ಮಾರ್ಗವು ದಕ್ಷಿಣ ಬೆಂಗಳೂರು ಜನರನ್ನು ನಗರ ಕೇಂದ್ರ ಭಾಗಕ್ಕೆ ಸಂಪರ್ಕ ಕಲ್ಪಿಸಲು ಸಹಕಾರಿಯಾಗಲಿದೆ. ಹಳದಿ ಮಾರ್ಗದ ಕಾಮಗಾರಿ ಈಗಾಗಲೇ ಪೂರ್ಣವಾಗಿದ್ದು, ರೈಲು ಸಂಚಾರ ಪ್ರಾಯೋಗಿಕ ಪರೀಕ್ಷೆಯೂ ಮುಕ್ತಾಯವಾಗಿದೆ.

## ನಾನು ಬೆದರಿಕೆಗೆ ಹೆದರಲ್ಲ, ಕ್ಷಮೆ ಕೇಳಲ್ಲ: ಕಮಲ್ ಉದ್ಧಟತನ


• ಉದಯವಾಹಿನಿ, ಬೆಂಗಳೂರು

ಕನ್ನಡ ಭಾಷೆಯ ಬಗ್ಗೆ ಕಮಲ್ ಹಾಸನ್ ನೀಡಿರುವ ಹೇಳಿಕೆಗೆ ಕರ್ನಾಟಕದಲ್ಲಿ ತೀವ್ರ ವಿರೋಧ ವ್ಯಕ್ತವಾಗಿದೆ. ಕ್ಷಮೆ ಕೋರಲು ಗಡುವು ನೀಡಿದ್ದ ಕರ್ನಾಟಕಕ್ಕೆ ಕ್ಷಮೆ ಕೇಳಲ್ಲ, ನಾನು ತಪ್ಪು ಮಾಡಿಲ್ಲ ಎಂದು ಕಮಲ್ ಹಾಸನ್ ಮತ್ತೆ ಉದ್ಧಟತನ ತೋರಿದ್ದಾರೆ. ಇದು ಪ್ರಜಾಪ್ರಭುತ್ವ. ನಾನು ಕಾನೂನು ಮತ್ತು ನ್ಯಾಯವನ್ನು ನಂಬುತ್ತೇನೆ. ಕರ್ನಾಟಕ, ಆಂಧ್ರಪ್ರದೇಶ ಮತ್ತು ಕೇರಳದ ಮೇಲಿನ ನನ್ನ ಪ್ರೀತಿ ನಿಜ. ನಾನು ತಪ್ಪು ಮಾಡಿಲ್ಲ, ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ. ನನ್ನಿಂದ ತಪ್ಪಾಗಿದ್ರೆ ಕ್ಷಮೆ ಕೇಳುವೆ, ನನ್ನಿಂದ ತಪ್ಪು ಆಗಿಲ್ಲ. ನನ್ನ ನಿರ್ಧಾರಕ್ಕೆ ಬದ್ಧವಾಗಿದ್ದೇನೆ ಎಂದು ಸಮರ್ಥಿಸಿಕೊಂಡಿದ್ದಾರೆ. ಯಾವುದೇ ಬೆದರಿಕೆ, ಎಚ್ಚರಿಕೆಗೆ ನಾನು ಹೆದರುವುದಿಲ್ಲ. ಕಾನೂನು ಹಾಗೂ ನ್ಯಾಯದ ಮೇಲೆ ನಂಬಿಕೆ ಇಟ್ಟಿದ್ದೇನೆ ಎಂದು ಹೇಳಿದ್ದಾರೆ.

## ಸಿಎಂ ಸಿದ್ದರಾಮಯ್ಯ ಗರಂ!

# ಕೋರ್ಟ್‌ನಲ್ಲಿ ಕೇಸ್‌ಗಳ ಭರಾಟೆ ಅಧಿಕಾರಿಗಳಿಗೆ ಸಿಎಂ ತರಾಟೆ

**ನ್ಯಾಯ ವಿಳಂಬವಾದರೆ ನ್ಯಾಯ ನಿರಾಕರಿಸಿದಂತೆ ಎನ್ನುವ ಮಾತನ್ನು ನೆನಪಿಡಿ. ಇದನ್ನು ಸಹಿಸಲು ಸಾಧ್ಯವಿಲ್ಲ. ಉಳಿದ ಜಿಲ್ಲೆಗಳಲ್ಲಿ ಪ್ರಗತಿ ಕಾಣುವಾಗ ಕೆಲವು ಮಾತ್ರ ಆಗುತ್ತಿಲ್ಲ ಎಂದರೆ ಸಹಿಸಲು ಸಾಧ್ಯವಿಲ್ಲ. ಅಗತ್ಯವಿದ್ದರೆ ಹೇಳಿ ಹಚ್ಚುವರಿ ಎಸಿ, ಡಿಸಿಗಳನ್ನು ಕೊಡಬಹುದು ಎಂದರು.**




## ಅಧಿಕಾರಿಗಳ ಸಸ್ಪೆಂಡ್‌ಗೆ ಸೂಚನೆ

**ಸಿಎಂ ತಾಕೀತು**

ನಮ್ಮ ಸರ್ಕಾರ ಹೊಸದಾಗಿ ಘೋಷಣೆ ಮಾಡಿರುವ ಎಲ್ಲಾ ಇಂದಿರಾ ಕ್ಯಾಂಟೀನ್‌ಗಳು ಕಾರ್ಯಾರಂಭ ಮಾಡಲು ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇಂದಿರಾ ಕ್ಯಾಂಟೀನ್‌ಗಳಿಗೆ ಇನ್ನೂ 5ಕಡೆ ಸ್ಥಳ ಗುರುತಿಸ ಬೇಕಾಗಿದೆ. ತಕ್ಷಣ ನಿವೇಶನ ಗುರುತಿಸಬೇಕು. ಹೊಸದಾಗಿ ಘೋಷಣೆ ಮಾಡಲಾಗಿರುವ 186 ಇಂದಿರಾ ಕ್ಯಾಂಟೀನ್‌ಗಳ ಪೈಕಿ ಕೇವಲ 103 ನಿರ್ಮಾಣ ಕಾರ್ಯ ಪೂರ್ಣಗೊಂಡಿವೆ. ಆಹಾರ ವಿತರಣೆ 43 ಇಂದಿರಾ ಕ್ಯಾಂಟೀನ್‌ಗಳಲ್ಲಿ ಮಾತ್ರ ಪ್ರಾರಂಭವಾಗಿದೆ. ಎಲ್ಲಾ ಕಡೆ ಆಹಾರ ವಿತರಣೆ ಪ್ರಾರಂಭಿಸಲು ಜಿಲ್ಲಾಧಿಕಾರಿಗಳು ಕ್ರಮಕೈಗೊಳ್ಳಬೇಕು ಎಂದು ಸಿಎಂ ಸೂಚಿಸಿದರು.

**ಬಡವರ ಇಂದಿರಾ ಕ್ಯಾಂಟೀನ್ ಕಾರ್ಯ ಪೂರ್ಣಗೊಳಿಸಿ**





### ಪ್ರಮುಖ ಸೂಚನೆಗಳೇನು?

- ಹಿಂದಿನ ಸಭೆಯಲ್ಲಿ ನೀಡಿದ ಸೂಚನೆಗಳು, ತೆಗೆದುಕೊಂಡ ನಿರ್ಣಯಗಳಲ್ಲಿ ಕೆಲವು ಇಲಾಖೆಗಳು ಶೇ.100ರಷ್ಟು ಪ್ರಗತಿ ತೋರಿಸಿಲ್ಲ
- ಇದನ್ನು ಸಹಿಸಲು ಸಾಧ್ಯವಿಲ್ಲ. ಈ ವಿಚಾರದಲ್ಲಿ ರಾಜಿ ಇಲ್ಲ.
- ಜನರ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ಮೇಲೆ ನಿಷ್ಠುರವಾಗಿ ಕ್ರಮ ಕೈಗೊಳ್ಳುವುದು ನಮಗೆ ಅನಿವಾರ್ಯ ಆಗುತ್ತದೆ.
- ಜಿಲ್ಲಾಧಿಕಾರಿ, ಜಿಲ್ಲಾ ರಕ್ಷಣಾಧಿಕಾರಿಗಳು ಮತ್ತು ಸಿಇಒಗಳು ತಮ್ಮ ಅಹಂ ಬದಿಗೊಟ್ಟಿ ಸಮನ್ವಯದಿಂದ ಕೆಲಸ ಮಾಡಿದರೆ ಮಾತ್ರ ರಾಜ್ಯದ ಸಮಗ್ರ ಅಭಿವೃದ್ಧಿ ಸಾಧ್ಯ.
- ಈ ಉದ್ದೇಶಕ್ಕೇ ನೀವುಗಳು ಐಎಎಸ್ ಮಾಡಿರುವುದು. ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಗ್ರಾಮಾಂತರ ಜಿಲ್ಲೆ ಎಸಿ, ಡಿಸಿ ಕೋರ್ಟ್‌ನಲ್ಲಿ ಸಾಕಷ್ಟು ಪ್ರಕರಣಗಳು ಬಾಕಿ ಇರುವುದಕ್ಕೆ ಸಿಎಂ ಸಿದ್ದರಾಮಯ್ಯ ಗರಂ ಆಗಿದ್ದು, ಜಿಲ್ಲೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಜತೆಗೆ ಅಂತಹ ಅಧಿಕಾರಿಗಳಿಗೆ ನೋಟಿಸ್ ಕೊಟ್ಟು ಸಸ್ಪೆಂಡ್ ಮಾಡಿ ಎಂದು ಮುಖ್ಯ ಕಾರ್ಯದರ್ಶಿಗಳಿಗೆ ಸಿಎಂ ಸೂಚನೆ ನೀಡಿದರು.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಎಸಿ, ಡಿಸಿ, ತಹಶೀಲ್ದಾರ್ ಕೋರ್ಟ್ ಗಳಲ್ಲಿ ಬಾಕಿ ಕೇಸುಗಳು ಶೀಘ್ರ ವಿಲೇವಾರಿ ಆಗುತ್ತಿರುವುದಕ್ಕೆ ಮೆಚ್ಚುಗೆ ಸೂಚಿಸಿದ ಮುಖ್ಯಮಂತ್ರಿಗಳು ಬೆಂಗಳೂರು ಗ್ರಾಮಾಂತರ ಮತ್ತು ಎರಡು ಜಿಲ್ಲೆಗಳಲ್ಲಿ ಮಾತ್ರ ಎಸಿ, ಡಿಸಿ ಕೋರ್ಟ್ ಗಳಲ್ಲಿ ಐದು ವರ್ಷಕ್ಕೂ ಹಳೆಯದಾದ ಪ್ರಕರಣಗಳು ಬಾಕಿ ಇರುವುದಕ್ಕೆ ಅಸಮಾಧಾನಗೊಂಡರು.

**ಡಿಸಿ, ಸಿಇಓಗಳಿಗೆ ಸಿದ್ದರಾಮಯ್ಯ ಖಡಕ್ ಸೂಚನೆ:** ಸಂವಿಧಾನ ವಿರೋಧಿ ಶಕ್ತಿಗಳನ್ನು ಮೊಳಕೆಯಲ್ಲೇ ಮಟ್ಟಹಾಕಿ ಎಂದು ಜಿಲ್ಲಾಧಿಕಾರಿಗಳು ಹಾಗೂ ಸಿಇಓಗಳಿಗೆ ಸಿಎಂ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದರು. ವಿಧಾನಸೌಧದಲ್ಲಿ ನಡೆದ ಡಿಸಿ, ಸಿಇಒ ಗಳ ಜೊತೆಗಿನ ಸಭೆಯಲ್ಲಿ ಮಾತನಾಡಿ ಖಡಕ್ ಸೂಚನೆ ನೀಡಿದರು. ಸಂವಿಧಾನದ ಆಶಯ ಮತ್ತು ಧ್ಯೇಯೋದ್ದೇಶಗಳಿಗೆ ಯಾರೂ ವಿರುದ್ಧವಾಗಿ ಕಾರ್ಯನಿರ್ವಹಿಸಬಾರದು. ಅಂತಹ ಶಕ್ತಿಗಳು ಬೆಳೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಇತ್ತೀಚಿನ ದಿನಗಳಲ್ಲಿ ಇಂತಹ ಶಕ್ತಿಗಳು ತಲೆಎತ್ತುತ್ತಿದ್ದು, ಅಂತಹ ಶಕ್ತಿಗಳನ್ನು ಮೊಳಕೆಯಲ್ಲೇ ಚಿವುಟಿ ಹಾಕಬೇಕು. ಅಂತಹ ವ್ಯಕ್ತಿಗಳೂ ಯಾರೇ ಆಗಿದ್ದರೂ, ಅವರನ್ನು ಮಟ್ಟ ಹಾಕುವುದು ಅಂತಹ ಶಕ್ತಿಗಳು ಬೆಳೆಯದಂತೆ ನೋಡಿಕೊಳ್ಳಬೇಕಾದುದು ಡಿಸಿ, ಸಿಇಒ, ಎಸ್ಪಿಗಳ ಜವಾಬ್ದಾರಿ ತಾನೇ ಎಂದು ಮುಖ್ಯಮಂತ್ರಿ ಖಾರವಾಗಿ ಪ್ರಶ್ನಿಸಿದರು. ಈ ವರ್ಷ 700 ಬಾಲ್ಯ ವಿವಾಹ ನಡೆದಿದೆ, ಬಾಲ್ಯವಿವಾಹ ತಡೆಗೆ ಕಾಯ್ದೆ, ಕಾನೂನುಗಳಿವೆ. ಆದರೂ ಇದನ್ನು ಪರಿಣಾಮಕಾರಿಯಾಗಿ ಕೆಲವು ಕಡೆ ಬಳಸಿಲ್ಲ. ಇದು ತಪ್ಪಲ್ಲವೇ ಎಂದು ಖಾರವಾಗಿ ಪ್ರಶ್ನಿಸಿದರು.

### ಕಾನೂನು ಸುವ್ಯವಸ್ಥೆ ಕಾಪಾಡಲು ಸೂಚನೆ

ಕಾನೂನು ಸುವ್ಯವಸ್ಥೆ ಹದಗೆಟ್ಟರೆ ರಾಜ್ಯದ ಅಭಿವೃದ್ಧಿ ಸಾಧ್ಯವಿಲ್ಲ. ಇವೆರಡಕ್ಕೂ ನೇರಾ ನೇರಾ ಸಂಬಂಧವಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟರೆ, ಅಭಿವೃದ್ಧಿ ಕುಂಟಿತವಾದಂತೆ. ಇದಕ್ಕೆ ಜಿಲ್ಲಾಧಿಕಾರಿಗಳು, ಜಿಲ್ಲಾ ರಕ್ಷಣಾಧಿಕಾರಿಗಳು ನೇರ ಹೊಣೆ ಎಂದು ಎಚ್ಚರಿಸಿದರು. ನಾವು ಜನರ ತೆರಿಗೆ ದುಡ್ಡಿನಲ್ಲಿ ಆಡಳಿತ ನಡೆಸುತ್ತಿದ್ದೇವೆ. ನಾವು ಮತ್ತು ನೀವು ಎಲ್ಲಾ ಸವಲತ್ತುಗಳನ್ನು ಅನುಭವಿಸುತ್ತಿರುವುದು ಜನರ ತೆರಿಗೆ ಹಣದಿಂದ ಎನ್ನುವುದನ್ನು ಮರೆಯಬಾರದು. ಕಾರು, ಮನೆ ಸೇರಿ ಎಲ್ಲಾ ಸವಲತ್ತುಗಳನ್ನು ನಾವು ಕೊಟ್ಟಿರುವುದು ತೆರಿಗೆ ಹಣದಲ್ಲಿ. ಆದ್ದರಿಂದ ಜನಪರ ಧೋರಣೆಯಲ್ಲಿ ಕೆಲಸ ಮಾಡಬೇಕು. ಇದೇ ಪ್ರಜಾಪ್ರಭುತ್ವದ ಮೂಲ ಆಶಯ. ಜಿಲ್ಲಾ ಮಟ್ಟದ ಶಾಂತಿ ಸಮಿತಿ ಅಧ್ಯಕ್ಷರು ಜಿಲ್ಲಾಧಿಕಾರಿಗಳೇ ಆಗಿರ್ತಾರೆ. ಶಾಂತಿ ಕಾಪಾಡಲು ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಬೇಕು. ಅದನ್ನು ಬಿಟ್ಟು ಶಾಂತಿಭಂಗ ಆದ ಮೇಲೆ ಪೋಸ್ಟ್ ಮಾರ್ಟಂ ಮಾಡುತ್ತಾ ಕೂರಬಾರದು. ಮೊದಲೇ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಲು ಏನು ಸಮಸ್ಯೆ ನಿಮಗೆ ಎಂದು ಪ್ರಶ್ನಿಸಿದರು.

### ಜಿಲ್ಲಾಧಿಕಾರಿ ಮತ್ತು ಜಿಲ್ಲಾ ರಕ್ಷಣಾಧಿಕಾರಿಗಳಿಗೆ ಎಚ್ಚರಿಕೆ

ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಕೆಲಸ ಮಾಡುವವರ ವಿರುದ್ಧ ಮತ್ತು ಜನಪರ ಆಶಯಗಳಿಗೆ ಸ್ಪಂದಿಸದಿದ್ದರೆ ಅವರ ವಿರುದ್ಧ ನಾವು ಕ್ರಮ ಕೈಗೊಳ್ಳಬೇಕಾಗುತ್ತದೆ. ನೀವೆಲ್ಲಾ ಸಂವಿಧಾನ ಓದಿದ್ದೀರಿ, ಅದರ ಆಶಯಗಳಿಗೆ, ಧ್ಯೇಯೋದ್ದೇಶಗಳಿಗೆ ಬದ್ಧರಾಗಿದ್ದೀರಿ ಎಂದು ನಂಬಿದ್ದೇನೆ. ಇದನ್ನು ಕಾರ್ಯ ರೂಪಕ್ಕೆ ತರುವುದರಲ್ಲಿ ವಿಫಲರಾದವರ ವಿರುದ್ಧ ನಾನು ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲು ನಿರ್ಧರಿಸಿದ್ದೇನೆ ಎಂದು ಎಚ್ಚರಿಸಿದರು. ಸಂವಿಧಾನ ವಿರೋಧಿ, ಜನ ವಿರೋಧಿ ದುಷ್ಟ ಶಕ್ತಿಗಳು ಕೆಲವು ಕಡೆ ಬಾಲ ಬಿಚ್ಚುತ್ತಿವೆ. ಅವರು ಎಷ್ಟೇ ಪ್ರಭಾವಿ ಆಗಿರಲಿ, ಕಾನೂನು ಹಾಳು ಮಾಡಿದರೆ ಅಂಥವರ ವಿರುದ್ಧ ಕ್ರಮ ಕೈಗೊಳ್ಳಿ. ಇಲ್ಲದಿದ್ದರೆ ನಿಮ್ಮ ವಿರುದ್ಧ ನಾವು ಕ್ರಮ ಕೈಗೊಳ್ಳುತ್ತೇವೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ರಕ್ಷಣಾಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

### ರೈತರ ಆತ್ಮಹತ್ಯೆ ಪರಿಹಾರ ವಿಳಂಬಕ್ಕೆ ಸಿಎಂ ಗರಂ

ಜಿಲ್ಲಾವಾರು ರೈತರ ಆತ್ಮಹತ್ಯೆ ಅಂಕಿ ಅಂಶಗಳನ್ನು ಗಮನಿಸಿದ ಮುಖ್ಯಮಂತ್ರಿಗಳು ಇನ್ನೂ 13 ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ಬಾಕಿ ಇರುವುದನ್ನು ನೋಡಿ ಗರಂ ಆದ ಮುಖ್ಯಮಂತ್ರಿಗಳು ಜಿಲ್ಲಾಧಿಕಾರಿಗಳಿಂದ ವರದಿ ಪಡೆದರು. ಹಾವೇರಿ ಸೇರಿ ಇನ್ನೆರಡು ಜಿಲ್ಲೆಗಳಲ್ಲಿ ಒಟ್ಟು 13 ರೈತ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ಬಾಕಿ ಇರುವುದನ್ನು ಆದಷ್ಟು ಬೇಗ ಬಗೆಹರಿಸಿ ಪರಿಹಾರ ಒದಗಿಸಿ ಎನ್ನುವ ಸೂಚನೆ ನೀಡಿದರು.

## ಕೊರೋನಾ ಹೆಮ್ಮಾರಿಗೆ 3ನೇ ಬಲಿ: ಟೆಸ್ಟಿಂಗ್ ಕಡ್ಡಾಯಗೊಳಿಸಿದ ಕೇಂದ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಮತ್ತೆ ಆಟ ಶುರು ಮಾಡಿರೋ ಕೊರೋನಾ ಹೆಮ್ಮಾರಿ ಸದ್ದಿಲ್ಲದೇ ಆರ್ಭಟಿಸ್ತಿದೆ. ಶರವೇಗದಲ್ಲಿ ಹೆಚ್ಚಾಗ್ತಿರೋ ಕೊರೋನಾ ಕೇಸ್‌ಗಳು ಜನರಲ್ಲಿ ಆತಂಕ ತಂದಿಟ್ಟಿದೆ. ಇದರ ಮಧ್ಯೆ ಮೇ 30 ಕೂಡ ಒಂದು ಬಲಿ ಪಡೆದಿದೆ. ಮೈಸೂರಲ್ಲಿ 63 ವರ್ಷ ಪುರುಷ ಕೊವಿಡ್‌ಗೆ ಬಲಿಯಾಗಿದ್ದಾನೆ. ಈ ಮೂಲಕ ಹೆಮ್ಮಾರಿಗೆ ಬಲಿಯಾದವರ ಸಂಖ್ಯೆ 3ಕ್ಕೆ ಏರಿಕೆಯಾಗಿದೆ. ಇನ್ನೊಂದೆಡೆ ಕೋವಿಡ್ ಗುಣಲಕ್ಷಣ ಹೊಂದಿರುವವರಿಗೆ ಕೊವಿಡ್ ಟೆಸ್ಟ್ ಕಡ್ಡಾಯಗೊಳಿಸಿ ಕೇಂದ್ರ ಆರೋಗ್ಯ ಇಲಾಖೆ ಮಹತ್ವದ ಸುತ್ತೋಲೆ ಹೊರಡಿಸಿದೆ. ಮುಂಗಾರಿನ ಎಂಟ್ರಿ ಆಗಿರೋದರಿಂದ ಕೋವಿಡ್ ಸೋಂಕು ವೇಗವಾಗಿ ಹರಡೋಕೆ ಶುರುವಾಗಿದ್ದು ರಾಜ್ಯದ ಕೋವಿಡ್ ಪಾಸಿಟಿವಿಟಿ ರೇಟ್ ಶೇಕಡಾ 24 ರ ಗಡಿ ದಾಟಿದೆ.

ಕಳೆದ 24 ಗಂಟೆಗಳಲ್ಲಿ ಸೋಂಕಿತ ಸಂಖ್ಯೆ 114 ಕೊರೋನಾ



**ಕರ್ನಾಟಕದಲ್ಲಿ ಮತ್ತಷ್ಟು ಹೆಚ್ಚಳ**

ಪ್ರಕರಣಗಳೊಂದಿಗೆ 367ಕ್ಕೆ ಏರಿಕೆಯಾಗಿದೆ.

ಇತ್ತ ರಾಜಧಾನಿಯಲ್ಲೂ ಕೊರೋನಾ ಸೋಂಕಿನ ಭೀತಿ ಹೆಚ್ಚಾಗುವ ಆತಂಕ ಎದುರಾಗಿದೆ. ನಿತ್ಯ ಕೋವಿಡ್ ಸೋಂಕಿನಲ್ಲಿ ಏರಿಕೆ ಕಾಣ್ತಿರೋದು ಸದ್ದಿಲ್ಲದೇ ತನ್ನ ಕಬಂಧಬಾಹು ಚಾಚುತ್ತಿರೋ ಕೊರೋನಾ ಕೇಸ್‌ಗಳ ಮೂಲಕ ಎಚ್ಚರಿಕೆಯ ಕರೆಗಂಟೆ ಬಾರಿಸುತ್ತಿದೆ.

**ರಾಜ್ಯದಲ್ಲಿ ಕೊರೋನಾಗೆ 3ನೇ ಬಲಿ:** ಮೈಸೂರಿನ 63 ವರ್ಷದ ವ್ಯಕ್ತಿ ಕೊರೋನಾಗೆ ಬಲಿಯಾಗಿದ್ದಾರೆ. ಕಿಡ್ನಿ ವೈಫಲ್ಯವಾಗಿ ಮೇ 15ರಂದು ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಆದ್ರೆ, ಚಿಕಿತ್ಸೆ ಫಲಕಾರಿಯಾಗದೇ ಮೇ 25ರಂದು ಮೃತಪಟ್ಟಿದ್ದಾರೆ. ಬಳಿಕ ಮೃತಪಟ್ಟ ವ್ಯಕ್ತಿಯ ಕೊವಿಡ್ ರಿಪೋರ್ಟ್ ಪಾಸಿಟಿವ್ ಎಂಬ ವರದಿ ಬಂದಿದೆ.

**ಕೊವಿಡ್ ಟೆಸ್ಟ್ ಕಡ್ಡಾಯ:** ಕೊವಿಡ್ ಪ್ರಕರಣಗಳು ಹೆಚ್ಚಳ ಹಿನ್ನಲೆಯಲ್ಲಿ ಕೊವಿಡ್ ಪರೀಕ್ಷೆ ಕಡ್ಡಾಯಗೊಳಿಸಿ ಕೇಂದ್ರ ಆರೋಗ್ಯ ಇಲಾಖೆ ಸುತ್ತೋಲೆ ಹೊರಡಿಸಿದೆ. ಕೋವಿಡ್ ಗುಣಲಕ್ಷಣ ಹೊಂದಿರುವವರಿಗೆ ಕೋವಿಡ್ ಟೆಸ್ಟ್ ಕಡ್ಡಾಯಗೊಳಿಸಿದ್ದು, ಸ್ವ್ಯಾಬ್ ಪಡೆದ ದಿನವೇ ಪ್ರಯೋಗಾಲಯಕ್ಕೆ ಕಳಿಸಬೇಕು ಎಂದು ಸೂಚಿಸಿದೆ.

ಜೂನ್ ತಿಂಗಳಲ್ಲಿ ಮಳೆಗಾಲದ ಜತೆಗೆ ವಾತಾವರಣದ ಉಷ್ಣಾಂಶ ಕೂಡ ತಗ್ಗಲ್ಲಿದ್ದು, ಸೋಂಕು ಮತ್ತಷ್ಟು ಹೆಚ್ಚಾಗೋ ಸಾಧ್ಯತೆಯಿದೆ. ಶಾಲೆಗಳು ಕೂಡ ಆರಂಭವಾಗಿದ್ದು, ಮಕ್ಕಳಿಗೆ ಸೋಂಕು ಹರಡದಂತೆ ಪೋಷಕರು ಎಚ್ಚರಿಕೆ ವಹಿಸಬೇಕಿದೆ.

## ಪಾಕಿಸ್ತಾನ ನಾಲ್ಕು ಭಾಗ ಆಗ್ತಿತ್ತು

• ಉದಯವಾಹಿನಿ, ಹೊಸದಿಲ್ಲಿ

ಭಾರತದ ಮೊದಲ ದೇಶೀಯ ವಿಮಾನ ವಾಹಕ ನೌಕೆ INS ವಿಕ್ರಾಂತ್‌ನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶುಕ್ರವಾರ ಪಾಕಿಸ್ತಾನಕ್ಕೆ ನೇರ ಎಚ್ಚರಿಕೆ ನೀಡಿದರು. ಆಪರೇಷನ್ ಸಿಂಧೂರ್ ಸಮಯದಲ್ಲಿ ನೌಕಾಪಡೆ ಕೂಡ ಭಾಗಿಯಾಗಿದ್ದರೆ, ಪಾಕಿಸ್ತಾನವು 1971ಕ್ಕಿಂತ ಕೆಟ್ಟ ಫಲಿತಾಂಶವನ್ನು ಎದುರಿಸುತ್ತಿತ್ತು.

ಅವತ್ತು ಎರಡು ಭಾಗವಾಗಿದ್ದ ಪಾಕಿಸ್ತಾನ, ಈಗ ನಾಲ್ಕು ಭಾಗವಾಗುತ್ತಿತ್ತು ಎನ್ನುವ ಮೂಲಕ ಪಾಕಿಸ್ತಾನಕ್ಕೆ ಭಾರತೀಯ ನೌಕಾಪಡೆಯ ಸಾಮರ್ಥ್ಯವನ್ನು ಪರಿಚಯಿಸಿದ್ದಾರೆ. ಅರಬ್ಬಿ ಸಮುದ್ರದಲ್ಲಿ ನಿಯೋಜನೆಗೊಂಡಿರುವ ಐಎನ್‌ಎಸ್ ವಿಕ್ರಾಂತ್‌ನಲ್ಲಿ ಮಾತನಾಡಿದ ಅವರು, ಭಾರತೀಯ ನೌಕಾಪಡೆ ಕಾರ್ಯಾಚರಣೆಗೆ ಬಂದಾಗ ಪಾಕಿಸ್ತಾನ ಒಂದರಿಂದ ಎರಡಾಗಿ ವಿಭಜನೆಯಾಗಿತ್ತು ಎಂಬುದಕ್ಕೆ 1971 ಸಾಕ್ಷಿಯಾಗಿದೆ.

ಅದೇ ರೀತಿ ಆಪರೇಷನ್ ಸಿಂಧೂರ್‌ನಲ್ಲಿ ಭಾರತೀಯ ನೌಕಾಪಡೆ ಕಾರ್ಯಾಚರಣೆಗೆ ಇಳಿದಿದ್ದರೆ, ಪಾಕಿಸ್ತಾನ ಬರೀ ಎರಡಲ್ಲ, ನಾಲ್ಕು ಭಾಗಗಳಾಗಿ ವಿಭಜನೆಯಾಗುತ್ತಿತ್ತು ಎಂದು ನಾನು ಭಾವಿಸುತ್ತೇನೆ ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ.

# ದ.ಕ ಜಿಲ್ಲಾ ಉಸ್ತುವಾರಿ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾದ ದಿನೇಶ್ ಗುಂಡೂರಾವ್

**● ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರಣಿ ಕೊಲೆ ಉಸ್ತುವಾರಿ ವಿರುದ್ಧ ಆಕ್ರೋಶ ● ಸದ್ಯ ಮುಂದುವರೆಯುವಂತೆ ಸಿಎಂ ಸಿದ್ದರಾಮಯ್ಯ ಸಲಹೆ**

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿಯಾಗಿರುವ ದಿನೇಶ್ ಗುಂಡೂರಾವ್ ತಮ್ಮ ಉಸ್ತುವಾರಿ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದಾರೆ. ಗುರುವಾರ ರಾತ್ರಿ ದಿಢೀರ್ ಆಗಿ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದ ಅವರು, ಉಸ್ತುವಾರಿ ಸಚಿವ ಸ್ಥಾನದ ಜವಾಬ್ದಾರಿಯಿಂದ ಮುಕ್ತಗೊಳಿಸುವಂತೆ ಮನವಿ ಮಾಡಿದ್ದರು. ಆದರೆ ಸದ್ಯ ನೀವೇ ಮುಂದುವರಿಯಿರಿ ಎಂದು ಸಿಎಂ ಸಿದ್ದರಾಮಯ್ಯ ಸಲಹೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಶ್ರಫ್, ಸುಹಾಸ್ ಶೆಟ್ಟಿ, ಅಬ್ದುಲ್ ರೆಹ್ಮಾನ್ ಹತ್ಯೆಯಿಂದ ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಗಿದೆ. ಶಾಂತಿಯ ವಾತಾವರಣ ಕದಡಿದ್ದು, ಜನರು ಆತಂಕದಲ್ಲಿ ಜೀವನ ಸಾಗಿಸುವಂತಾಗಿದೆ. ಈ ನಡುವೆ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶಗಳು ವ್ಯಕ್ತವಾಗುತ್ತಿದೆ.

ಅದರಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಕಾರ್ಯವೈಖರಿಯ ಬಗ್ಗೆ ಪ್ರಶ್ನೆಗಳು ಉದ್ಭವಿಸುತ್ತಿದೆ.

**ದಿನೇಶ್ ವಿರುದ್ಧ ಭುಗಿಲೆದ್ದ ಅಸಮಾಧಾನ!:** ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಗೆ ಸಂಪೂರ್ಣ ಅಧಿಕಾರ ನೀಡಿದ್ದರೂ ವಿಫಲವಾಗಿದ್ದಾರೆ ಎಂಬ ಆರೋಪ ಇದೆ. ಸಾಮಾಜಿಕ ಕಾರ್ಯಕರ್ತರು, ಹೋರಾಟಗಾರರು ಕೂಡಾ ದಿನೇಶ್ ಕಾರ್ಯವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು. ಅಧಿಕಾರಿಗಳನ್ನು ನಿಯಂತ್ರಣ ಮಾಡುವಲ್ಲಿ ಸಚಿವರು ವಿಫಲವಾಗಿದ್ದಾರೆ ಎಂಬ ಆರೋಪವೂ ಇದೆ.

**ವಾಸ್ತವ ಪರಿಸ್ಥಿತಿ ಏನಿದೆ?:** ದಿನೇಶ್ ಗುಂಡೂರಾವ್ ಅವರಿಗೆ ಜಿಲ್ಲೆಯಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಅವಕಾಶ ಸಿಗುತ್ತಿಲ್ಲ ಎಂಬ ವಾದವನ್ನು ಅವರ ಆಪ್ತ ವಲಯ ಮಾಡುತ್ತಿದೆ. ಜಿಲ್ಲಾ ಮಟ್ಟದ ನಾಯಕರ ಸಹಕಾರವೂ ಸಿಗುತ್ತಿಲ್ಲ. ಹೀಗಾಗಿ ಅನಿವಾರ್ಯ ಕಾರಣಗಳಿಂದಾಗಿ ಪರಿಣಾಮಕಾರಿಯಾಗಿ ಕೆಲಸ ಮಾಡಲು ಆಗುತ್ತಿಲ್ಲ ಎಂದು ಹೇಳಲಾಗುತ್ತಿದೆ.

ಈ ಕಾರಣಕ್ಕಾಗಿಯೇ ದಿನೇಶ್ ಗುಂಡೂರಾವ್ ತನ್ನ ಉಸ್ತುವಾರಿ ಜವಾಬ್ದಾರಿಯನ್ನು ಬದಲಾವಣೆ ಮಾಡುವಂತೆ ಮನವಿ ಮಾಡಿಕೊಂಡಿದ್ದಾರೆ. ಗುರುವಾರ ನಿಗದಿಯಾಗಿದ್ದ ಇಲಾಖಾ ಸಭೆಗಳು ಇದ್ದರೂ ಅದನ್ನು ನಡೆಸದೆ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ. ನನಗೆ ಆರೋಗ್ಯ ಇಲಾಖೆ ಜವಾಬ್ದಾರಿ ಸಾಕು. ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಬೇಡ ಎಂದಿದ್ದಾರೆ. ಆದರೆ ಸದ್ಯ ಯಾವುದೇ ಬದಲಾವಣೆ ಬೇಡ. ಮುಂದೆ ನೋಡೋಣ ಎಂಬ ಸಲಹೆಯನ್ನು ಸಿಎಂ ನೀಡಿದ್ದಾರೆ ಎಂದು ತಿಳಿದುಬಂದಿದೆ.



### ಸಾಮಾಜಿಕ ಜಾಲತಾಣದಲ್ಲಿ ವಿರೋಧ

ದಿನೇಶ್ ಗುಂಡೂರಾವ್ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿಯೂ ವ್ಯಾಪಕವಾಗಿ ವಿರೋಧ ವ್ಯಕ್ತವಾಗಿದೆ. ಜಿಲ್ಲೆಯಲ್ಲಿ ಅಹಿತಕರ ಘಟನೆಗಳು ನಡೆದರೂ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಗೆ ಭೇಟಿ ನೀಡಿಲ್ಲ. ಪರಿಸ್ಥಿತಿಯನ್ನು ಸರಿಯಾಗಿ ನಿಭಾಯಿಸಿಲ್ಲ ಎಂದು ಆರೋಪ ಇದೆ. ಆದರೆ ಇದನ್ನು ದಿನೇಶ್ ಗುಂಡೂರಾವ್ ನಿರಾಕರಿಸಿದ್ದಾರೆ.

### ಕೆಟ್ಟ ಘಟನೆ ಎಲ್ಲಾರಿಗೂ ಬೇಸರ

ಮಂಗಳೂರಿನಲ್ಲಿ ನಡೆದ ಕೆಟ್ಟ ಘಟನೆ ಎಲ್ಲಾರಿಗೂ ಬೇಸರ, ನೋವು ತಂದಿದೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಜೊತೆಗೆ ಈಗಾಗಲೇ ಚರ್ಚೆ ಮಾಡಿದ್ದೇವೆ. ಮುಂದಿನ ಕ್ರಮಗಳ ಬಗ್ಗೆ ನೋಡಬೇಕಿದೆ. ಕರಾವಳಿ ಜಿಲ್ಲೆಗಳಲ್ಲಿ ಉಗ್ರವಾದ ವಾತವರಣ ಸೃಷ್ಟಿ ಮಾಡುವ ಸನ್ನಿವೇಶ ಆಗುತ್ತಿದೆ. ಈ ಬೆಳವಣಿಗೆ ಬಹಳ ಆತಂಕಕಾರಿ. ಇದು ಸಮಾಜದಲ್ಲಿ ಒಂದು ರೀತಿ ಭಯವನ್ನು ಸೃಷ್ಟಿ ಮಾಡುವುದು ಮತ್ತು ಕಾನೂನಿನ ಬಗ್ಗೆ ನಮಗೆ ಯಾವುದೇ ರೀತಿಯ ಭಯವಿಲ್ಲ ಎಂಬ ಮನಸ್ಥಿತಿ. ನಾವೇನು ಬೇಕಿದ್ದರೂ ಮಾಡುತ್ತೇವೆ ಎಂಬ ಮನಸ್ಥಿತಿಗೆ ಹೋಗುತ್ತಿರುವುದು ಸ್ಪಷ್ಟವಾಗಿ ಕಾಣುತ್ತಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,704/Gram24ct ₹8,895/Gram22ct ಬೆಳ್ಳಿ: ₹99.90/Gram

# 3 ಪ್ರಮುಖ ಧಾರ್ಮಿಕ ಸ್ಥಳಗಳ ದರ್ಶನ, ಟಿಕೆಟ್ ದರವೆಷ್ಟು ಗೊತ್ತಾ?




• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (ಕೆಎಸ್‌ಆರ್‌ಟಿಸಿ) ಬೆಂಗಳೂರಿನಿಂದ ವಾರಾಂತ್ಯದ ವಿಶೇಷ ಟೂರ್ ಪ್ಯಾಕೇಜ್ ಆರಂಭಿಸಿದ್ದು, ಈ ಪ್ಯಾಕೇಜ್ ಮೂಲಕ ಜನರು 3 ಪ್ರಮುಖ ಧಾರ್ಮಿಕ ಸ್ಥಳಗಳಿಗೆ ಭೇಟಿ ನೀಡಬಹುದಾಗಿದೆ.

ಕೆಎಸ್‌ಆರ್‌ಟಿಸಿ ಕೇಂದ್ರೀಯ ವಿಭಾಗದ ವತಿಯಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಈ ಟೂರ್ ಪ್ಯಾಕೇಜ್'ನ್ನು ಆರಂಭಿಸಲಾಗಿದ್ದು, 350 ಕಿ.ಮೀ ದೂರದ ಈ ಪ್ರವಾಸಕ್ಕೆ ಅಶ್ವಮೇಧ ಸಾರಿಗೆ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬೆಂಗಳೂರು-ಶ್ರೀರಂಗಪಟ್ಟಣ-ಕಲ್ಲಹಳ್ಳಿ-ಮೇಲುಕೋಟೆ ಟೂರ್ ಪ್ಯಾಕೇಜ್ ಇದಾಗಿದ್ದು, ಮೇ 31 ರಂದು ಆರಂಭವಾಗುತ್ತಿದೆ.

ಪ್ರತಿ ವಾರಾಂತ್ಯ ಅಂದರೆ, ಶನಿವಾರ ಮತ್ತು ಭಾನುವಾರ ಈ ಟೂರ್ ಪ್ಯಾಕೇಜ್ ಲಭ್ಯವಿರಲಿದೆ. ಕೆಎಸ್‌ಆರ್‌ಟಿಸಿ ವಿಶೇಷ ಪ್ಯಾಕೇಜ್ ಟೂರ್ ಪ್ಯಾಕೇಜ್ ಟಿಕೆಟ್ ಪಡೆಯಲು ಕೆಎಸ್‌ಆರ್‌ಟಿಸಿ ಅಧಿಕೃತ ವೆಬ್‌ಸೈಟ್ ಅಥವಾ ದೂರವಾಣಿ ಸಂಖ್ಯೆ 080 – 26252625 / 7760990100 / 7760990560 / 7760990287 ಸಂಪರ್ಕಿಸಬಹುದಾಗಿದೆ.

**ಹೊಸ ಟೂರ್ ಪ್ಯಾಕೇಜ್**

**ಟಿಕೆಟ್ ದರ ಇಂತಿದೆ:** ವಯಸ್ಕರಿಗೆ 670 ರೂಪಾಯಿಗಳನ್ನು ನಿಗದಿಪಡಿಸಲಾಗಿದ್ದು, 6 ವರ್ಷದಿಂದ 12 ವರ್ಷ ವಯಸ್ಸಿನ ಮಕ್ಕಳು ಪ್ರಯಾಣಿಸುತ್ತಿದ್ದರೆ ಒಬ್ಬರಿಗೆ 500 ರೂಪಾಯಿ ಕೊಟ್ಟು ಬುಕ್ಕಿಂಗ್ ಮಾಡಬಹುದಾಗಿದೆ.

670 ರೂಪಾಯಿಗಳಲ್ಲಿ ಪ್ರವಾಸಿ ಸ್ಥಳಗಳ ಪ್ರವೇಶ ಶುಲ್ಕ, ಆಹಾರವನ್ನು ಹೊರತುಪಡಿಸಲಾಗಿದೆ. ಕೇವಲ ಪ್ರವಾಸಿಗರನ್ನು ಗಮ್ಯಸ್ಥಾನಕ್ಕೆ ಕರೆದೊಯ್ಯಲು ಮಾತ್ರ ದರ ನಿಗದಿ ಮಾಡಲಾಗಿದೆ.

**ಪ್ಯಾಕೇಜ್‌ನಲ್ಲಿರುವ ದೇವಾಲಯಗಳು ಇಂತಿದೆ**

**ಪ್ಯಾಕೇಜ್ ಬೆಂಗಳೂರಿನಿಂದ ಶ್ರೀರಂಗಪಟ್ಟಣ- ಕಲ್ಲಹಳ್ಳಿ- ಮೇಲುಕೋಟೆಯಂತಹ ಸ್ಥಳಗಳನ್ನು ಒಳಗೊಂಡಿದ್ದು, ಪ್ರವಾಸವು ಬೆಂಗಳೂರಿನಿಂದ ಬೆಳಗ್ಗೆ 6:30 ಕ್ಕೆ ಪ್ರಾರಂಭವಾಗುತ್ತದೆ. ಅಲ್ಲಿಂದ ನಿಮಿಷಾಂಬ ದೇವಾಲಯ, ಶ್ರೀರಂಗಪಟ್ಟಣದ ಶ್ರೀರಂಗನಾಥ ದೇವಾಲಯ, ಕಲ್ಲಹಳ್ಳಿಯ ಭೂ ವರಾಹ ಸ್ವಾಮಿ ದೇವಾಲಯ, ಮೇಲುಕೋಟೆಯ ಚೆಲುವ ನಾರಾಯಣ ಸ್ವಾಮಿ ದೇವಾಲಯ, ತಂಗಿ ಕೊಳ, ಅಕ್ಕ ಕೊಳ, ರಾಯ ಗೋಪುರಂ ಸ್ಥಳಗಳನ್ನು ಸಂದರ್ಶಿಸಿ, ರಾತ್ರಿ ಬೆಂಗಳೂರಿಗೆ ವಾಪಸ್ಸಾಗಬಹುದಾಗಿದೆ.**

## ಅವೈಜ್ಞಾನಿಕ ಕಾಮಗಾರಿಯನ್ನು ಕೂಡಲೇ ನಿಲ್ಲಿಸಿ; ಸಚಿವ ವಿ.ಸೋಮಣ್ಣ ಆಗ್ರಹ

• **ಉದಯವಾಹಿನಿ, ಬೆಂಗಳೂರು**

ವಿವಾದಿತ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಫೀಡರ್ ಯೋಜನೆಯಿಂದ ತುಮಕೂರು ಭಾಗದ ರೈತರಿಗೆ ಅನ್ಯಾಯವಾಗುತ್ತಿದ್ದು, ತಕ್ಷಣ ಯೋಜನೆಯ ಕಾಮಗಾರಿಯನ್ನು ನಿಲ್ಲಿಸುವಂತೆ ಕೇಂದ್ರ ಸಚಿವ ವಿ. ಸೋಮಣ್ಣ ಅವರು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ. ಈ ಕುರಿತು ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಅವರು, ವಿವಾದಿತ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಫೀಡರ್ ಯೋಜನೆಯು ತುಮಕೂರು ಭಾಗದ ರೈತರಿಗೆ ಶಾಪವಾಗಿ ಪರಿಣಮಿಸಲಿದೆ. ಈ ಕೆನಾಲ್ ನಿರ್ಮಾಣದಿಂದ ಹೈಡ್ರಾಲಿಕ್ ಹೆಡ್ ಕುಸಿದು ಸಕಾಲದಲ್ಲಿ ನೀರು ಪೂರೈಕೆಯಲ್ಲಿ ಕೊರತೆಯಾಗುವ ಆತಂಕದ ಬಗ್ಗೆ ಈ ಭಾಗದ ರೈತರು/ತಂತ್ರಜ್ಞರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಆದಾಗ್ಯೂ, ರಾಜ್ಯ ಸರ್ಕಾರ ಈ ಬಗ್ಗೆ ಮೃದು ಧೋರಣೆ ತಳೆದಿರುವುದು ಖಂಡನೀಯ ಎಂದು ಹೇಳಿದ್ದಾರೆ. ತುಮಕೂರಿನ ರೈತರ ನೆಮ್ಮದಿ ಕೆಡಿಸುವ ಈ ಅವೈಜ್ಞಾನಿಕ ಯೋಜನೆಯ ಕಾಮಗಾರಿಯನ್ನು ತಕ್ಷಣವೇ ನಿಲ್ಲಿಸಬೇಕು ಹಾಗೂ ಈ ಕಾಮಗಾರಿ ನಡೆಸುತ್ತಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ರಾಜ್ಯದ 50 ಸೌಲಭ್ಯ ವಂಚಿತ ಕುಟುಂಬಗಳಿಗೆ ಜಾಯ್ ಹೋಮ್ಸ್

• **ಉದಯವಾಹಿನಿ, ಬೆಂಗಳೂರು**

ಜೋಯಾಲುಕ್ಕಾಸ್ ಫೌಂಡೇಷನ್ ರಾಜ್ಯದ 50 ಸೌಲಭ್ಯ ವಂಚಿತ ಬಡ ಕುಟುಂಬಗಳಿಗೆ ಜಾಯ್ ಹೋಮ್ ಶೀರ್ಷಿಕೆಯಡಿ ಮನೆಗಳನ್ನು ಒದಗಿಸಲು ಮುಂದಾಗಿದ್ದು, ಇದರ ಉದ್ಘಾಟನಾ ಕಾರ್ಯಕ್ರಮವನ್ನು ಇದೇ 31ರಂದು ಬೆಳಿಗ್ಗೆ 11 ಗಂಟೆಗೆ ಹೊಸೂರು ಮುಖ್ಯ ರಸ್ತೆಯಲ್ಲಿರುವ ನಿಮ್ಹಾನ್ಸ್ ಕನ್ವೆನ್ಸನ್ ಸೆಂಟರ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಗೃಹ ಸಚಿವ ಜಿ. ಪರಮೇಶ್ವರ ಭಾಗವಹಿಸಲಿದ್ದು, 50 ಕುಟುಂಬಗಳಿಗೆ ಮನೆಯ ಕೀಗಳನ್ನು ಹಸ್ತಾಂತರಿಸಲಾಗುತ್ತದೆ. ಜೋಯಾಲುಕ್ಕಾಸ್ ಸಮೂಹದ ಅಧ್ಯಕ್ಷ ಜೋಯ್ ಅಲುಕ್ಕಾಸ್ ಉಪಸ್ಥಿತರಿರುತ್ತಾರೆ. ಸಂಸ್ಥೆಯ ಜಾಯ್ ಹೋಮ್'ಯೋಜನೆಯು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯ (ಸಿಎಸ್‌ಆರ್) ಭಾಗವಾಗಿದೆ. ಶಾಶ್ವತ ಮತ್ತು ಸುಂದರ ವಸತಿಗಳನ್ನು ಒದಗಿಸುವುದು ಯೋಜನೆಯ ಉದ್ದೇಶ' ಎಂದು ಜೋಯಾಲುಕ್ಕಾಸ್ ಪ್ರಕಟಣೆ ತಿಳಿಸಿದೆ

## ಲೈಂಗಿಕ ದೌರ್ಜನ್ಯ: ಪ್ರೀ-ವೆಡ್ಡಿಂಗ್ ಶೂಟ್ ಬಳಿಕ ಆರೋಪಿ ವಿದೇಶಕ್ಕೆ ಪರಾರಿ

• **ಉದಯವಾಹಿನಿ, ಬೆಂಗಳೂರು**

ಮದುವೆ ಆಗುವುದಾಗಿ ಯುವತಿಯನ್ನು ನಂಬಿಸಿ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ವಿದೇಶಕ್ಕೆ ಪರಾರಿಯಾಗಿರುವ ಆರೋಪಿ ವಿರುದ್ಧ ಚನ್ನಮ್ಮನ ಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 22 ವರ್ಷದ ಸಂತ್ರಸ್ತೆ ನೀಡಿರುವ ದೂರಿನ ಅನ್ವಯ ಭರತ್ ಮತ್ತು ಆತನ ತಂದೆ ಸೂರ್ಯ ಪ್ರಸಾದ್, ತಾಯಿ ಅನುರಾಧಾ, ಅಕ್ಕ ರಂಜಿತಾ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಸಂತ್ರಸ್ತೆಗೆ ಆರೋಪಿ ಭರತ್ ಇನ್‌ಸ್ಟಾಗ್ರಾಂ ಮೂಲಕ ಪರಿಚಿತನಾಗಿದ್ದ. ನಂತರ ಇಬ್ಬರೂ ಪ್ರೀತಿಸುತ್ತಿದ್ದರು ಎಂದು ಮೂಲಗಳು ತಿಳಿಸಿವೆ. ಕೆಲವು ದಿನಗಳ ನಂತರ ಮನೆಯಲ್ಲಿ ಮದುವೆಗೆ ಒಪ್ಪುತ್ತಿಲ್ಲ. ಪೋಷಕರ ವಿರೋಧದ ನಡುವೆಯೂ ಮದುವೆ ಆಗಲು ಸಿದ್ಧ ಇರುವುದಾಗಿ ಹೇಳಿ ಮದುವೆಯ ಸಿದ್ಧತೆಗೆ ಸೂಚಿಸಿದ್ದ. ಮದುವೆ ಮಂಟಪ ಕೂಡ ಕಾಯ್ದಿರಿಸಲಾಗಿತ್ತು. ಫ್ರೀ-ವೆಡ್ಡಿಂಗ್ ಶೂಟ್ ಸಹ ನಡೆದಿತ್ತು. ನಂತರ ಆರೋಪಿ ವಿದೇಶಕ್ಕೆ ಪರಾರಿಯಾಗಿದ್ದಾನೆ. ಈ ಬಗ್ಗೆ ನಮ್ಮ ಪೋಷಕರು, ಭರತ್ ಅವರ ಮನೆಗೆ ಹೋಗಿ ವಿಚಾರಿಸಿದ್ದಾಗ ಅವರ ತಂದೆ-ತಾಯಿ ಅವಮಾನಿಸಿ, ಜಾತಿ ನಿಂದನೆ ಮಾಡಿದ್ದಾರೆ' ಎಂದು ಸಂತ್ರಸ್ತೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಪ್ರೀತಿಸಿ ಮದುವೆ ಆಗುವುದಾಗಿ ನಂಬಿಸಿ, ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪಿಯ ವಿರುದ್ಧ ಹಾಗೂ ನನ್ನನ್ನು ಮದುವೆ ಆಗದಂತೆ ತಡೆದಿರುವ ಆರೋಪಿಯ ಮನೆಯವರ ವಿರುದ್ಧ ಕಾನೂನು ರೀತಿ ಕ್ರಮ ಜರುಗಿಸುವಂತೆ ಸಂತ್ರಸ್ತೆ ದೂರಿನಲ್ಲಿ ಕೋರಿದ್ದಾರೆ' ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ರಾಜಕಾಲುವೆ ಮೇಲೆ ಅಕ್ರಮವಾಗಿ ಎದ್ದಿರುವ ಬೃಹತ್ ಕಟ್ಟಡ ಯಾರದ್ದು?

• **ಉದಯವಾಹಿನಿ, ಬೆಂಗಳೂರು**

ಡಿಸಿಎಂ ಡಿಕೆಶಿ ಅವರು ಮಾನ್ಯತಾ ಟೆಕ್ ಪಾರ್ಕ್ ಬಳಿ ಭೇಟಿ ನೀಡಿದ್ದು ನೆರೆ, ಮಳೆ ಅನಾಹುತ ವೀಕ್ಷಿಸೋದಕ್ಕಾ? ಅಥವಾ ರಾಜಕಾಲುವೆ ಒತ್ತುವರಿದಾರನ್ನು ರಕ್ಷಣೆ ಮಾಡೋದಕ್ಕಾ? ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿಯವರು ಪ್ರಶ್ನಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಡಿಕೆಶಿ ಅವರು ಮಾನ್ಯತಾ ಟೆಕ್ ಪಾರ್ಕ್ ಬಳಿಗೆ ಭೇಟಿ ಕೊಟ್ಟು ಮಳೆ, ನೆರೆ ಪರಿಸ್ಥಿತಿ ವೀಕ್ಷಣೆ ಮಾಡಿರುವುದೇನೋ ಸರಿ. ಆದರೆ, ಅವರ ಭೇಟಿ ಪ್ರವಾಹ ವೀಕ್ಷಣೆಗೋ ಅಥವಾ ರಾಜಕಾಲುವೆ ರಕ್ಕಸರ ರಕ್ಷಣೆಗೋ..? ಈ ಬಗ್ಗೆ ಬೆಂಗಳೂರು ಮಹಾಜನತೆಗೆ ಬೆಂಗಳೂರು ಉಸ್ತುವಾರಿ ಸಚಿವರು ಉತ್ತರಿಸಬೇಕು ಎಂದು ಒತ್ತಾಯಿಸಿದ್ದಾರೆ. ಡಿಸಿಎಂ ಅವರು ಪಾದಸ್ಪರ್ಶ ಮಾಡಿದ್ದ ರಾಜಕಾಲುವೆ



ಪುನೀತವಾಗಿರಬೇಕು. ಪಾಪ.. ಅದೇ ರಾಜಕಾಲುವೆ ಮೇಲೆ ಬೃಹದಾಕಾರವಾಗಿ ಎದ್ದು ನಿಂತಿರುವ ಭಾರೀ ಆಸಾಮಿ ಯೊಬ್ಬರ ಕಟ್ಟಡ ಅವರ ಕಣ್ಣಿಗೆ ಕಾಣಲಿಲ್ಲವೆ? ರಾಜಾರೋಷವಾಗಿ ರಾಜಕಾಲುವೆಯನ್ನು ಮುಕ್ಕಿ ತಿಂದಿರುವ ಆಸಾಮಿಯ ಬಗ್ಗೆ ಅವರು ಚಕಾರವನ್ನೇ ಎತ್ತಲಿಲ್ಲ. ಕೊನೆಪಕ್ಷ ಅವರ ಹೆಸರನ್ನೂ ಹೇಳಲಿಲ್ಲ ಎಂದು ಡಿಕೆಶಿಯವರ ಕಾಲೆಳೆದಿದ್ದಾರೆ. ರಾಜಕಾಲುವೆಗಳ ಮೇಲೆ ಐಷಾರಾಮಿ ಸೌಧಗಳನ್ನು ಕಟ್ಟಿಕೊಂಡು ಕೋಟಿ ಕೋಟಿ ದುಡಿಯುತ್ತಿರುವ ರಾಜಕಾಲುವೆ ರಕ್ಕಸರ ವಿರುದ್ಧ ಕ್ರಮ ಜರುಗಿಸುವ ದಮ್ಮು ತಾಕತ್ತು ನಿಮಗೆ ಇದೆಯಾ ಡಿಕೆಶಿ ಅವರೇ? ಹೋಗಲಿ, ಅಂಥವರ ವಿರುದ್ಧ ಕ್ರಮ ಜರುಗಿಸಲು ನಿಮ್ಮ ಅಧಿಕಾರಿಗಳಿಗೆ ಮುಕ್ತ ಸ್ವಾತಂತ್ರ್ಯ, ಅಧಿಕಾರ ನೀಡಿದ್ದೀರಾ? ಒಂದು ವೇಳೆ ನೀಡಿದ್ದರೆ ಆ ಅಕ್ರಮ ಕಟ್ಟಡಗಳು ಇನ್ನೂ ಯಾಕೆ ಹಾಗೆಯೇ ಇವೆ? ಎಂಬುದನ್ನು ನೀವು ಹೇಳಬೇಕಲ್ಲವೇ? ಎಂದು ಪ್ರಶ್ನಿಸಿದ್ದಾರೆ. ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ನೀವು ಕುರ್ಚಿ ಮೇಲೆ ಕೂತು ಎರಡು ವರ್ಷವೇ ಆಯಿತು. ಅದೆಷ್ಟೋ ಬಾರಿ ಸಾಯಿ ಬಡಾವಣೆ ಮುಳುಗಿದ್ದೂ ಆಯಿತು, ತೇಲಿದ್ದೂ ಆಯಿತು! ನಿಮ್ಮಿಂದ ಆಗಲಿ ಅಥವಾ ಕಾಂಗ್ರೆಸ್ ಸರ್ಕಾರದಿಂದ ಆಗಲಿ ಯಾವುದೇ ಪರಿಹಾರ ಸಿಗಲಿಲ್ಲ! ಬಡಾವಣೆಯ ಜನರು ನರಳುತ್ತಿರುವುದು ಮಾತ್ರ ತಪ್ಪಿಲ್ಲ. ಈ ಅಸಡ್ಡೆ ಯಾಕೆ? ಇವರೆಲ್ಲ ತೆರಿಗೆ ಕಟ್ಟುತ್ತಿಲ್ಲವೇ ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ.

# ದಕ್ಷಿಣ ಕನ್ನಡ ಜಿಲ್ಲೆಗೆ ಕೆಪಿಸಿಸಿಯಿಂದ ಪ್ರತ್ಯೇಕ ತಂಡ!

### ಎಲ್ಲಾ ಸಮಾಜದ ರಕ್ಷಣೆ ಮಾಡಲು ಏನು ಕ್ರಮ ಕೈಗೊಳ್ಳಬೇಕೋ ತೆಗೆದುಕೊಳ್ಳೇವೆ ಎಂದು ಭರವಸೆ

• **ಉದಯವಾಹಿನಿ, ಬೆಂಗಳೂರು**

ಕೋಮು ಸಂಘರ್ಷದಿಂದ ಬಳಲುತ್ತಿರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಒಂದಿಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದೆ. ಈ ನಡುವೆ ಕಾಂಗ್ರೆಸ್ ಪಕ್ಷದ ವತಿಯಿಂದಲೇ ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಲು ಒಂದು ಪ್ರತ್ಯೇಕ ತಂಡವನ್ನು ರಚನೆ ಮಾಡಲಾಗುವುದು ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಶುಕ್ರವಾರ ಮಾತನಾಡಿದ ಅವರು, ನಾನು ಪಕ್ಷದ ವತಿಯಿಂದ ಒಂದು ಪ್ರತ್ಯೇಕ ತಂಡವನ್ನು ಮಂಗಳೂರಿಗೆ ಕಳಿಸ್ತೀನಿ. ಯಾರೂ ಆತಂಕ ಪಡುವ ಅಗತ್ಯ ಇಲ್ಲ. ಎಲ್ಲಾ ಸಮಾಜದ ರಕ್ಷಣೆ ಮಾಡಲು ಏನು ಕ್ರಮ ಕೈಗೊಳ್ಳಬೇಕೋ ತೆಗೆದುಕೊಳ್ತೇವೆ ಎಂದು ಭರವಸೆ ನೀಡಿದರು.



ಈ ನಿಟ್ಟಿನಲ್ಲಿ ಕೆಪಿಸಿಸಿ ಪ್ರತ್ಯೇಕ ತಂಡ ಜಿಲ್ಲೆಗೆ ತೆರಳಲಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ನೆಲೆಸಬೇಕು. ಒಂದು ಸಾವು, ಎರಡು ಸಾವು ಅಂತಲ್ಲ. ಇಂತಹ ಘಟನೆಗಳು ಇಡೀ ದ.ಕ ಜಿಲ್ಲೆ ಹಾಗೂ ಉಡುಪಿ ಜಿಲ್ಲೆಗೆ ಇದು ಕೊಡಲಿಪೆಟ್ಟು. ಎಲ್ಲರಿಗೂ ಆತಂಕ ಉಂಟು ಮಾಡಿದೆ ಎಂದರು.

**ವರದಿ ನೀಡಲಿರುವ ತಂಡ:** ''ನಾವು ಎಲ್ಲಾ ಸಮಾಜ ರಕ್ಷಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಪಕ್ಷದ ವತಿಯಿಂದ ಒಂದು ತಂಡ ಕಳುಹಿಸಿ ವರದಿ ನೀಡಲು ಹೇಳಿದ್ದೇವೆ. ಅಧಿಕಾರಿಗಳು ನೀಡುವ ವರದಿ ಬೇರೆ, ಸಾರ್ವಜನಿಕರ ಜತೆ ಚರ್ಚೆ ಮಾಡಿ ವರದಿ ನೀಡಲು ನಮ್ಮ ಪಕ್ಷದವರಿಗೆ ತಿಳಿಸಿದ್ದೇನೆ. ಕರಾವಳಿ ಭಾಗದಲ್ಲಿ ಶಾಂತಿ ನೆಲೆಸಬೇಕು. ಇದು ಒಂದು ಸಾವು, ಎರಡು ಸಾವಿನ ವಿಚಾರ ಮಾತ್ರವಲ್ಲ. ಇದು ಇಡೀ ಕರಾವಳಿ ಭಾಗಕ್ಕೆ ಬಿದ್ದಿರುವ ಕೊಡಲಿಪೆಟ್ಟು. ಜನರು ಆಂತಕಕ್ಕೆ ಒಳಗಾಗುವುದು, ಬಂಡವಾಳ ಹೂಡಿಕೆದಾರರು ಅಲ್ಲಿ ಹೂಡಿಕೆ ಮಾಡಲು ಹಿಂಜರಿಯುತ್ತಿರುವುದನ್ನು ಎಲ್ಲರೂ ಅರಿತುಕೊಳ್ಳಬೇಕು.

ಈ ಪರಿಸ್ಥಿತಿಯನ್ನು ಅರಿತುಕೊಳ್ಳಬೇಕು ಎಂದು ಬಿಜೆಪಿ ಸ್ನೇಹಿತರು ಹಾಗೂ ಬೇರೆ ಬೇರೆ ಸಂಘಟನೆಗಳಿಗೆ ಮನವಿ ಮಾಡುತ್ತೇನೆ ಎಂದು ತಿಳಿಸಿದರು.

ನೀವು ಅಧಿಕಾರಿಗಳನ್ನು ವರ್ಗಾವಣೆ ಮಾಡಿದರೂ ಪರಿಸ್ಥಿತಿ ನಿಯಂತ್ರಣವಾಗುತ್ತಿಲ್ಲ ಎಂದು ಕೇಳಿದಾಗ, ಪರಿಸ್ಥಿತಿ ನಿಯಂತ್ರಿಸಲಾಗುತ್ತಿದೆ. ಬಿಜೆಪಿಯವರು ಹಾಗೂ ಅನೇಕ ಸಂಘಟನೆಗಳು ಈ ಭಾಗದಲ್ಲಿ ಕರ್ನಾಟಕ ರಾಜ್ಯದಲ್ಲಿ ಕೋಮು ಪ್ರಚೋದನೆ ಮಾಡುತ್ತಿದ್ದಾರೆ.

ಇದರಿಂದ ನಷ್ಟ ಆಗುವುದು ಕರ್ನಾಟಕ ರಾಜ್ಯ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗೆ ಎಂಬುದನ್ನು ಅವರು ಅರಿತುಕೊಳ್ಳಬೇಕು. ಅಲ್ಲಿರುವ ಪ್ರತಿಭಾವಂತ ಯುವಕರು ಈಗಾಗಲೇ ಉದ್ಯೋಗಕ್ಕಾಗಿ ಬೇರೆ ರಾಜ್ಯ ಹಾಗೂ ದೇಶಗಳಿಗೆ ವಲಸೆ ಹೋಗುತ್ತಿದ್ದಾರೆ. ನಾವು ಉದ್ಯೋಗ ಸೃಷ್ಟಿಸಲು ಪ್ರಯತ್ನಿಸುತ್ತಿದ್ದೇವೆ ಎಂದು ತಿಳಿಸಿದರು. ಅಧಿಕಾರಿಗಳು ಸ್ಥಳೀಯವಾಗಿ ಸ್ಪಂದಿಸುತ್ತಿಲ್ಲ ಎಂದು ಕೇಳಿದಾಗ ನಮ್ಮ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ್ದು, ಅಧಿಕಾರಿಗಳು ಸ್ಪಂದಿಸುತ್ತಾರೆ ಎಂದರು.

**ಕಮೀಷನರ್, ಎಸ್ ಪಿ ಬದಲಾವಣೆ**

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಕೋಮು ಗಲಭೆಗಳು ಹಾಗೂ ಸರಣಿ ಕೊಲೆಗಳಿಗೆ ಪ್ರತಿಕ್ರಿಯೆಯಾಗಿ, ರಾಜ್ಯ ಸರ್ಕಾರ ಅಲ್ಲಿನ ನಿಯಂತ್ರಿಸಲು ಅಲ್ಲಿನ ಪೊಲೀಸ್ ಕಮಿಷನರ್, ಎಸ್‌ಪಿ ಬದಲಾವಣೆ, ವಿಶೇಷ ಕಾರ್ಯಪಡೆ ಜತೆ ಬಿ.ಕೆ ಹರಿಪ್ರಸಾದ್‌ಗೆ ಜವಾಬ್ದಾರಿ ನೀಡಿದೆ. ಮುಂದಿನ ದಿನಗಳಲ್ಲಿ ಕರಾವಳಿ ಪ್ರದೇಶದಲ್ಲಿ ಕೋಮು ಸಂಘರ್ಷಕ್ಕೆ ಜಾಗ ಇರೋದಿಲ್ಲವೇ. ಸರ್ಕಾರದ ಈ ನಡೆ ಎಷ್ಟು ಪ್ರಭಾವ ಬೀರಲಿದೆ ಎಂದು ಕಾದು ನೋಡಬೇಕಾಗಿದೆ.**

**ಜೆಡಿಎಸ್ ಮುಖಂಡರು ಕಾಂಗ್ರೆಸ್ ಸೇರ್ಪಡೆ ಬಗ್ಗೆ ಜೆಡಿಎಸ್ ಟ್ವೀಟ್ ಮಾಡಿರುವ ಬಗ್ಗೆ ಕೇಳಿದಾಗ, ಅವರ ಪಕ್ಷದವರು ಯಾಕೆ ಗಾಬರಿಯಾಗಬೇಕು? ಅವರು ಒಂದೇ ಪಕ್ಷ ಅಲ್ಲವಲ್ಲ. ಅವರು ಎರಡು ಪಕ್ಷ ಸೇರಿ ಒಟ್ಟಿಗೆ ಇದ್ದಾರಲ್ಲಾ ಅವರು ಯಾರ ಜತೆ ಬೇಕಾದರೂ ಬೇರೆಯಬಹುದು. ಜನ, ಕಾರ್ಯಕರ್ತರು, ಮುಖಂಡರು ನಮ್ಮ ಜತೆ ಸೇರಲು ಆಸೆ ಪಡುತ್ತಿದ್ದಾರೆ. ಅವರನ್ನು ಬೇಡ ಎನ್ನಲು ಸಾಧ್ಯವೇ ಎಂದು ತಿಳಿಸಿದರು.**

## ತನಿಖಾ ಅಧಿಕಾರಿ ಬದಲಾವಣೆಗೆ ಸ್ನೇಹಮಯಿ ಕೃಷ್ಣ ಮನವಿ

• **ಉದಯವಾಹಿನಿ, ಬೆಂಗಳೂರು**




ಮುಡಾ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣಕ್ಕೆ ಸಂಬಂಧಿಸಿ ಲೋಕಾಯುಕ್ತ ಪೊಲೀಸರು ಅಂತಿಮ ವರದಿ ಸಲ್ಲಿಸಲು ಮತ್ತೊಮ್ಮೆ ಕಾಲಾವಕಾಶ ಕೋರಿರುವುದಕ್ಕೆ ದೂರುದಾರ ಸ್ನೇಹಮಯಿ ಕೃಷ್ಣ ಆಕ್ಷೇಪಣೆ ಸಲ್ಲಿಸಿದ್ದು, ತನಿಖಾಧಿಕಾರಿ ಬದಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಮನವಿ ಮಾಡಿದ್ದಾರೆ.

**ಲೋಕಾಯುಕ್ತ ಪೊಲೀಸರಿಗೆ ಸೂಚನೆ**

ಗುರುವಾರ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಮೈಸೂರು ಲೋಕಾಯುಕ್ತ ಪೊಲೀಸರು ಅಂತಿಮ ವರದಿ ಸಲ್ಲಿಸಲು ಸಮಯ ನಿಗದಿಯಾಗಿತ್ತು. ಆದರೆ ಈ ಹಿಂದೆಯೇ ಕಾಲಾವಕಾಶ ಕೋರಿದ್ದ ಪೊಲೀಸರು ಇದೀಗ ಮತ್ತೊಮ್ಮೆ ವರದಿ ಸಲ್ಲಿಕೆಗೆ ಅವಕಾಶ ನೀಡುವಂತೆ ಮನವಿ ಮಾಡಿದರು. ಇದಕ್ಕೆ ಆಕ್ಷೇಪ ಸಲ್ಲಿಕೆ ಮಾಡಿದ ದೂರುದಾರ ಸ್ನೇಹಮಯಿಕೃಷ್ಣ ಅವರು, ಪೊಲೀಸರು ಆರೋಪಿಗಳ ಪರ ಇದ್ದು, ಅನಗತ್ಯವಾಗಿ ವರದಿ ಸಲ್ಲಿಕೆಗೆ ವಿಳಂಬ ಮಾಡಲಾಗುತ್ತಿದ್ದಾರೆ. ತನಿಖೆಯ ವಿಧಾನವು ಕಾನೂನಿನ ತತ್ವಗಳಿಗೆ ಸಂಪೂರ್ಣವಾಗಿ ವಿರುದ್ಧವಾಗಿದೆ ಎಂದು ವಾದಿಸಿದರು.

ಲೋಕಾಯುಕ್ತ ಪೊಲೀಸರು ಬಿ ರಿಪೋರ್ಟ್ ಸಲ್ಲಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಇತರೆ 4 ಆರೋಪಿಗಳನ್ನು ದೋಷಮುಕ್ತಗೊಳಿಸಲು ಸಾಧ್ಯವಿಲ್ಲ. ಅಲ್ಲದೆ, ತನಿಖೆ ವಿಳಂಬ ಮಾಡಿ ಪ್ರಕರಣವನ್ನು ಬಾಕಿ ಇಡುವಂತೆ ಮಾಡುವುದು ಸಾಧ್ಯವಿಲ್ಲ, ಪ್ರಕರಣದಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಕಾರಣ ತನಿಖಾಧಿಕಾರಿಯನ್ನು ಬದಲಿಸಬೇಕು ಎಂದು ಕೋರಿದರು. ದೂರುದಾರರ ಮನವಿಗೆ ಅಗತ್ಯ ಆಕ್ಷೇಪಣೆ ಸಲ್ಲಿಸುವಂತೆ ನ್ಯಾಯಾಲಯ ಲೋಕಾಯುಕ್ತ ಪೊಲೀಸರಿಗೆ ಸೂಚನೆ ನೀಡಿ ಮುಂದಿನ ವಿಚಾರಣೆಯನ್ನು ಜೂ.17ಕ್ಕೆ ಮುಂದೂಡಿಕೆ ಮಾಡಿತು.

## ಗ್ರಾಮೀಣ ಪ್ರದೇಶಗಳ ಮಾಲೀಕರಿಗೆ ಬಿ ಖಾತಾ

• **ಉದಯವಾಹಿನಿ, ಬೆಂಗಳೂರು**



ಗ್ರಾಮೀಣ ಪ್ರದೇಶಗಳಲ್ಲಿ ಅನಧಿಕೃತ ಲೇಔಟ್‌ಗಳಲ್ಲಿರುವ ಆಸ್ತಿಗಳ ಮಾಲೀಕರಿಗೆ ಒಂದು ಬಾರಿ ಪರಿಹಾರಕ್ಕಾಗಿ ಹೆಚ್ಚುತ್ತಿರುವ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಹೊಸ ಕಾನೂನನ್ನು ರೂಪಿಸಲಾಗುತ್ತಿದ್ದು, ಅಂತಹ ಆಸ್ತಿಗಳಿಗೆ ಬಿ ಖಾತಾ ನೀಡುವ ಯೋಜನೆ ಆರಂಭಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿ ಖಾತಾ ನೀಡುವ ಯೋಜನೆಯನ್ನು ಜುಲೈ ಮಧ್ಯದಲ್ಲಿ ಆರಂಭಿಸಲು ಚಿಂತನೆ ನಡೆಸಲಾಗಿದೆ. ಈ ಉಪಕ್ರಮದಿಂದ 95 ಲಕ್ಷಕ್ಕೂ ಹೆಚ್ಚು ಜನರು ಪ್ರಯೋಜನ ಪಡೆಯುತ್ತಾರೆ.

ಉಪಕ್ರಮದಿಂದ ಸರ್ಕಾರಕ್ಕೆ 000 ಕೋಟಿ ರೂ.ಗಳ ಆದಾಯದ ನಿರೀಕ್ಷೆಯಿದೆ ಎಂದು ಹೇಳಿದರು. ನಮ್ಮ ಇಲಾಖೆಯು 5,770 ಗ್ರಾಮೀಣ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳಾಗಿ ಮೇಲ್ದರ್ಜೆಗೇರಿಸಿದ್ದು, ಅಲ್ಲಿ 50.62 ಲಕ್ಷ ಜನರು ಸದಸ್ಯರಾಗಿ ನೋಂದಾಯಿಸಿಕೊಂಡಿದ್ದಾರೆ. ಗ್ರಾಮ ಪಂಚಾಯತ್ ಮಟ್ಟದಲ್ಲಿ 3,469 ಮಹಿಳೆಯರನ್ನು ಕಸ ಸಂಗ್ರಹಣಾ ವಾಹನಗಳ ಚಾಲಕರಾಗಿ ನೇಮಿಸಲಾಗಿದೆ.

ಮನ್ರೇಗಾ ಅಡಿಯಲ್ಲಿ ಕೆಲಸ ಮಾಡುವ ಯುವ ತಾಯಂದಿರ ಮಕ್ಕಳಿಗಾಗಿ ಇಲಾಖೆಯು 3,888 ಕೂಸಿನಾ ಮನೆ (ಕ್ರೆಚ್‌ಗಳು) ಅನ್ನು ಪ್ರಾರಂಭಿಸಿದೆ. ಒಟ್ಟಾರೆಯಾಗಿ, 53,711 ಮಕ್ಕಳನ್ನು ದಾಖಲಿಸಲಾಗಿದೆ. ಇದರರ್ಥ, 50,000 ಕ್ಕೂ ಹೆಚ್ಚು ಮಹಿಳೆಯರು ಸ್ವಾವಲಂಬಿಗಳಾಗಲು ಕೆಲಸ ಮಾಡಲು ಪ್ರಾರಂಭಿಸಿದ್ದಾರೆ.

## ಅತಿಥಿ ಉಪನ್ಯಾಸಕರಿಗೆ 5 ಲಕ್ಷ ಇಡುಗಂಟು ಸೌಲಭ್ಯ

• **ಉದಯವಾಹಿನಿ, ಬೆಂಗಳೂರು**




ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ 60 ವರ್ಷ ಪೂರೈಸಿದ, ಮರಣ ಹೊಂದಿದ ಅತಿಥಿ ಉಪನ್ಯಾಸಕರಿಗೆ 5 ಲಕ್ಷ ಇಡುಗಂಟು ಸೌಲಭ್ಯ ನೀಡುವುದಾಗಿ ಸರ್ಕಾರ ಆದೇಶಿಸಿದೆ.

**ಕನಿಷ್ಠ 1 ವರ್ಷ ಸೇವೆ ಸಲ್ಲಿಕೆ**

ಇಡುಗಂಟು ಯೋಜನೆಯು 2024ರ ಜನವರಿ 1 ರಿಂದಲೇ ಜಾರಿಗೆ ಬರಲಿದ್ದು, ಕನಿಷ್ಠ 1 ವರ್ಷ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಅಥವಾ ಮರಣ ಹೊಂದಿರುವ ಎಲ್ಲಾ ಅತಿಥಿ ಉಪನ್ಯಾಸಕರಿಗೂ ಯೋಜನೆ ಅನ್ವಯವಾಗಲಿದೆ. ಯೋಜನೆ ಅನುಷ್ಠಾನಕ್ಕೆ ಬಂದ ಹಿಂದಿನ 5 ವರ್ಷಗಳಲ್ಲಿ ಕನಿಷ್ಠ 1 ವರ್ಷ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, 60 ವರ್ಷ ಪೂರ್ಣಗೊಳಿಸಿರುವ ಅತಿಥಿ ಉಪನ್ಯಾಸಕರೂ ಈ ಯೋಜನೆಗೆ ಒಳಪಡಲಿದ್ದಾರೆ.

ಈ ಯೋಜನೆಗೆ ಒಟ್ಟಾರೆ 44.15 ಕೋಟಿ ರೂ. ಹಣವನ್ನು ಸರ್ಕಾರ ಕಾಯ್ದಿರಿಸಿ ಆದೇಶ ಹೊರಡಿಸಿದೆ. ಇದೀಗ ಕಾಲೇಜು ಶಿಕ್ಷಣ, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅತಿಥಿ ಉಪನ್ಯಾಸಕರಿಗೆ ಇಡುಗಂಟು ಸೌಲಭ್ಯ ಅನುಷ್ಠಾನಕ್ಕೆ ಉನ್ನತ ಶಿಕ್ಷಣ ಇಲಾಖೆಯು ಮಾರ್ಗಸೂಚಿ ಪ್ರಕಟಿಸಿದೆ.

## ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಸರ್ಕಾರ ನಿರ್ಧಾರ

• **ಉದಯವಾಹಿನಿ, ಬೆಂಗಳೂರು**

ವಿದ್ಯುತ್ ಸಂಪರ್ಕ ಪಡೆಯಲು ಆಕ್ಯುಪೆನ್ಸಿ ಸರ್ಟಿಫಿಕೇಟ್ ಪಡೆಯಬೇಕೆಂಬ ಆದೇಶವನ್ನು ತೆಗೆದುಹಾಕುವ ಕುರಿತು ಮುಂದಿನ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಹೇಳಿದರು.

ಕೆಪಿಸಿಸಿ ಕಚೇರಿಗೆ ಭೇಟಿ ನೀಡಿ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಿಂದ ಅಹವಾಲುಗಳನ್ನು ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಅನುಸರಿಸಿ ಆಕ್ಯುಪೆನ್ಸಿ ಸರ್ಟಿಫಿಕೇಟ್ ಪಡೆಯ ಬೇಕೆಂಬ ನಿಯಮವನ್ನು ಸರ್ಕಾರ ಕಡ್ಡಾಯಗೊಳಿಸಿದೆ.




ನಿಯಮದಿಂದ ಸಮಸ್ಯೆಗಳು ಎದುರಾಗಿದ್ದು, ಅದನ್ನು ಪರಿಹರಿಸಲು ಕಾನೂನು ತಿದ್ದುಪಡಿಯನ್ನು ಪರಿಗಣಿಸಲಾಗುತ್ತಿದೆ.

ಈ ವಿಷಯವನ್ನು ಇತ್ತೀಚೆಗೆ ಕ್ಯಾಬಿನೆಟ್ ಸಭೆಯಲ್ಲಿ ಚರ್ಚಿಸಲಾಯಿತು, ಅಲ್ಲಿ ಪರಿಹಾರ ಕ್ರಮಗಳ ಬಗ್ಗೆ ವರದಿ ಸಲ್ಲಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿಯವರು ಸೂಚಿಸಿದ್ದಾರೆ, ಅವರು ವರದಿ ಸಲ್ಲಿಸಿದ ಕೂಡಲೇ ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಂಡು ಸಮಸ್ಯೆ ನಿವಾರಿಸಲಾಗುವುದು ಎಂದು ಹೇಳಿದರು.

**ಗೃಹ ಜ್ಯೋತಿ ಯೋಜನೆಯಿಂದ ಸಾಕಷ್ಟು ಅನುಕೂಲವಾಗಿದೆಯಾದರೂ ಬಾಡಿಗೆ ಮನೆ ಬದಲಿಸುವಾಗ ಹಳೆಯ ಆರ್ ಆರ್ ನಂಬರ್‌ಗೆ ಡಿ-ಲಿಂಕ್ ಮಾಡಿ ಹೊಸ ಆರ್ ಆರ್ ನಂಬರ್‌ಗೆ ಲಿಂಕ್ ಮಾಡುವ ವೇಳೆ ಸಮಸ್ಯೆಯಾಗುತ್ತಿದೆ ಎಂಬ ಪಕ್ಷದ ಕಾರ್ಯಕರ್ತರ ಪ್ರಶ್ನೆಗೆ ಉತ್ತರಿಸಿ, ಆನ್‌ಲೈನ್ ಮೂಲಕವೇ ಡಿ-ಲಿಂಕ್ ಮತ್ತು ಲಿಂಕ್ ವ್ಯವಸ್ಥೆ ಮಾಡಲಾಗಿದೆ. ಈ ವಿಚಾರದಲ್ಲಿ ಯಾವುದೇ ಸಮಸ್ಯೆ ಇಲ್ಲ. ಒಂದೊಮ್ಮೆ ನಿರ್ದಿಷ್ಟ ವ್ಯಕ್ತಿಗಳಿಗೆ ಸಮಸ್ಯೆ ಕಾಣಿಸಿಕೊಂಡರೆ ಸಂಬಂಧಿಸಿದ ಅಧಿಕಾರಿಗಳನ್ನು ಭೇಟಿಯಾಗಿ ಸಮಸ್ಯೆ ಬಗೆಹರಿಸಿಕೊಳ್ಳಬಹುದು ಎಂದು ತಿಳಿಸಿದರು.**

# ಐಎಫ್‌ಎಸ್ ಅಧಿಕಾರಿ ಅಮಾನತಿಗೆ ಈಶ್ವರ್ ಖಂಡ್ರೆ ಶಿಫಾರಸು

### ಹೆಚ್‌ಎಂಟಿ ಡಿನೋಟಿಫಿಕೇಷನ್ ಪ್ರಕರಣ , ಸರ್ಕಾರದ ವಿರುದ್ಧ ಮಾಡಿರುವ ಸಂಪೂರ್ಣ ಸುಳ್ಳು ಆರೋಪ

• **ಉದಯವಾಹಿನಿ, ಬೆಂಗಳೂರು**

14 ಸಾವಿರ ಕೋಟಿ ರೂ. ಗೂ ಹೆಚ್ಚು ಮೌಲ್ಯದ ಹೆಚ್‌ಎಂಟಿ ಅರಣ್ಯಭೂಮಿಯ ಡಿನೋಟಿಫಿಕೇಷನ್ ಅನುಮತಿ ಕೋರಿ ಸುಪ್ರೀಂಗೆ ಐಎ ಹಾಕಿರುವ ಪ್ರಕರಣದಲ್ಲಿ ನಿವೃತ್ತ ಐಎಎಸ್, ಐಎಫ್‌ಎಸ್ ಮತ್ತು ಇಬ್ಬರು ಹಾಲಿ ಐಎಫ್‌ಎಸ್ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಶಿಫಾರಸು ಮಾಡಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ, ಪರಿಸರ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.




**ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್**

ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹೆಚ್‌ಎಂಟಿ ವಶದಲ್ಲಿರುವ ಭೂಮಿ, ಅರಣ್ಯೇತರ ಉದ್ದೇಶಕ್ಕೆ ಪರಿವರ್ತನೆ ಆಗಿಲ್ಲ. ಹೀಗಾಗಿ ಸುಪ್ರೀಂಕೋರ್ಟ್ ನೀಡಿರುವ ಹಲವು ತೀರ್ಪು, ಅರಣ್ಯ ಸಂರಕ್ಷಣಾ ಕಾಯಿದೆ 1980ರ ಪ್ರಕಾರ ಇಂದಿಗೂ ಇದು ಅರಣ್ಯವೇ ಆಗಿರುತ್ತದೆ. ಈ ಭೂಮಿ ಪರಭಾರೆ ಆಗಿದೆ. ರಿಯಲ್ ಎಸ್ಟೇಟ್ ಸಂಸ್ಥೆಗಳು ನೂರಾರು ಫ್ಲಾಟ್ ಕಟ್ಟಿದ್ದಾರೆ. ಧಾರಾವಾಹಿ, ಚಲನಚಿತ್ರಗಳ ಚಿತ್ರೀಕರಣ ನಡೆಯುತ್ತಿದೆ. ವಾಣಿಜ್ಯ ಉದ್ದೇಶಕ್ಕೆ ಭೂಮಿ ಬಳಕೆ ಆಗುತ್ತಿದೆ. ಇದಕ್ಕೆ ಹೇಗೆ ಅವಕಾಶ ನೀಡಲಾಗಿದೆ ಎಂಬುದೇ ಪ್ರಶ್ನಾರ್ಥಕವಾಗಿದೆ ಎಂದರು.

ಸಚಿವ ಸಂಪುಟದ ಅನುಮತಿ ಇಲ್ಲದೆ, ಹೆಚ್‌ಎಂಟಿ ಅರಣ್ಯ ಭೂಮಿ ಡಿನೋಟಿಫಿಕೇಷನ್‌ಗೆ ಐಎ ಹಾಕಿರುವ ಪ್ರಕರಣದಲ್ಲಿ ಅಧಿಕಾರಿಗಳಿಗೆ ನೋಟಿಸ್ ನೀಡಿ 7 ತಿಂಗಳಾದರೂ ಇನ್ನೂ ಏಕೆ ಕ್ರಮ ಆಗಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದರು. ಹೆಚ್‌ಎಂಟಿ ವಶದಲ್ಲಿರುವ ಅರಣ್ಯಭೂಮಿ 7 ಕೋಟಿ ಕನ್ನಡಿಗರ ಆಸ್ತಿ, ಇದನ್ನು ಕೆಲವೇ ಕೆಲವು ಅಧಿಕಾರಿಗಳು ಅಂದಿನ ಅರಣ್ಯ ಸಚಿವರ ಗಮನಕ್ಕೂ ತಾರದೆ, ಸಚಿವ ಸಂಪುಟದ ಪೂರ್ವಾನುಮತಿ ಪಡೆಯದೆ ಡಿನೋಟಿಫಿಕೇಷನ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಇಬ್ಬರು ನಿವೃತ್ತ ಮತ್ತು ಇಬ್ಬರು ಹಾಲಿ ಸೇರಿ 4 ಅಧಿಕಾರಿಗಳಿಗೆ ನೋಟಿಸ್ ನೀಡಿದ್ದು, ಕ್ರಮಕ್ಕೆ ತಾವು ಮುಖ್ಯಮಂತ್ರಿಗಳಿಗೆ ಶಿಫಾರಸು ಮಾಡಿರುವುದಾಗಿ ತಿಳಿಸಿದರು. ಅಪರ ಮುಖ್ಯ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ ಆರ್. ಗೋಕುಲ್ ತಾವು ಬೇಲಿಕೇರಿ ಪ್ರಕರಣದಲ್ಲಿ ಆಡಳಿತ ಪಕ್ಷದ ಶಾಸಕರಿಗೆ ಶಿಕ್ಷೆ ಆಗುವಂತೆ ಮಾಡಿದ ಕಾರಣ ತಮ್ಮನ್ನು ಬಲಿ ಪಶು ಮಾಡಲಾಗುತ್ತಿದೆ ಎಂದು ತಿಳಿಸಿ, ರಕ್ಷಣೆ ಕೋರಿ ಸಿಬಿಐಗೆ ಪತ್ರ ಬರೆದಿದ್ದಾರೆ. ಸರ್ಕಾರ ಅಧಿಕಾರಿಗಳನ್ನು ಬಲಿಪಶು ಮಾಡುತ್ತಿದೆಯೇ ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಖಂಡ್ರೆ, ಇದು ಸರ್ಕಾರದ ವಿರುದ್ಧ ಮಾಡಿರುವ ಸಂಪೂರ್ಣ ಸುಳ್ಳು ಆರೋಪ ಎಂದರು. ಹೆಚ್‌ಎಂಟಿ ಅರಣ್ಯ ಭೂಮಿ ಪ್ರದೇಶಕ್ಕೆ ತಾವೇ ಖುದ್ದು ಭೇಟಿ ನೀಡಿದ್ದು, ಅಲ್ಲಿ ಇಂದಿಗೂ 280 ಎಕ್ರೆಯಷ್ಟು ನೆಡುತೋಪು ಇದೆ. ಅದಾಗ್ಯೂ, ಸದರಿ ಭೂಮಿ ಅರಣ್ಯ ಸ್ವರೂಪ ಕಳೆದುಕೊಂಡಿದೆ ಎಂದು ಸುಪ್ರೀಂಕೋರ್ಟ್‌ಗೆ ಸುಳ್ಳು ಮಾಹಿತಿ ನೀಡಿ ಐಎ ಸಲ್ಲಿಸಲಾಗಿದೆ.

ತಮ್ಮ ರಕ್ಷಣೆಗೆ ಸಿಬಿಐಗೆ ಪತ್ರ ಬರೆಯುವ ಅಧಿಕಾರಿ, ಹೆಚ್‌ಎಂಟಿ ಭೂಮಿಯಲ್ಲಿ ಅರಣ್ಯವಿದೆ. ಇದು ಅರಣ್ಯ ಸ್ವರೂಪ ಕಳೆದುಕೊಂಡಿದೆ ಎಂದು ಐಎ ಸಲ್ಲಿಸಲು ಬರುವುದಿಲ್ಲ ಎಂದು ಸಿಎಂಗೆ ಏಕೆ ಪತ್ರ ಬರೆಯಲಿಲ್ಲ ಎಂದು ಪ್ರಶ್ನಿಸಿದರು. ಬೆಂಗಳೂರಿನಲ್ಲಿ ಇತರ ಸಂಸ್ಥೆಗಳ ವಶದಲ್ಲಿರುವ ಅರಣ್ಯಭೂಮಿ ಕುರಿತಂತೆ ಚರ್ಚಿಸಿ ಸರ್ಕಾರಕ್ಕೆ ಶಿಫಾರಸು ಮಾಡಲು 2015ರಲ್ಲೇ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲಾಗಿತ್ತು. ಆ ಸಮಿತಿಯ ಗಮನಕ್ಕೆ ಸಹ ತಾರದೆ, ಸಚಿವ ಸಂಪುಟದ ಅನುಮತಿ ಇಲ್ಲದೆ ಸುಪ್ರೀಂ ಕೋರ್ಟ್‌ನಲ್ಲಿ ಡಿನೋಟಿಫಿಕೇಷನ್ ಅನುಮತಿ ಕೋರಿ 2020ರ ಜೂನ್ 20ರಂದು ಅರ್ಜಿ ಸಲ್ಲಿಸಲಾಗಿದೆ. ಕೇವಲ 25 ದಿನಗಳ ಅಂತರದಲ್ಲಿ ಅಂದರೆ 2020 ಆ. 25ರಂದು ಉನ್ನತ ಮಟ್ಟದ ಸಭೆಯಲ್ಲಿ 1980ರ ಪೂರ್ವದಲ್ಲಿ ವಿವಿಧ/ಸರ್ಕಾರಿ ಸಂಸ್ಥೆಗಳಿಗೆ ಆದ ಪ್ರದೇಶಗಳ ಮಂಜೂರಾತಿಗಳ ಬಗ್ಗೆ ಅಡ್ವೋಕೇಟ್ ಜನರಲ್ ಅವರ ಅಭಿಪ್ರಾಯ ಪಡೆದು ಅಂತಹ ಅರಣ್ಯಪ್ರದೇಶಗಳ ಡಿನೋಟಿಫಿಕೇಶನ್‌ನ ಪ್ರಸ್ತಾವನೆಯನ್ನು ಕ್ಯಾಬಿನೆಟ್ ನಿರ್ಧಾರಕ್ಕಾಗಿ ಸಲ್ಲಿಸಲು ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆರವರಿಗೆ ಸೂಚಿಸಿದೆ' ಎಂಬ ನಿರ್ಣಯ ಮಾಡಲಾಗಿದೆ. ಈ ಬಗ್ಗೆ ಘಟನೋತ್ತರ ಅನುಮತಿ ಪಡೆದಿಲ್ಲ. ಹೀಗಾಗಿ 4 ಅಧಿಕಾರಿಗಳಿಗೆ ನೋಟಿಸ್ ನೀಡಲಾಗಿತ್ತು ಎಂದರು.

**2024ರ ಸೆ. 24ರಂದು ತಾವು ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಲಿಖಿತ ಟಿಪ್ಪಣಿ ಕಳುಹಿಸಿ, ಸಚಿವ ಸಂಪುಟದ ಪೂರ್ವಾನುಮತಿ ಇಲ್ಲದೆ ಐಎ ಹಾಕಿರುವ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಿ ಕ್ರಮ ಜರುಗಿಸುವಂತೆ ಸೂಚಿಸಿದ್ದೇನೆ. ಸೂಚನೆ ನೀಡಿದ 1 ತಿಂಗಳ ನಂತರ ಅ. 2024ರಲ್ಲಿ ಬೇಲಿಕೇರಿ ತೀರ್ಪು ಬಂದಿದೆ. ಆರ್.ಗೋಕುಲ್ ತಮ್ಮ ತಪ್ಪು ಮುಚ್ಚಿಕೊಳ್ಳಲು ಸರ್ಕಾರದ ವಿರುದ್ಧ ಸಿಬಿಐಗೆ ಸುಳ್ಳು ಆರೋಪ ಮಾಡಿ ಪತ್ರ ಬರೆದಿದ್ದಾರೆ. ಇದು ಕೂಡ ಅಧಿಕಾರಿಯ ದುರ್ವರ್ತನೆ ಆಗುತ್ತದೆ ಅಥವಾ ಬೆದರಿಕೆಯ ತಂತ್ರ ಎಂದು ಭಾವಿಸಬಹುದಾಗಿದೆ ಎಂದು ಹೇಳಿದರು.**

**ಬೃಹತ್ ಉದ್ಯಾನ ನಿರ್ಮಾಣ**

**ಹೆಚ್‌ಎಂಟಿ ವಶದಲ್ಲಿರುವ ಅರಣ್ಯ ಭೂಮಿಯಲ್ಲಿ ಉತ್ತರ ಬೆಂಗಳೂರಿನಲ್ಲಿ ಮತ್ತೊಂದು ಬೃಹತ್ ಉದ್ಯಾನ ನಿರ್ಮಾಣ ಮಾಡುವುದು ಸರ್ಕಾರದ ಉದ್ದೇಶವಾಗಿದೆ. ಮುಂದಿನ ಪೀಳಿಗೆಗೆ ಶ್ವಾಸತಾಣ(ಲಂಗ್ಸ್ ಸ್ಪೇಸ್) ಉಳಿಸುವುದು ನಮ್ಮ ಗುರಿಯಾಗಿದೆ. ಈ ಅಂಶವನ್ನು ಐಎ ಹಿಂಪಡೆಯಲು ಸುಪ್ರೀಂಕೋರ್ಟ್‌ಗೆ ಅರ್ಜಿ ಹಾಕುವ ಪೂರ್ವದಲ್ಲೇ ತಾವು ಸ್ಪಷ್ಟಪಡಿಸಿರುವುದಾಗಿ ಹೇಳಿದರು.**

## ಮೈಸೂರಿನಲ್ಲಿ 'ಜನೌಷಧಿ' ಕಿಚ್ಚು – ಆದೇಶ ಹಿಂಪಡೆಯುವಂತೆ ರಾಜ್ಯ ಸರ್ಕಾರಕ್ಕೆ ಬಿಜೆಪಿ ಆಗ್ರಹ

# ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನಕಾರರ ಆಕ್ರೋಶ

• ಉದಯವಾಹಿನಿ, ಮೈಸೂರು

ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಜನೌಷಧಿ ಕೇಂದ್ರಗಳನ್ನು ಮುಚ್ಚಲು ರಾಜ್ಯ ಸರ್ಕಾರ ನಿರ್ಧರಿಸಿರುವುದು ಬಿಜೆಪಿ ತೀವ್ರವಾಗಿ ಖಂಡಿಸಿದ್ದು, ಆ ಹಿನ್ನೆಲೆಯಲ್ಲಿ ಮೇ 30ರಂದು ಮೈಸೂರಿನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಪ್ರತಿಭಟನೆಯಲ್ಲಿ ಶಾಸಕ ಶ್ರೀವತ್ಸ, ಬಿಜೆಪಿ ನಗರಾಧ್ಯಕ್ಷ ಎಲ್ ನಾಗೇಂದ್ರ, ಮಾಜಿ ಉಪಮೇಯರ್ ರೂಪ, ಸೇರಿದಂತೆ ಹಲವರು ಭಾಗಿಯಾಗಿದ್ದರು. ಈ ಪ್ರತಿಭಟನೆಯನ್ನು ಮೈಸೂರು ನಗರ, ಮೈಸೂರು ಗ್ರಾಮಾಂತರ ಬಿಜೆಪಿ ಘಟಕಗಳ ವತಿಯಿಂದ ಆಯೋಜಿಸಲಾಗಿತ್ತು. ಮೈಸೂರಿನ ಕೆ ಆರ್ ಆಸ್ಪತ್ರೆ ಮುಂಭಾಗ ಸೇರಿದ ನಾಯಕರು, ಕಾರ್ಯಕರ್ತರು, ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನಕಾರರ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರ ನೀಡಿರುವ ಆದೇಶ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಶ್ರೀವತ್ಸ, ಜನೌಷಧಿ ಕೇಂದ್ರಗಳನ್ನು ಮುಚ್ಚುವ ಬಗ್ಗೆ ಸರ್ಕಾರ ಸಮರ್ಥನೆ ನೀಡಿದೆ. ಸರ್ಕಾರಿ ಆಸ್ಪತ್ರೆಯಲ್ಲಿ ನಾವು ಉಚಿತವಾಗಿ ನೀಡುತ್ತಿದ್ದೇವೆ ಹಾಗಾಗಿ, ಜನೌಷಧಿ ಕೇಂದ್ರಗಳಿಗೆ ಯಾಕೆ ಹೋಗಬೇಕು ಎಂದು ಸರ್ಕಾರ ಕೇಳುತ್ತಿದೆ. ವಿಧಾನಮಂಡಲ ಅಧಿವೇಶನದಲ್ಲಿಯೂ ಈ ಬಗ್ಗೆ ಸಮರ್ಪಕವಾದ ಉತ್ತರವನ್ನು ಸರ್ಕಾರ ನೀಡಿಲ್ಲ. ಮಾಧ್ಯಮದವರು ಈ ಕುರಿತಂತೆ ಕೇಳಿದರೆ ಆರೋಗ್ಯ ಸಚಿವರು ಉದ್ಧಟತನದ ಹೇಳಿಕೆ ನೀಡ್ತಾರೆ ಎಂದು ಆರೋಪಿಸಿದರು. ಅಲ್ಲದೆ, ಜನೌಷಧಿ ಕೇಂದ್ರ ಬೇಕೇಬೇಕು ಎಂದು ಆಗ್ರಹಿಸಿದರು.

**ಮೋದಿ ಫೋಟೋ ಇರೋದೇ ಕಾರಣ:** ಜನೌಷಧಿ ಕೇಂದ್ರಗಳ ನಾಮಫಲಕಗಳ ಮೇಲೆ ಮೋದಿಯವರ ಭಾವಚಿತ್ರವಿರುವುದು ಕಾಂಗ್ರೆಸ್ಸಿಗರಿಗೆ ಇಷ್ಟವಿಲ್ಲ. ಅದಕ್ಕಾಗಿಯೇ ಜನೌಷಧಿ ಕೇಂದ್ರಗಳನ್ನು ಮುಚ್ಚಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ ಎಂದು ಆರೋಪಿಸಿದ ಅವರು, ಇಂದಿರಾ ಕ್ಯಾಂಟೀನ್‌ನಲ್ಲಿ ಯಾರ ಫೋಟೋ ಹಾಕಿದ್ದೀರಾ. ಸರ್ಕಾರಿ ಬಸ್ ಮೇಲೆ ಯಾಕೆ ಫೋಟೋ ಹಾಕೊಂಡಿದ್ದೀರ



ಉದಯವಾಹಿನಿ ಚಿತ್ರ

ದ್ವೇಷದ ರಾಜಕಾರಣ ಬಿಡಬೇಕು

ಎಂದು ಪ್ರಶ್ನಿಸಿದ ಅವರು, ರಾಜ್ಯ ಸರ್ಕಾರ ದ್ವೇಷದ ರಾಜಕಾರಣ ಬಿಡಬೇಕು. ಬಡವರ ಹೊಟ್ಟೆ ಮೇಲೆ ಒಡೆಯುವ ಕೆಲಸ ಮಾಡಬಾರದು ಎಂದು ಆಗ್ರಹಿಸಿದರು.

**ಸಿಎಂ, ಆರೋಗ್ಯ ಸಚಿವರಿಗೆ ಪತ್ರ:** ಹಾವೇರಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಪ್ರಾರಂಭಿಸಲಾಗಿದ್ದ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರ್ಕಾರ ಹೊರಡಿಸಿದ್ದು ಅದನ್ನು ಕೂಡಲೇ ಹಿಂಪಡೆಯಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಆಗ್ರಹಿಸಿದ್ದಾರೆ. ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಪತ್ರ ಬರೆದಿದ್ದಾರೆ.

**ರಾಜ್ಯ ಸರ್ಕಾರ ಹೇಳೋದೇನು?**

**ಕರ್ನಾಟಕದಲ್ಲಿ ಜನೌಷಧಿ ಕೇಂದ್ರಗಳನ್ನ ಸಂಪೂರ್ಣವಾಗಿ ಸ್ಥಗಿತಗೊಳಿಸಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಸ್ಪಷ್ಟಪಡಿಸಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಔಷಧಿ ನೀಡಲಾಗುತ್ತಿದೆ. ಅದರ ಆವರಣದಲ್ಲೇ ಬೇರೆ ಮಳಿಗೆಗಳಲ್ಲಿ ಔಷಧ ಮಾರಾಟದ ಅಗತ್ಯವಿಲ್ಲ. ಕೇವಲ 180 ಸರ್ಕಾರಿ ಆಸ್ಪತ್ರೆಗಳ ಕೇಂದ್ರಗಳನ್ನ ತೆರವುಗೊಳಿಸುವ ಬಗ್ಗೆ ಚರ್ಚಿಸಲಾಗಿದೆ, ಉಳಿದ 1220 ಕೇಂದ್ರಗಳು ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದ್ದಾರೆ.**

**ರಾಜ್ಯ ಸರ್ಕಾರ ಈ ಆದೇಶವನ್ನು ಕೂಡಲೇ ವಾಪಸ್ ಪಡೆಯಬೇಕು. 1200ಕ್ಕೂ ಹೆಚ್ಚು ಮೆಡಿಸಿನ್‌ಗಳು ಇವೆ. ಇದರಲ್ಲಿ 800ಕ್ಕೂ ಹೆಚ್ಚು ಔಷಧಿಗಳು ಜನ ಔಷಧಿ ಕೇಂದ್ರಗಳಲ್ಲಿ ದೊರೆಯುತ್ತವೆ. ಜನೌಷಧಿ ಕೇಂದ್ರಗಳು ಇರುವುದು ಬಡವರಿಗಾಗಿ. ಹೀಗಾಗಿ ರಾಜ್ಯ ಸರ್ಕಾರ ತನ್ನ ನಿರ್ಧಾರವನ್ನು ಬದಲಿಸಬೇಕು. ಇಲ್ಲವಾದಲ್ಲಿ ನಮ್ಮ ಹೋರಾಟ ಮುಂದುವರೆಸುತ್ತೇವೆ**

**– ಎಲ್ ನಾಗೇಂದ್ರ, ಬಿಜೆಪಿ ಅಧ್ಯಕ್ಷ**

---

# ಡಿಸಿಸಿ ಬ್ಯಾಂಕ್ ಮತ್ತೆ ಕೈ ವಶ: ನಂಜೇಗೌಡ

• ಉದಯವಾಹಿನಿ, ಕೋಲಾರ

ಡಿಸಿಸಿ ಬ್ಯಾಂಕ್‌ನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಮತ್ತೆ ಬರಲಿದೆ, ಕೆಲವು ಕಾರಣಾಂತರಗಳಿಂದ ಮಹಿಳೆಯರಿಗೆ, ರೈತರಿಗೆ ಸಾಲ ವಿತರಣೆ ನಿಂತಿತ್ತು, ಇಂದು ಕಾಂಗ್ರೆಸ್ ಪರವಾಗಿ ಉತ್ತಮ ಫಲಿತಾಂಶ ಬರಲಿದೆ ಇದೆಲ್ಲಾ ಕಾರ್ಯಕ್ರಮಗಳು ಮತ್ತೆ ಆರಂಭವಾಗಲಿದೆ ಎಂದು ಮಾಲೂರು ಕೈ ಶಾಸಕ



ಕೆ.ವೈ.ನಂಜೇಗೌಡ ಭವಿಷ್ಯ ನುಡಿದರು. ನಗರದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿ ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಬ್ಯಾಲಹಳ್ಳಿ ಗೋವಿಂದ ಗೌಡ ಕಾಂಗ್ರೆಸ್ ಅಭ್ಯರ್ಥಿ ಅಲ್ಲ, ನಮ್ಮಲ್ಲಿ ಯಾವುದೇ ಬಣಗಳಿಲ್ಲ ನಮ್ಮದು ಕಾಂಗ್ರೆಸ್ ಬಣ ಅಷ್ಟೆ, ಸಮರ್ಪಕವಾದ ನಿಯಮಾನುಸಾರ ಆಡಳಿತ ನೀಡದೆ ಒನ್ ಮ್ಯಾನ್ ಶೋ ಆದ ಹಿನ್ನೆಲೆ ಇಷ್ಟೆಲ್ಲಾ ಆಗಿದೆ ಎಂದರು. ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಗುಂಪಿಲ್ಲ, ನಮ್ಮದೆ ಪಕ್ಷದ 6 ಜನರು ಅವಿರೋಧ ಆಯ್ಕೆಯಾಗಿದ್ದಾರೆ, ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಬ್ಯಾಲಹಳ್ಳಿ ಗೋವಿಂದಗೌಡ ಕಾಂಗ್ರೆಸ್ ಅಭ್ಯರ್ಥಿ ಅಲ್ಲ, ಅವರ ವಿರುದ್ದ ಇರುವ ಶ್ರೀನಿವಾಸ್ ಪಕ್ಕಾ ಕಾಂಗ್ರೆಸ್ ಅಭ್ಯರ್ಥಿ ಎನ್ನುವ ಮೂಲಕ ಬಣದ ಬಗ್ಗೆ ಸ್ಪಷ್ಟನೆ ನೀಡಿದೆ. ನಮ್ಮದು ಇರುವುದು ಒಂದೇ ಬಣ ಅದು ಕಾಂಗ್ರೆಸ್ ಬಣ ಮಾತ್ರವಷ್ಟೆ ಎಂದು ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಬ್ಯಾಲಹಳ್ಳಿ ಗೋವಿಂದಗೌಡರಿಗೆ ಟಾಂಗ್ ನೀಡಿದರು.

ಸರಿಯಾದ ಆಡಳಿತ ನೀಡದೆ ಒನ್ ಮ್ಯಾನ್ ಶೋ ಆದ ಹಿನ್ನೆಲೆ ಇಷ್ಟೆಲ್ಲಾ ಆಗಿದೆ, ಕೆಲವೆ ದಿನಗಳಲ್ಲಿ ನಾನು ಅನ್ನೋ ಅಹಂಕಾರ ಬಂತು, ಗೋವಿಂದಗೌಡ ಅವರ ಇತಿಹಾಸ ಏನು? ಅವರು ಇಷ್ಟು ದಿನ ಎಲ್ಲಿದ್ರು? ಎಂದು ಪ್ರಶ್ನೆ ಮಾಡಿದ ಅವರು, ಬಂಗಾರಪೇಟೆ ಕೈ ಶಾಸಕ ನಾರಾಯಣಸ್ವಾಮಿಗೆ ತಿರುಗೇಟು ತಿರುಗೇಟು ನೀಡಿದ ಅವರು. ನಮ್ಮದು ಪಟಾಲಂ ಅಲ್ಲ, ಕಾಂಗ್ರೆಸ್ ಪಾರ್ಟಿ, ಸಿದ್ಧಾಂತ, ನಾವೆಲ್ಲಾ ಕಾಂಗ್ರೆಸ್ ಪಕ್ಷವನ್ನ ಕಟ್ಟುವ ನಿಷ್ಠಾವಂತ ಕಾರ್ಯಕರ್ತರು, ನಾನು ಹಿರಿಯ ಶಾಸಕ ಏನು ಮಾತನಾಡಿದರೂ ಯಾರೂ ಪ್ರಶ್ನಿಸುವ ಹಂಗಿಲ್ಲ ಎಂದು ಈ ರೀತಿ ಆಹಂನಿಂದ ಮಾತನಾಡುವುದು ಶೋಭೆ ತರಲ್ಲ ಎಂದು ಹೇಳಿದರು.

ಗೋವಿಂದರಾಜು ಅವರಿಗೆ ಟಿಕೆಟ್ ಕೊಡದೆ ಮೋಸ ಮಾಡಿದ್ದಾರೆ. ಡಿಸಿಸಿ ಬ್ಯಾಂಕ್‌ನಲ್ಲಿ ನಲವಾರು ಹಗರಣಗಳಾಗಿದೆ ಅದನ್ನೆಲ್ಲಾ ನೋಡಿದಾಗ ನನಗೆ ಭಯ ಬಂದಿತ್ತು, ಲೋಕಾಯುಕ್ತರನ್ನ ನಾವು ದುರ್ಬಳಕೆ ಮಾಡಿಕೊಂಡಿಲ್ಲ, ಈ ಹಿಂದೆ ನನ್ನ ವಿರುದ್ದ ಇಡಿ ದಾಳಿಯಾದಾಗ ನಾನು ಇವರ ಹಾಗೆ ಮಾತನಾಡಿಲ್ಲ, ಲೋಕಾಯುಕ್ತ ದಾಳಿಗೆ ರಾಜಕೀಯ ಬಣ್ಣ ಕಟ್ಟುವುದು ಬೇಡ ಅದು ಸರಿ ಅಲ್ಲ, ತಪ್ಪು ಅಂತಲೂ ಹೇಳಲ್ಲ ಎಂದರು.

**ದಲಿತ ಮುಖಂಡರಿಗೆ ಮೋಸ**

**ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ನಾವು ನಾಲ್ಕು ಜನ ಶಾಸಕರು ಆಯ್ಕೆ ಅಗಿದ್ದೀರಿ, ಅವರೆ ಹಿರಿಯರು ಎಂಬುವುದರಲ್ಲಿ ಎರಡನೇ ಮಾತಿಲ್ಲ. ಅದರೆ ಅವರು ನಮ್ಮನ್ನೆಲ್ಲ ಸಂಘಟಿಸಿಕೊಂಡು ಹೊಂದಿಕೊಂಡು ಹೋಗಬೇಕಾಗಿರುವುದು ಅವರ ಜವಾಬ್ದಾರಿಯಾಗಿದೆ, ಆದರೆ ಅವರೆ ಹೇಳುವ ದಲಿತ ಮುಖಂಡರಿಗೆ ಮೋಸ ಮಾಡಿದ್ದಾರೆ.**

---


# ಸಾವಿಗೆ ಪೊಲೀಸರ ವೈಫಲ್ಯ ಕಾರಣ

• ಉದಯವಾಹಿನಿ, ಕೆ.ಆರ್.ಪೇಟೆ

ತಾಲ್ಲೂಕಿನ ಕತ್ತರಘಟ್ಟ ಗ್ರಾಮದಲ್ಲಿ ನಡೆದ ದಲಿತ ಯುವಕನ ಸಾವಿಗೆ ಪೋಲಿಸರ ವೈಫಲ್ಯವೇ ಕಾರಣವಾಗಿದ್ದು, ಇದರ ಹೊಣೆಯನ್ನು ರಾಜ್ಯ ಸರ್ಕಾರವೇ ಹೊರಬೇಕು ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ತಾಲ್ಲೂಕಿನ ಕತ್ತರಘಟ್ಟ ಗ್ರಾಮದಲ್ಲಿ ಅನುಮಾನಸ್ಪದವಾಗಿ ಸಾವನ್ನಪ್ಪಿರುವ ದಲಿತ ರೈತ ಜಯಕುಮಾರ್ ಮನೆಗೆ ಶುಕ್ರವಾರ ಭೇಟಿ ನೀಡಿ ಸಾಂತ್ವನ ಹೇಳಿದ ಬಳಿಕ ಮಾತನಾಡಿದರು.

ಗ್ರಾಮದ ಯುವಕ ಜಯಕುಮಾರ್ ಸಾವು ವಿದ್ರಾವಕ ಘಟನೆಯಾಗಿದ್ದು, ಜಮೀನಿನ ವಿಚಾರವಾಗಿ ಗಲಾಟೆಯಾಗಿದ್ದು, ಜಯಕುಮಾರ್ ಸಾಯುವ ಮುನ್ನಾ ದಿನ ದೂರು ನೀಡಿದ್ದರೂ ಪೊಲೀಸರು ಯಾವುದೇ ಕ್ರಮ ವಹಿಸಲ್ಲ ಹೀಗಾಗಿ ಈ ಕೃತ್ಯ ಕ್ಕೆ ಪೋಲಿಸರೇ ನೇರಕಾರಣರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಕೃತ್ಯದಲ್ಲಿ ಭಾಗಿಯಾಗಿರುವ ಆರೋಪಿಗೆ ಕಠಿಣ ಶಿಕ್ಷೆಯಾಗಬೇಕು. ಪೋಲಿಸ್ ಅಧಿಕಾರಿಗಳ ವಿರುದ್ಧವೂ ಕಠಿಣ ಕ್ರಮವಾಗಬೇಕು. ಇಲ್ಲದಿದ್ದರೆ ನ್ಯಾಯಸಿಗುವವರೆಗೂ ರಾಜ್ಯಮಟ್ಟದಲ್ಲಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದರು. ದಕ್ಷಿಣ ಕನ್ನಡ ಜಿಲ್ಲೆಯ ಸರಣಿ


ಉದಯವಾಹಿನಿ ಚಿತ್ರ

**ಮೃತನ ಪತ್ನಿ ಹೇಳುವ ಹಾಗೆ ಆರೋಪಿಯು ಮೆದೆಗೆ ಪೆಟ್ರೋಲ್ ಹಾಕಿ ಇಬ್ಬರನ್ನು ಕೊಲ್ಲುವುದಾಗಿ ಹೇಳಿದ್ದ. ಅದೇ ರೀತಿಯಲ್ಲಿ ಕೊಲೆಯಾಗಿದೆ. ಇದು ಆತ್ಮಹತ್ಯೆಯಲ್ಲ ಕೊಲೆ. ನಮ್ಮನ್ನು ಕಾಯಲು ನೇಮಿಸಿರುವ ಪೊಲೀಸರೇ ನಡೆಸಿರುವ ಕೃತ್ಯ' ಎಂದು ಆರೋಪಿಸಿದರು,**

ಹತ್ಯೆಗಳ ಬಗ್ಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಇಂತಹ ಕೃತ್ಯಗಳು ಹೆಚ್ಚಾಗಿವೆ. ಇದಕ್ಕೆ ಮುಸ್ಲಿಮರ ಬಗ್ಗೆ ತುಷ್ಟಿಕರಣ ನೀತಿಯೇ ಕಾರಣವಾಗಿದೆ ಎಂದು ಟೀಕಿಸಿದರು.


---

# ತರಗತಿ ಬಹಿಷ್ಕರಿಸಿದ ಶಿಕ್ಷಕರು

• ಉದಯವಾಹಿನಿ, ಯಳಂದೂರು

ತಾಲ್ಲೂಕಿನ ಬಿಳಿಗಿರಿರಂಗನಬೆಟ್ಟದಲ್ಲಿ ಸಮಾಕ ಲ್ಯಾಣ ಇಲಾಖೆ ಅಧೀನದಲ್ಲಿ ನಡೆಯುವ ಕಿತ್ತೂರು ರಾಣಿ ಚನ್ನಮ್ಮ, ಮೊರಾರ್ಜಿ ವಸತಿ ಶಾಲೆ ಪ್ರಾಂಶು ಪಾಲರು, ಶಿಕ್ಷಕರು ಮತ್ತು ನೌಕರರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ತೋಳಿಗೆ ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು.

ವಸತಿ ಶಾಲೆ ನೌಕರರ ಸಂಘದ ಕಾರ್ಯದರ್ಶಿ ಸುನೀಲ್ ಕುಮಾರ್ ಮಾತನಾಡಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ (ಕ್ರೈಸ್) ಶಿಕ್ಷಕರು, ನೌಕರರು ಹಲವು ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಇವರಿಗೆ ತುರ್ತಾಗಿ ನಿರ್ದೇಶನಾಲಯ ರಚಿಸಬೇಕು, ಇಲ್ಲವೇ ಎಸ್ಸಿ–ಎಸ್ಟಿ, ಬಿಸಿ ವಸತಿ ಶಾಲೆಗಳನ್ನು ಸಿಬ್ಬಂದಿಗಳ ಸಮೇತ ಸಂಬಂಧಿಸಿದ ಇಲಾಖೆಗಳ ವಶಕ್ಕೆ ನೀಡಬೇಕು. ಜ್ಯೋತಿ ಸಂಜೀವಿನಿ ಯೋಜನೆ ಅನುಷ್ಠಾನಗೊಳಿಸುವುದು, ಮರಣ, ನಿವೃತ್ತಿ ಉಪದಾನ ಸೌಲಭ್ಯ ಕಲ್ಪಿಸುವುದು, ಮನೆ ಬಾಡಿಗೆ ಕಡಿತ ಶೇ 10 ವಿಶೇಷ ಭತ್ಯೆ ಮಂಜೂರಾತಿಗೆ ಅನುಮೋದನೆ ನೀಡಬೇಕು ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

**ಬೆಂಗಳೂರಿನಲ್ಲಿ 3 ಸಾವಿರ ನೌಕರರು ಪ್ರತಿಭಟನೆ ನಡೆಸಿದ್ದು, ಆಯಾ ಜಿಲ್ಲಾ ವ್ಯಾಪ್ತಿಯ ಶಾಲೆಯಲ್ಲಿ ಮೊದಲ ದಿನ ಕಪ್ಪು ಪಟ್ಟಿ ಧರಿಸಿ ಕರ್ತವ್ಯ ನಿರ್ವಸಲಾಗಿದೆ. 2ನೇ ದಿನ ತರಗತಿ ಬಹಿಷ್ಕಾರ ಮಾಡಲಾಗಿದೆ, ಕೊನೆಯ ದಿನ ಪಾದಯಾತ್ರೆಯಲ್ಲಿ ತೆರಳಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗುತ್ತದೆ. ಮುಂದಿನ ಮೂರು ದಿನಗಳಲ್ಲಿ ಬೇಡಿಕೆ ಈಡೇರದಿದ್ದರೆ ಜೂ.2 ರಿಂದ ಧರಣಿ ಸತ್ಯಾಗ್ರಹ ನಡೆಸಲಾಗುವುದು**

**– ಕುಮಾರಸ್ವಾಮಿ, ಪ್ರಾಂಶುಪಾಲ**


---

# ಹೇಮಾವತಿ ನಾಲಾ ಬಳಿ ರಸ್ತೆ ತಡೆದು ಕೈ ಮುಖಂಡರ ಪ್ರತಿಭಟನೆ

• ಉದಯವಾಹಿನಿ, ಕುಣಿಗಲ್

ತಾಲ್ಲೂಕಿನ ನೀರಾವರಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರವಾಗಿರುವ ಲಿಂಕ್ ಕೆನಾಲ್ ಕಾಮಗಾರಿ ಪೂರ್ಣಗೊಳಿಸಲು ಆಗ್ರಹಿಸಿ ತಾಲ್ಲೂಕಿನ ನೂರಾರು ಕಾಂಗ್ರೆಸ್ ಮುಖಂಡರು ಶುಕ್ರವಾರ ರಾಜ್ಯ ಹೆದ್ದಾರಿ 33ರ ಕುರುಡಿಹಳ್ಳಿ ಹೇಮಾವತಿ ನಾಲಾ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಕೆಪಿಸಿಸಿ ಸದಸ್ಯ ಬೇಗೂರು ನಾರಾಯಣ ಮಾತನಾಡಿ, ತಾಲ್ಲೂಕಿನ ಜನರ ಹೋರಾಟ ಯಾರ ವಿರುದ್ಧವೂ ಅಲ್ಲ. ತಾಲ್ಲೂಕಿನ ಪಾಲಿನ ನೀರನ್ನು ನೇರವಾಗಿ ಹರಿಸಿಕೊಳ್ಳಲು ಮಾತ್ರ.

ತುಮಕೂರು ಜಿಲ್ಲೆಗೆ ಹೇಮಾವತಿ ನೀರಿಗಾಗಿ ನಾಲಾ ಯೋಜನೆಗೆ ತಾಲ್ಲೂಕಿನ ಹುಚ್ಚಮಾಸ್ತಿಗೌಡ, ವೈ.ಕೆ.ರಾಮಯ್ಯ ಸೇರಿದಂತೆ ಜನಪ್ರತಿನಿಧಿಗಳು ಹೋರಾಟದ ಸಮಯದಲ್ಲಿ ತುಮಕೂರು ಜಿಲ್ಲೆಯ ರಾಜಕೀಯ ಪಕ್ಷದ ಮುಖಂಡರು ಲೇವಡಿ ಮಾಡಿದ್ದರು. ನೀರು ಹರಿಯುವ ಸಮಯದಲ್ಲಿ ಯೋಜನೆಯ ವ್ಯಾಪ್ತಿಯಲ್ಲಿಲ್ಲದ ತಾಲ್ಲೂಕಿನ ಜನಪ್ರತಿನಿಧಿಗಳು


ಉದಯವಾಹಿನಿ ಚಿತ್ರ

ತಮಗೂ ಹೇಮಾವತಿ ನೀರು ಬೇಕು ಎಂದು ವಾಮ ಮಾರ್ಗ ಹಿಡಿದು ತೆಗೆದುಕೊಂಡ ಕಾರಣ ತಾಲ್ಲೂಕಿನ ಪಾಲಿನ ನೀರು ಇದುವರೆಗೂ ಹರಿದು ಬಂದಿಲ್ಲ ಎಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜೆಸಿಬಿ ರಾಜಣ್ಣ, ವೈ.ಕೆ.ರಾಮಯ್ಯ ನಂತರ ತಾಲ್ಲೂಕಿನ ನೀರಾವರಿ ಸಮಸ್ಯೆಗಳಿಗೆ ಹೋರಾಟದ ಹಾದಿ ರೂಪಿಸಿದವರು ಮಾಜಿ ಸಂಸದ ಡಿ.ಕೆ.ಸುರೇಶ್, ಶಾಸಕ ರಂಗನಾಥ್. ಸರ್ಕಾರದಿಂದ ಮಂಜೂರಾತಿ ಪಡೆದು ಲಿಂಕ್ ಕೆನಾಲ್ ಕಾಮಗಾರಿ ಪ್ರಾರಂಭವಾಗುವ ಸಮಯದಲ್ಲಿ ರಾಜಕೀಯ ದುರುದ್ದೇಶದಿಂದ ಅಡ್ಡಿಪಡಿಸುತ್ತಿರುವುದು ಸರಿಯಲ್ಲ. ಕಾವೇರಿಕೊಳ್ಳದ ವ್ಯಾಪ್ತಿಯ ಹೇಮಾವತಿ ನೀರು ಮೂಲ ಯೋಜನೆಯಲ್ಲಿ ಇಲ್ಲದ ಮಧುಗಿರಿ, ಚಿಕ್ಕನಾಯಕನಹಳ್ಳಿ ಮತ್ತು ಶಿರಾ ಕಡೆ ಹೋಗುವ ಸಮಯದಲ್ಲಿ ಯಾವುದೇ ವಿರೋಧ ವ್ಯಕ್ತಪಡಿಸದೆ ಸುಮ್ಮನಿದ್ದ ಮುಖಂಡರು ಲಿಂಕ್ ಕೆನಾಲ್ ಕಾಮಗಾರಿಗೆ ಅಡ್ಡಿಪಡಿಸುವುದು ಸರಿಯಲ್ಲ ಎಂದರು.

**25 ವರ್ಷದ ಅನ್ಯಾಯ ಸರಿಪಡಿಸಲು ಶಾಸಕ ಡಾ.ರಂಗನಾಥ್, ಮಾಜಿ ಸಂಸದ ಡಿ.ಕೆ.ಸುರೇಶ್, ಸಚಿವ ಡಿ.ಕೆ. ಶಿವಕುಮಾರ್ ನೇರವಾಗಿ ನೀರನ್ನು ಪಡೆಯಲು ಲಿಂಕ್ ಕೆನಾಲ್ ಯೋಜನೆ ಜಾರಿಗೆ ತಂದಿದ್ದಾರೆ. ಇದನ್ನು ಸಹಿಸದ ಜಿಲ್ಲೆ ಇತರೆ ತಾಲ್ಲೂಕಗಳ ಮುಖಂಡರು ಯೋಜನೆಗೆ ಅಡ್ಡಿಪಡಿಸುತ್ತಿದ್ದಾರೆ. ಉಗ್ರ ಹೋರಾಟ ಮಾಡಿಯಾದರೂ ಲಿಂಕ್ ಕೆನಾಲ್ ಕಾಮಗಾರಿ ಪೂರ್ಣಗೊಳಿಸಿ, ತಾಲ್ಲೂಕಿನ ನೀರಾವರಿ ಸಮಸ್ಯೆಗೆ ಪರಿಹಾರ ಕಂಡು ಕೊಳ್ಳಲಾಗುವುದು ಎಂದರು.**

---

# ಅಮೃತ್ ಯೋಜನೆ ಕಾಮಗಾರಿ; ನಾಗರಿಕರಿಗೆ ಕಿರಿಕಿರಿ

• ಉದಯವಾಹಿನಿ, ಸೋಮವಾರಪೇಟೆ

ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಶುದ್ಧ ಕುಡಿಯುವ ನೀರಿನ ಯೋಜನೆ ಅಮೃತ್ ಯೋಜನೆಯ ಕಾಮಗಾರಿಯಿಂದ ಜನರ ಜೀವಕ್ಕೆ ಎರವಾಗುವ ಆತಂಕ ಎದುರಾಗಿದೆ. ಎಲ್ಲರಿಗೂ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವ ಉದ್ದೇಶದಿಂದ 12 ಕೋಟಿ ವೆಚ್ಚದ ಯೋಜನೆಯನ್ನು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾರಿಗೊಳಿಸಲಾಗಿದೆ.

ಇದರ ಕಾಮಗಾರಿಯನ್ನು ಗುತ್ತಿಗೆದಾರರು ಕಳೆದ 6 ತಿಂಗಳಿನಿಂದಲೂ ಮಾಡುತ್ತಿದ್ದಾರೆ. ಆದರೆ, ವ್ಯವಸ್ಥಿತವಾಗಿ ಕಾಮಗಾರಿ ಮಾಡದಿರುವುದರಿಂದ ಸಾಕಷ್ಟು ಸಮಸ್ಯೆಗಳು ಜನರಿಗೆ ಎದುರಾಗಿವೆ. ಯಾವುದೇ ರಸ್ತೆಗಳಿಗೆ ಹೊದರೂ, ಚೆನ್ನಾಗಿದ್ದ ರಸ್ತೆಗಳನ್ನು ಅಗೆದು, ಪೈಪ್ ಹಾಕಿದ್ದು, ನಂತರ ಅದರ ನಿರ್ವಹಣೆಯನ್ನು ಮಾಡಿಲ್ಲ. ಅವಧಿಗೂ ಮುನ್ನ ಮುಂಗಾರು ಪ್ರಾರಂಭವಾಗಿರುವುದರಿಂದ ಎಲ್ಲೆಡೆ ಗುಂಡಿಗಳು, ಕೆಸರಿನದ್ದೇ ಕಾರುಬಾರಾ


ಉದಯವಾಹಿನಿ ಚಿತ್ರ

ಗಿದ್ದು, ಸಾಕಷ್ಟು ದ್ವಿಚಕ್ರವಾಹನ ಸವಾರರು ಬಿದ್ದು ಗಾಯಗೊಳ್ಳುತ್ತಿದ್ದಾರೆ. ಪಟ್ಟಣದಲ್ಲಿ ಮೊದಲೇ ರಸ್ತೆ ಕಿರಿದಾಗಿದ್ದು, ಎಲ್ಲೆಂದರಲ್ಲಿ ವಾಹನಗಳನ್ನು ನಿಲ್ಲಿಸುತ್ತಾರೆ. ಈಗ ಪೈಪ್ ಅಳವಡಿಸಲು ಗುಂಡಿ ತೆಗೆದಿರುವುದರಿಂದ ಸಮಸ್ಯೆ ಹೆಚ್ಚಾಗಿದೆ. ಭಾರಿ ಮಳೆ ಸುರಿಯುತ್ತಿರುವುದರಿಂದ, ಗುಂಡಿಯಲ್ಲಿ ನೀರು ಹರಿಯುತ್ತಿದ್ದು, ಹಲವೆಡೆ ಬೃಹತ್ ಗುಂಡಿಗಳಾಗಿವೆ. ಕೆಲವಡೆ ಪೈಪ್ ಅಳವಡಿಸಲು ದೊಡ್ಡ ಗುಂಡಿಗಳನ್ನು ತೆಗೆದು, ಹಾಗೆಯೇ ಬಿಟ್ಟಿರುವುದರಿಂದ ವಾಹನ ಸವಾರರು ಬೀಳುತ್ತಿದ್ದಾರೆ. ಆದರೂ, ಗುತ್ತಿಗೆದಾರರು ಸರಿಯಾದ ಕ್ರಮವನ್ನು ತೆಗೆದುಕೊಂಡು ಅಪಾಯವನ್ನು ತಪ್ಪಿಸಲು ಮುಂದಾಗುತ್ತಿಲ್ಲ ಎಂದು ಸ್ಥಳೀಯ ನಿವಾಸಿ ಸತೀಶ್ ದೂರಿದರು.

**ಈಗಾಗಲೆ ಗುತ್ತಿಗೆದಾರರು ಹಾಗೂ ಸಂಬಂಧಿತ ಎಂಜಿನಿಯರ್ ಗಳೊಂದಿಗೆ ಹಲವು ಸಭೆಗಳನ್ನು ಮಾಡಿ ಆದಷ್ಟು ಬೇಗ ಕಾಮಗಾರಿ ಮುಗಿಸುವಂತೆ ತಿಳಿಸಲಾಗಿತ್ತು. ಒಂದು ತಿಂಗಳು ಮಳೆ ಬೇಗ ಪ್ರಾರಂಭವಾಗಿದ್ದು, ಕಾಮಗಾರಿ ಮುಂದುವರೆಸಲು ಸಮಸ್ಯೆಯಾಗಿದೆ. ಒಂದೆರಡು ದಿನಗಳಲ್ಲಿ ಎಲ್ಲಿ ಗುಂಡಿಗಳಾಗಿವೆಯೂ ಅವುಗಳನ್ನು ಮುಚ್ಚಿ ಸಮಸ್ಯೆ ಪರಿಹರಿಸುವಂತೆ ಸೂಚಿಸಲಾಗಿದೆ**

**–ಸತೀಶ್‌ಕುಮಾರ್**
**ಪಂಚಾಯಿತಿ ಮುಖ್ಯಾಧಿಕಾರಿ**

---

# ಜನೌಷಧಿ ಕೇಂದ್ರ ಬಂದ್: ಬಿಜೆಪಿ ಪ್ರತಿಭಟನೆ

• ಉದಯವಾಹಿನಿ, ತುಮಕೂರು

ರಾಜ್ಯದಲ್ಲಿ ಜನೌಷಧಿ ಕೇಂದ್ರ ಮುಚ್ಚುತ್ತಿರುವುದನ್ನು ವಿರೋಧಿಸಿ ಬಿಜೆಪಿ ಮುಖಂಡರು ಕಪ್ಪು ಪಟ್ಟಿ ಧರಿಸಿ ನಗರದ ಜಿಲ್ಲಾ ಆಸ್ಪತ್ರೆ ಎದುರು ಶುಕ್ರವಾರ ಧರಣಿ ನಡೆಸಿದರು. ರಾಜ್ಯದ ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿ, ಆರೋಗ್ಯ ಸಚಿವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಜನೌಷಧಿ ಕೇಂದ್ರಗಳನ್ನು ಮುಚ್ಚುವುದನ್ನು ತಕ್ಷಣ ನಿಲ್ಲಿಸುವಂತೆ ಆಗ್ರಹಿಸಿದರು.

ಶಾಸಕ ಬಿ.ಸುರೇಶ್‌ಗೌಡ, ಬಡವರಿಗೆ ಅತ್ಯಂತ ಕಡಿಮೆ ಬೆಲೆಗೆ ಗುಣಮಟ್ಟದ ಔಷಧಗಳು ಜನೌಷಧಿ ಕೇಂದ್ರಗಳಲ್ಲಿ ಸಿಗುತ್ತಿವೆ. ಇದರಿಂದ ಬಡ ರೋಗಿಗಳಿಗೆ ಅನುಕೂಲವಾಗುತಿತ್ತು. ಇದು ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮವಾಗಿದೆ. ಜನೌಷಧಿ ಕೇಂದ್ರ ಮುಚ್ಚುವ ಆದೇಶವನ್ನು ತಕ್ಷಣ ವಾಪಸ್ ಪಡೆಯಬೇಕು' ಎಂದು ಒತ್ತಾಯಿಸಿದರು.

ಆರೋಗ್ಯ ಸೇವೆ ದುಬಾರಿಯಾಗಿದ್ದು, ಬಡವರಿಗೆ ಕೈಗೆಟುಕುವ ಬೆಲೆಯಲ್ಲಿ ಗುಣಮಟ್ಟದ ಔಷಧ ದೊರಕಿ


ಉದಯವಾಹಿನಿ ಚಿತ್ರ

ಸುವ ಸಲುವಾಗಿ ಜನೌಷಧಿ ಕೇಂದ್ರಗಳನ್ನು ತೆರೆಯಲಾಗಿತ್ತು. ಇವುಗಳನ್ನು ಮುಚ್ಚಲು ಹೊರಟಿರುವ ಕಾಂಗ್ರೆಸ್ ಸರ್ಕಾರ ಬಡ ಜನರ ವಿರೋಧಿಯಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೋದಿ ಅವರ ಜನಪರ ಯೋಜನೆಗಳನ್ನು ದ್ವೇಷಮಾಡಿ ರದ್ದುಪಡಿಸುವ ಮೂಲಕ ಜನರಿಗೆ ಅನ್ಯಾಯ ಮಾಡುತ್ತಿದ್ದಾರೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಬಡಜನರ ಆರೋಗ್ಯದ ಬಗ್ಗೆ ಕಾಳಜಿ ಇಲ್ಲವಾಗಿದೆ ಎಂದು ಆರೋಪಿಸಿದರು.

---

# ಕಮಲ್ ಹಾಸನ್ ಪ್ರತಿಕೃತಿ ದಹಿಸಿ ಕರವೇ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಂಡ್ಯ

ನಟ ಕಮಲ್ ಹಾಸನ್ ಅವರ ಥಗ್ ಲೈಫ್ ಸಿನಿಮಾ ರಾಜ್ಯದಲ್ಲಿ ಬಿಡುಗಡೆಗೆ ಅವಕಾಶ ನೀಡಬಾರದು. ಜೊತೆಗೆ ಕನ್ನಡಿಗರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಕಮಲ್ ಹಾಸನ್ ಅವರ ಪ್ರತಿಕೃತಿ, ಅವರ ಭಾವಚಿತ್ರ ದಹಿಸಿ ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು. ನಗರದ ಜೆ.ಸಿ. ವೃತ್ತದ ಬಳಿ ಜಮಾವಣೆಗೊಂಡ ಕಾರ್ಯಕರ್ತರು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕನ್ನಡ ಭಾಷೆಯು ತಮಿಳು ಭಾಷೆಯಿಂದ ಉಗಮವಾಯಿತು ಎನ್ನುವ ಲಜ್ಜೆಗೇಡಿತನದ ಹೇಳಿಕೆಯನ್ನು ಕಮಲ್ ಹಾಸನ್ ನೀಡಿದ್ದಾರೆ. ಇದು ತಪ್ಪು, ದುರುದ್ದೇಶದ ಹೇಳಿಕೆಯಾಗಿದೆ. ಇದರಿಂದ ಕನ್ನಡಿಗರಿಗೆ ನೋವುಂಟಾಗಿದೆ. ತಕ್ಷಣ ಕನ್ನಡಿಗರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು. ಕಮಲ್ ಹಾಸನ್ ಅವರ ಥಗ್ ಲೈಫ್ ಚಿತ್ರವು ಕರ್ನಾಟದಲ್ಲಿ ಜೂ 5ರಂದು ತೆರೆ ಕಾಣಲಿದ್ದು, ಇದನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ಜೊತೆಗೆ ವಿರೋಧಿಸಿ ಬಿಡುಗಡೆಗೆ ಅವಕಾಶವನ್ನೇ ನೀಡುವುದಿಲ್ಲ. ಕರ್ನಾಟಕದಲ್ಲಿ ಇವರ ಸಿನಿಮಾ ಬಿಡುಗಡೆಗೆ ಅವಕಾಶ ಮಾಡಿಕೊಡಬಾರದು ಎಂಬುದನ್ನು ಆಗ್ರಹಿಸುತ್ತೇವೆ. ಮೊತ್ತೊಮ್ಮೆ ಇಂತಹ ಅಸಂಬದ್ಧ ಹೇಳಿಕೆ ನೀಡುವುದನ್ನು ಕಮಲ್ ಹಾಸನ್ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಕನ್ನಡಿಗರ ಕ್ಷಮೆ ಕೇಳಬೇಕು

---

# ಕೋವಿಡ್ ಸೋಂಕು ಈಗ ಜಿಲ್ಲೆಗೆ ಕಾಲಿಟ್ಟಿದೆ

## ಇಬ್ಬರು ಗರ್ಭಿಣಿಯರಿಗೂ ಸೋಂಕು; ನಿಯಂತ್ರಣ ಕುರಿತು ಸಭೆ ನಡೆಸಿದ ಎಡಿಸಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕೋವಿಡ್ ಸೋಂಕು ಈಗ ಜಿಲ್ಲೆಗೆ ಕಾಲಿಟ್ಟಿದೆ. ಜಿಲ್ಲೆಯಲ್ಲಿ 4 ಮಂದಿಗೆ ಸೋಂಕು ತಗುಲಿದೆ. ಈ ಪೈಕಿ ಗೌರಿಬಿದನೂರು ತಾಲ್ಲೂಕಿನ 7 ತಿಂಗಳ ಗರ್ಭಿಣಿ, ಬಾಗೇಪಲ್ಲಿ ತಾಲ್ಲೂಕಿನ 6 ತಿಂಗಳ ಗರ್ಭಿಣಿ, ಚಿಂತಾಮಣಿ ತಾಲ್ಲೂಕಿನ 17 ವರ್ಷದ ಯುವಕ, ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ 30 ವರ್ಷದ ಮಹಿಳೆಗೆ ಸೋಂಕು ದೃಢವಾಗಿದೆ. ಶುಕ್ರವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ಅಧ್ಯಕ್ಷತೆಯಲ್ಲಿ ಕೋವಿಡ್ ನಿಯಂತ್ರಣ, ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸಭೆ ನಡೆಯಿತು.

ಡಾ.ಎನ್ ಭಾಸ್ಕರ್ ಮಾತನಾಡಿ, ಪರೀಕ್ಷೆಗಾಗಿ ಬೆಂಗಳೂರಿನ ನಿಮ್ಹಾನ್ಸ್ ವೈದ್ಯಕೀಯ ಸಂಸ್ಥೆಗೆ ಜಿಲ್ಲೆಯಿಂದ ಕಳುಹಿಸಿರುವ 13 ಗಂಟಲು ಸ್ರಾವ ಮಾದರಿಗಳಲ್ಲಿ 4 ಕೋವಿಡ್ ಪ್ರಕರಣಗಳು ವರದಿ ಯಾಗಿವೆ. ಕೋವಿಡ್–19 ನಿಯಂತ್ರಣಕ್ಕೆ ಜಿಲ್ಲಾಡಳಿತದ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

2020 ರಿಂದ 2023ರ ವರೆಗೆ 3 ರಿಂದ 5 ಕೋವಿಡ್ ಅಲೆಗಳನ್ನು ಕಂಡಿದ್ದೇವೆ. ಗರ್ಭಿಣಿಯರಲ್ಲಿ, 60 ವರ್ಷ ಮೇಲ್ಪಟ್ಟಿರುವ ಸಕ್ಕರೆ ಕಾಯಿಲೆ, ಬಿ.ಪಿ, ಕಿಡ್ನಿ ತೊಂದರೆ ಇರುವವವರಿಗೆ, ಮಕ್ಕಳಲ್ಲಿ ಹೆಚ್ಚು ಪ್ರಕರಣಗಳು ಕಾಣಿಸಿಕೊಳ್ಳುತ್ತವೆ ಎಂದು ಹೇಳಿದರು. ಆಗಾಗ್ಗೆ ಸೋಪು ಅಥವಾ ನೀರಿನಿಂದ ಕೈ ತೊಳೆಯುವುದನ್ನು ಅಭ್ಯಾಸ ಮಾಡಬೇಕು. ಆಲ್ಕೋಹಾಲ್ ಆಧಾರಿತ ಹ್ಯಾಂಡ್ ರಬ್‌ಗಳನ್ನು ಬಳಸಿ ಕೈಗಳು ಸ್ವಚ್ಛವಾಗಿದ್ದರೂ ಸೋಪು, ನೀರಿನಿಂದ ಕೈ ತೊಳೆಯಬೇಕು. ರೋಗ ಲಕ್ಷಣಗಳು ಕಂಡು ಬಂದಲ್ಲಿ ವೈದ್ಯರನ್ನು ಭೇಟಿ ಮಾಡುವಾಗ ನಿಮ್ಮ ಬಾಯಿ ಮತ್ತು ಮೂಗನ್ನು ಮುಚ್ಚಿಕೊಳ್ಳಲು ಮಾಸ್ಕ್ ಧರಿಸಬೇಕು. ಕೆಮ್ಮುವಾಗ, ಸೀನುವಾಗ ಮಾಸ್ಕ್, ಕರವಸ್ತ್ರ ಉಪಯೋಗಿಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಉಗುಳಬಾರದು ಎಂದು ಸಲಹೆ ನೀಡಿದರು. ರೋಗಲಕ್ಷಣಗಳು, ಚಿಹ್ನೆಗಳಿದ್ದರೆ 24/7 ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆ ಮಾಡಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಕಾಣಿಸಿಕೊಂಡ ಕೋವಿಡ್

**ತೀವ್ರ ಜ್ವರ, ತಲೆ ನೋವು, ನೆಗಡಿ, ಕೆಮ್ಮು, ಉಸಿರಾಟದ ತೊಂದರೆ, ನ್ಯೂಮೋನಿಯಾ, ಆಯಾಸ, ವಾಸನೆ, ರುಚಿ ನಷ್ಟ ರೋಗದ ಲಕ್ಷಣಗಳಾಗಿವೆ, ಸೋಂಕಿತ ವ್ಯಕ್ತಿಯು ಸೀನಿದಾಗ ಕೆಮ್ಮಿದಾಗ, ಸೋಂಕಿತ ವ್ಯಕ್ತಿಯ ಜೊತೆ ನಿಕಟ ಸಂಪರ್ಕದಲ್ಲಿರುವಾಗ, ಸೋಂಕಿತರ ಹಸ್ತ ಲಾಘವ ಮತ್ತು ಮುಟ್ಟುವುದರಿಂದ ಸೋಂಕಿತ ವ್ಯಕ್ತಿಯು ಬಳಸಿದ ವಸ್ತುಗಳನ್ನು ಯಾವುದೇ ರಕ್ಷಣೆ ಇಲ್ಲದೆ ಬಳಸಿದಾಗ, ಸ್ವಚ್ಛಗೊಳಿಸದ ಸುರಕ್ಷಿತವಲ್ಲದ ಕೈಗಳಿಂದ ಕಣ್ಣು, ಮೂಗು, ಬಾಯಿ ಮುಟ್ಟುವುದರಿಂದ ಸೋಂಕು ಹರಡುತ್ತದೆ ಎಂದರು.**

**ಸಾಬೂನಿನಿಂದ ಕೈ ತೊಳೆಯಬೇಕು**

**ಸೋಂಕು ಪೀಡಿತರ ಸಂಪರ್ಕದಿಂದ ದೂರವಿರುವುದು. ಶಂಕಿತ ರೋಗಿಯು ಮನೆಯಲ್ಲಿಯೇ ಪ್ರತ್ಯೇಕವಾಗಿರುವುದು. ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳುವುದು, ಸಾಬೂನಿನಿಂದ ಕೈ ತೊಳೆಯಬೇಕು. ಕೆಮ್ಮುವಾಗ, ಸೀನುವಾಗ ಎಲ್ಲೆಂದರಲ್ಲಿ ಉಗುಳಬಾರದು. ಉಸಿರಾಟದ ತೊಂದರೆ ಆದಲ್ಲಿ ತಕ್ಷಣ ವೈದ್ಯರ ಸಲಹೆ ಪಡೆಯಬೇಕು. ಮಾಂಸ, ಮೊಟ್ಟೆ ಇತ್ಯಾದಿಗಳನ್ನು ಚೆನ್ನಾಗಿ ಬೇಯಿಸಿ ಉಪಯೋಗಿಸಬೇಕು. ಸುರಕ್ಷಿತವಲ್ಲದ ಕಾಡು ಪ್ರಾಣಿ, ಸಾಕು ಪ್ರಾಣಿಗಳನ್ನು ಮುಟ್ಟಬಾರದು ಎಂದು ಸಲಹೆ ನೀಡಿದರು.**

---

## ಮಿನಿ ನ್ಯೂಸ್

### ಕಮಲ್ ಕ್ಷಮೆಯಾಚನೆಗೆ ಆಗ್ರಹ

• ಉದಯವಾಹಿನಿ, ಮಾಲೂರು

ಕನ್ನಡ ಭಾಷೆಯ ಬಗ್ಗೆ ತಮಿಳು ನಟ, ರಾಜಕಾರಣಿ ಕಮಲ್ ಹಾಸನ್ ಅವಹೇಳನಕಾರಿ ಹೇಳಿಕೆ ನೀಡಿರುವುದು, ಕನ್ನಡಿಗರು ಆಕ್ರೋಶ ವ್ಯಕ್ತಪಡಿಸುತ್ತಿದ್ದು ಕೂಡಲೇ ಕ್ಷಮೆಯಾಚಿಸಬೇಕು ಎಂದು ಕರವೇ ಪ್ರವೀಣ್ ಕುಮಾರ್ ಶೆಟ್ಟಿ ಬಣದ ತಾಲ್ಲೂಕು ಕಾರ್ಯಾಧ್ಯಕ್ಷ ಎನ್. ರಾಮಕೃಷ್ಣಪ್ಪ ಆಗ್ರಹಿಸಿದ್ದಾರೆ. ಕನ್ನಡ ಹುಟ್ಟಿದ್ದು ತಮಿಳು ಭಾಷೆಯಿಂದ



ಎಂದು ಹೇಳಿಕೆ ವಾಪಸ್ ಪಡೆಯದಿದ್ದರೆ 'ಥಗ್ ಲೈಫ್ ಸಿನಿಮಾ ಬಿಡುಗಡೆಗೆ ಕರ್ನಾಟಕದಲ್ಲಿ ಯಾವ ಚಿತ್ರಮಂದಿರಲ್ಲಿ ಅವಕಾಶ ಕೊಡುವುದಿಲ್ಲ ಹಾಗೂ 6 ಕೋಟಿ ಕನ್ನಡಿಗರ ಬಳಿ ಕ್ಷಮೆಯಾಚನೆ ಮಾಡಬೇಕು, ಮತ್ತೆ ಇತಂಹ ಹೇಳಿಕೆ ನೀಡುವಾಗ ಎಚ್ಚರಿಕೆಯಿಂದ ಮಾತನಾಡಬೇಕು .ಕಲೆಗೆ ಜಾತಿ ಇಲ್ಲ, ಎಲ್ಲಾ ಭಾಷೆಯ ಕಲಾವಿದರು ಶಾರದೆ ಪುತ್ರತರು ಒಪ್ಪುತ್ತೇವೆ. ಆ ನಿಟ್ಟಿನಲ್ಲಿ ಕಮಲ್ ಹಾಸನ್ ರವರನ್ನು ಮೆಚ್ಚಿದ್ದೇವೆ. ಅಂದ ಮಾತ್ರಕ್ಕೆ ಕನ್ನಡ ತಮಿಳಿನಿಂದ ಹುಟ್ಟಿದೆ ಎಂದ ಅವರ ಮಾತು ಕನ್ನಡಿಗರು ಸಹಿಸುವುದಿಲ್ಲ. ಕನ್ನಡಕ್ಕೆ ಎರಡೂವರೆ ಸಾವಿರ ವರ್ಷದ ಇತಿಹಾಸವಿದೆ. ಕನ್ನಡದ ಬಗ್ಗೆ ಕಮಲ್ ಹಾಸನ್ ನೀಡಿರುವ ಹೇಳಿಕೆಗೆ ಕಾಂಗ್ರೆಸ್, ಬಿಜೆಪಿ ಸೇರಿದಂತೆ ಕನ್ನಡಪರ ಸಂಘಟನೆಗಳು,ಹೋರಾಟಗಾರರು ಆಕ್ರೋಶ ಹೊರಹಾಕಿವೆ. ಜತೆಗೆ ಸಾಮಾಜಿಕ ಜಾಲತಾಣಗಳಲ್ಲೂ ತೀವ್ರ ವಿರೋಧ ವ್ಯಕ್ತವಾಗುತ್ತಿದ್ದು, ಕೂಡಲೇ ಕ್ಷಮೆ ಕೇಳಿ ಇಲ್ಲವಾದಲ್ಲಿ ನಿಮ್ಮ ವಿರುದ್ಧ ಉಗ್ರ ಹೋರಾಟ ಮಾಡ ಬೇಕಾಗುತ್ತದೆ ಎಂದು ಕಿಡಿಕಾರಿದ್ದಾರೆ.

### ಬಿಜೆಪಿಯಿಂದ ಮೌನ ಪ್ರತಿಭಟನೆ

• ಉದಯವಾಹಿನಿ, ತಿಪಟೂರು

ರಾಜ್ಯದಲ್ಲಿ ಜನೌಷಧಿ ಕೇಂದ್ರಗಳನ್ನು ಮುಚ್ಚಿರುವ ರಾಜ್ಯ ಸರ್ಕಾರದ ವಿರುದ್ಧ ತಾಲ್ಲೂಕು ಬಿಜೆಪಿ ಘಟಕದಿಂದ ತಾಲ್ಲೂಕು ಆಸ್ಪತ್ರೆ ಎದುರು ಕಪ್ಪುಪಟ್ಟಿ ಪ್ರದರ್ಶಿಸಿ, ಮೌನ ಪ್ರತಿಭಟನೆ ನಡೆಸಿದರು. ಮಾಜಿ ಸಚಿವ ಬಿ.ಸಿ.ನಾಗೇಶ್ ಮಾತನಾಡಿ, ರಾಜ್ಯ ಸರ್ಕಾರ ಮೊದಲ ದಿನದಿಂದ ಜನವಿರೋಧಿ ಕೆಲಸ ಮಾಡುತ್ತಿದೆ. ಕೇಂದ್ರ ಸರ್ಕಾರ ಮಧ್ಯಮ ಹಾಗೂ ಬಡ ಜನರ ಆರೋಗ್ಯ ಗಮನದಲ್ಲಿಟ್ಟುಕೊಂಡು ಜನೌಷಧಿ ಕೇಂದ್ರಗಳನ್ನು ತೆರೆಯಲಾಗಿತ್ತು. ಆದರೆ ರಾಜ್ಯ ಸರ್ಕಾರ ಸಾರ್ವಜನಿಕ ಆಸ್ಪತ್ರೆಗಳಿಂದ ಕೇಂದ್ರಗಳನ್ನು ತೆಗೆದು ಜನವಿರೋಧಿ ಕೆಲಸ ಮಾಡಿದೆ ಎಂದು ದೂರಿದರು. ರಾಜ್ಯದಲ್ಲಿ ಎಲ್ಲಾ ಅಗತ್ಯ ವಸ್ತುಗಳ ಬೆಲೆಗಳನ್ನು ಹೆಚ್ಚಿಸಿದ್ದು ಈಗಾಗಲೇ ಜನರು ತೊಂದರೆ ಅನುಭವಿಸುತ್ತಿದ್ದಾರೆ. ಇಂತಹ ಕೆಟ್ಟ ನಿರ್ಧಾರಗಳನ್ನು ಸರ್ಕಾರ ಕೈ ಬಿಡಬೇಕಿದೆ. ಇಲ್ಲವಾದಲ್ಲಿ ಮುಂದಿನ ದಿನದಲ್ಲಿ ರಸ್ತೆಗಿಳಿದು ಪತ್ರಿಭಟನೆ ಮಾಡಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಂಗರಾಜು ಮಾತನಾಡಿ, ಸಿದ್ದರಾಮಯ್ಯ ಸರ್ಕಾರ ಆಡಳಿತಕ್ಕೆ ಬಂದ ದಿನದಿಂದ ಜನವಿರೋಧಿ ಆಡಳಿತ ನಡೆಸುತ್ತಿದೆ. ಸರ್ಕಾರ ಆದೇಶ ವಾಪಸ್ ಪಡೆಯಬೇಕು. ಇಲ್ಲವಾದಲ್ಲಿ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದರು.

### ಕೆಜಿಎಫ್ ಮುಖ್ಯ ರಸ್ತೆಯಲ್ಲಿಯೇ ರೌಡಿಗಳ ಬಡಿದಾಟ

• ಉದಯವಾಹಿನಿ, ಕೆಜಿಎಫ್

ರಾಬರ್ಟಸನ್ ಪೇಟೆಯಲ್ಲಿ ಶುಕ್ರವಾರ ಸಂಜೆ ರೌಡಿಗಳು ಮಾರಕಾಸ್ತ್ರದಿಂದ ಹೊಡೆದಾಡಿಕೊಂಡ ಪರಿಣಾಮ ರೌಡಿ ಬರ್ನಾಡ್ ಎಂಬಾತನಿಗೆ ತೀವ್ರ ಗಾಯಗಳಾಗಿವೆ. ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಸಮೀಪ ಸಂಜೆ ರೌಡಿ ಬರ್ನಾಡ್ ಮೇಲೆ ಇತರ ರೌಡಿ ಶೀಟರ್‌ಗಳಾದ ಸಚಿತ್ ಆಲಿಯಾಸ್ ಟಿಪಿಕ್ ಮತ್ತು ಅಭಿ ಮಾರಕಾಸ್ತ್ರದಿಂದ ಹಲ್ಲೆ ನಡೆಸಿದರು. ಈ ಸಂದರ್ಭದಲ್ಲಿ ಪರಸ್ಪರ ಹೊಡೆದಾಟ ನಡೆದಿದೆ.

ನಂತರ ಬರ್ನಾಡ್ ತಲೆ ಮತ್ತು ದೇಹದ ಇತರ ಭಾಗಗಳಿಗೆ ತೀವ್ರ ಗಾಯಗಳಾಗಿವೆ. ನಗರದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ, ನಂತರ ಕೋಲಾರದ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗೆ ಸಾಗಿಸಲಾಗಿದೆ. ಹಲ್ಲೆ ನಡೆಸಿದ ಇಬ್ಬರು ಆರೋಪಿಗಳು ನಾಪತ್ತೆಯಾಗಿದ್ದಾರೆ. ರಾಬರ್ಟಸನ್‌ಪೇಟೆ ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

### ಒಕ್ಕಲಿಗ ವಧು-ವರರ ಸಮಾವೇಶ ಜೂನ್ 1ರಂದು

• ಉದಯವಾಹಿನಿ, ಮೈಸೂರು



ಇಲ್ಲಿನ ಜಯನಗರದ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಮರು ಳೇಶ್ವರ ಸಭಾಭವನದಲ್ಲಿ ಜೂ. 1ರಂದು ಬೆಳಿಗ್ಗೆ 9ರಿಂದ ಒಕ್ಕಲಿಗ ವಧು–ವರರ ಸಮಾವೇಶವನ್ನು ಉಚಿತವಾಗಿ ಆಯೋಜಿಸಲಾಗಿದೆ. ಆಸಕ್ತರು ನೋಂದಾಯಿಸಿಕೊಂಡು ಭಾಗವಹಿಸಬಹುದು.

ನೋಂದಾಯಿಸಿದವರಿಗೆ 200ಕ್ಕೂ ಹೆಚ್ಚಿನ ಫೈಲ್‌ಗಳನ್ನು ನೋಡಲು ಅವಕಾಶ ಕಲ್ಪಿಸಲಾಗುವುದು. ಹೆಚ್ಚಿನ ಮಾಹಿತಿಗೆ ಮೊ.ಸಂ. 94834 53005 ಸಂಪರ್ಕಿಸಬಹುದು ಎಂದು ಅಧ್ಯಕ್ಷ ಡಿ. ರವಿಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹುಲಿ ದಾಳಿ: ಎರಡು ಹಸು ಸಾವು

• ಉದಯವಾಹಿನಿ, ಗುಂಡ್ಲುಪೇಟೆ

ಹುಲಿ ದಾಳಿಗೆ ಸಿಲುಕಿ ಎರಡು ಹಸುಗಳು ಸಾವನ್ನಪ್ಪಿರುವ ಘಟನೆ ತಾಲ್ಲೂಕಿನ ಕುಂದಕೆರೆ ಗ್ರಾಮದ ಶುಕ್ರವಾರ ನಡೆದಿದೆ. ಕುಂದಕೆರೆ ಗ್ರಾಮದ ಪಿ.ನಾಗಮಲ್ಲಪ್ಪ ಹಸು ಕಳೆದುಕೊಂಡ ರೈತ. ಇವರು ಜಮೀನಿನಲ್ಲಿ ನಾಲ್ಕು ಹಸುಗಳನ್ನು ಮೇಯಲು ಬಿಟ್ಟಿದ್ದರು. ಈ ವೇಳೆ ಗುಡಿಕೆರೆ ಕಡೆಯಿಂದ ಬಂದ ಹುಲಿ ಹಸುಗಳ ಮೇಲೆ ದಾಳಿ ನಡೆಸಿದೆ. ಎರಡು ಹಸಗಳು ತಮ್ಮ ಬಳಿಗೆ ಓಡಿಕೊಂಡು ಬಂದ ಕಾರಣ ಏನಾಯಿತೆಂದು ನೋಡಲು ಹೋದಾಗ ಹುಲಿ ಒಂದು ಹಸುವಿನ ಕತ್ತಿನ ಭಾಗ ಕಚ್ಚುತ್ತಿರುವುದನ್ನು ಕಂಡು ಕೂಗಿಕೊಂಡಿದ್ದಾರೆ. ಇದರಿಂದ ಹುಲಿ ಅಲ್ಲಿಂದ ಕಾಲ್ಕಿತ್ತಿದೆ. ಸುತ್ತಲಿನ ರೈತರು ರಕ್ಷಣೆಗೆ ಬಂದರೂ ಪ್ರಯೋಜನವಾಗಿಲ್ಲ. ಮೃತಪಟ್ಟ ಎರಡು ಹಸುಗಳು ಗರ್ಭಧರಿಸಿದ್ದವು. ವಾರದಲ್ಲಿ ಕರು ಹಾಕುವ ಹಂತದಲ್ಲಿದ್ದವು.

ಹುಲಿ ದಾಳಿಯ ವಿಷಯ ತಿಳಿಸಿದ ಹಿನ್ನೆಲೆಯಲ್ಲಿ ಕುಂದಕೆರೆ ಅರಣ್ಯ ವಲಯದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆಯಿಂದ ರೈತ ನಾಗಮಲ್ಲಪ್ಪ ಅವರಿಗೆ ನಷ್ಟವಾಗಿದೆ. ಆದ್ದರಿಂದ ಅರಣ್ಯ ಇಲಾಖೆಯವರು ಕೂಡಲೇ ನಷ್ಟ ತುಂಬಿಕೊಡುವ ಮೂಲಕ ಹೈನುಗಾರಿಕೆ ಮುಂದುವರಿಸಲು ಅವಕಾಶ ಮಾಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಅಂತರಾಳದಿಂದ... EDITORIAL

# ಶಾಲೆಗಳಲ್ಲಿ ಶಿಕ್ಷಕರ ಕೊರತೆ
## ಬೇಕಿದೆ ಶಾಶ್ವತ ಪರಿಹಾರ



ಶಿಕ್ಷಕರ ತೀವ್ರ ಕೊರತೆಯನ್ನು ನೀಗಿಸಲು 2025–26ನೇ ಶೈಕ್ಷಣಿಕ ವರ್ಷಕ್ಕೆ 51 ಸಾವಿರ ಅತಿಥಿ ಶಿಕ್ಷಕರನ್ನು ನೇಮಿಸಲಾಗುವುದು ಎಂದು ಕರ್ನಾಟಕದ ಶಿಕ್ಷಣ ಇಲಾಖೆಯು ತಿಳಿಸಿದೆ. ಈ ನೇಮಕಾತಿ ಪೂರ್ಣಗೊಂಡಲ್ಲಿ ಇದು ಈವರೆಗಿನ ಗರಿಷ್ಠ ಸಂಖ್ಯೆಯ ನೇಮಕವಾಗಲಿದೆ. ಮೇಲ್ನೋಟಕ್ಕೆ ಇದು ಸ್ವಾಗತಾರ್ಹ ಮತ್ತು ದೀರ್ಘಾವಧಿ ಬಿಕ್ಕಟ್ಟಿಂದಕ್ಕೆ ತಕ್ಷಣದ ಪ್ರತಿಸ್ಪಂದನ ಎಂಬಂತೆ ಕಾಣಿಸುತ್ತಿದೆ. ಆದರೆ, ಈ ಸಂಖ್ಯೆಯನ್ನು ಗಣನೆಗೆ ತೆಗೆದುಕೊಂಡರೆ, ಗುಣಮಟ್ಟದ ಶಿಕ್ಷಣಕ್ಕೆ ಸಂಬಂಧಿಸಿ ಸರ್ಕಾರದ ಯೋಜನೆ, ಆದ್ಯತೆಗಳು, ಬದ್ಧತೆಯ ಕುರಿತು ಹಲವು ಕಠಿಣ ಪ್ರಶ್ನೆಗಳು ಎದುರಾಗುತ್ತವೆ. ಮೊದಲನೆಯದಾಗಿ, 50 ಸಾವಿರಕ್ಕೂ ಹೆಚ್ಚು ಶಿಕ್ಷಕರ ಹುದ್ದೆಗಳನ್ನು ಖಾಲಿ ಬಿಟ್ಟಿರುವಂತಹ ಸನ್ನಿವೇಶವನ್ನು ನಾವು ಸೃಷ್ಟಿ ಮಾಡಿಕೊಂಡಿದ್ದಾದರೂ ಏಕೆ? ಅಲ್ಪಾವಧಿಯಲ್ಲಿ ಅತ್ಯಗತ್ಯವಾದ ಈ ನೇಮಕವು ವ್ಯವಸ್ಥೆಯ ವೈಫಲ್ಯಕ್ಕೆ ಕಣ್ಣಿಗೆ ಕುಕ್ಕುವ ಉದಾಹರಣೆಯಾಗಿದೆ.

ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವುದು ಸಮಸ್ಯೆಗೆ ಇರುವ ತುರ್ತು ಸ್ಪಂದನವೇ ವಿನಾ ಶಾಶ್ವತ ಪರಿಹಾರವಲ್ಲ. ಇಷ್ಟೊಂದು ಹುದ್ದೆಗಳನ್ನು ಖಾಲಿ ಬಿಟ್ಟಿರುವುದು ಆಡಳಿತ ವ್ಯವಸ್ಥೆಯು ಎಷ್ಟೊಂದು ನಿರ್ಲಕ್ಷ್ಯದಿಂದ ಇದೆ ಎಂಬುದಕ್ಕೆ ಕನ್ನಡಿ ಹಿಡಿಯುತ್ತದೆ.

**ಕಾಯಂ ಶಿಕ್ಷಕರ ನೇಮಕ ಆಗುವವರೆಗೆ ಅಥವಾ ಈ ಶೈಕ್ಷಣಿಕ ವರ್ಷದ ಕೊನೆಯವರೆಗೆ ಮಾತ್ರ ಈ ಅತಿಥಿ ಶಿಕ್ಷಕರು ಕೆಲಸದಲ್ಲಿ ಇರುತ್ತಾರೆ. ಅದಾದ ಬಳಿಕ ಅವರು ಏನು ಮಾಡಬೇಕು? ತಾತ್ಕಾಲಿಕ ಕೆಲಸವು ಮುಂದೊಂದು ದಿನ ಕಾಯಂ ಆಗಬಹುದು ಎಂಬ ನಿರೀಕ್ಷೆಯಲ್ಲಿ ಈ ಅತಿಥಿ ಶಿಕ್ಷಕರು ಉತ್ತಮ ವೇತನ ನೀಡುವ ಖಾಸಗಿ ಶಾಲೆಗಳ ಬದಲಿಗೆ ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳುತ್ತಾರೆ. ದುರದೃಷ್ಟವೆಂದರೆ, ಅತಿಥಿ ಶಿಕ್ಷಕರ ಈ ನಿರೀಕ್ಷೆ ಸಾಕಾರವಾದ ನಿದರ್ಶನಗಳು ಈಚಿನ ವರ್ಷಗಳಲ್ಲಂತೂ ಇಲ್ಲ. ಹಲವು ವರ್ಷ ಅತಿಥಿ ಶಿಕ್ಷಕರಾಗಿ ಕೆಲಸ ಮಾಡಿದವರು ಕಾಯಂ ಶಿಕ್ಷಕರ ನೇಮಕವಾದ ಕೂಡಲೇ ಕೆಲಸ ಕಳೆದುಕೊಳ್ಳಬೇಕಾಗುತ್ತದೆ. ಇವರಲ್ಲಿ ಹಲವರಿಗೆ ನಿಗದಿತ ವಿದ್ಯಾರ್ಹತೆ ಇರುವುದಿಲ್ಲ.**

ಹಲವು ವರ್ಷ ಬೋಧನೆಯ ಕೆಲಸ ಮಾಡಿದವರಿಗೆ ಹೊಸ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ವಯೋಮಿತಿ ಅಡ್ಡ ಬರುತ್ತದೆ. ಪರ್ಯಾಯ ಕೆಲಸವನ್ನು ಹುಡುಕಿಕೊಳ್ಳುವುದಕ್ಕೂ ವಯಸ್ಸು ತೊಡಕಾಗುತ್ತದೆ. ಆದರೆ, ಇಂತಹ ತಾತ್ಕಾಲಿಕ ನೀತಿಯು ಶಿಕ್ಷಣದ ಮೇಲೆ ಪ್ರತಿಕೂಲ ಪರಿಣಾಮವನ್ನು ಬೀರುತ್ತದೆ. ಅತಿಥಿ ಶಿಕ್ಷಕರು ಮಾತ್ರವಲ್ಲದೆ ಅವರ ಮೇಲೆ ಅವಲಂಬಿತರಾಗಿರುವ ವಿದ್ಯಾರ್ಥಿಗಳ ಮೇಲೆಯೂ ಈ ವ್ಯವಸ್ಥೆಯು ಕೆಟ್ಟ ಪರಿಣಾಮ ಬೀರುತ್ತದೆ. ಪರಿಶಿಷ್ಟ ಜಾತಿಯ ಒಳಮೀಸಲು ವರ್ಗೀಕರಣವು ಪೂರ್ಣಗೊಂಡ ಬಳಿಕ ಕಾಯಂ ನೇಮಕಾತಿ ನಡೆಯಲಿದೆ ಎಂದು ಸರ್ಕಾರ ಹೇಳಿಕೊಂಡಿದೆ. ಅದಕ್ಕಾಗಿ ಎಷ್ಟು ಸಮಯ ಕಾಯಬೇಕು? ನೇಮಕಾತಿ ಎಂಬುದು ನಿರಂತರವಾಗಿ ತಡೆಯಿಲ್ಲದೆ ನಡೆಯಬೇಕಾದ ಪ್ರಕ್ರಿಯೆಯೇ ಹೊರತು ಹುದ್ದೆಗಳು ಖಾಲಿ ಉಳಿದು ಬಿಕ್ಕಟ್ಟು ಎದುರಾದಾಗ ನಡೆಸುವ ಹೋರಾಟ ಅಲ್ಲ. ಆಡಳಿತಾತ್ಮಕ ಅದಕ್ಷತೆ ಮತ್ತು ರಾಜಕೀಯ ಇಚ್ಛಾಶಕ್ತಿಯ ಕೊರತೆಯು ಶಿಕ್ಷಣದಂತಹ ಮಹತ್ವದ ಕ್ಷೇತ್ರದ ಮೇಲೆ ಬೀರುವ ಪರಿಣಾಮಕ್ಕೆ ದೊಡ್ಡ ಬೆಲೆ ತೆರಬೇಕಾಗುತ್ತದೆ. ದತ್ತಾಂಶಗಳು ದಿಗಿಲುಗೊಳಿಸುವ ರೀತಿಯಲ್ಲಿವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 20,875 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಕಲಬುರಗಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತೀರ್ಣ ಪ್ರಮಾಣವು ಕೇವಲ ಶೇ 42.43ರಷ್ಟಿದೆ ಎಂಬುದು ಆಶ್ಚರ್ಯ ಹುಟ್ಟಿಸಲು ಕಾರಣವೇ ಇಲ್ಲ. ರಾಜ್ಯದಾದ್ಯಂತ ಸರ್ಕಾರಿ ಶಾಲೆಗಳಲ್ಲಿನ ಉತ್ತೀರ್ಣ ಪ್ರಮಾಣವು ಶೇ 62.07ರಷ್ಟು ಇದೆ. ಆದರೆ, ಸಮಾಜ ಕಲ್ಯಾಣ ಇಲಾಖೆ ಅಧೀನದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ (ಕೆಆರ್‌ಇಐಎಸ್) ನಡೆಸುವ ಶಾಲೆಗಳು ಶೇ 91ರಷ್ಟು ಫಲಿತಾಂಶ ಪಡೆದು ಅಚ್ಚರಿ ಮೂಡಿಸಿವೆ. ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣವು ಮಕ್ಕಳ ಭವಿಷ್ಯಕ್ಕೆ ಅಡಿಪಾಯ ಹಾಕುತ್ತವೆ. ಹಾಗಾಗಿ, ಕರ್ನಾಟಕ ಸರ್ಕಾರವು ವಿದ್ಯಾರ್ಥಿಗಳ ಭವಿಷ್ಯವನ್ನು ಉಜ್ವಲಗೊಳಿಸುವ ವಿಚಾರದಲ್ಲಿ ಗಂಭೀರವಾಗಿದ್ದರೆ, ತಾತ್ಕಾಲಿಕ ಪರಿಹಾರಗಳ ಆಚೆಗಿನ ದಾರಿ ಹುಡುಕಿಕೊಳ್ಳಬೇಕು.

ಅಗತ್ಯ ವಿದ್ಯಾರ್ಹತೆ ಇರುವ ಕಾಯಂ ಶಿಕ್ಷಕರನ್ನು ನೇಮಿಸುವುದು ಮಾತ್ರ ಇಲ್ಲಿ ಇರುವ ಪರಿಹಾರ. ರಾಜ್ಯ ಸರ್ಕಾರವು ಗಟ್ಟಿ ನಿರ್ಧಾರ ಕೈಗೊಂಡು ನೇಮಕಾತಿಗೆ ವೇಗ ತುಂಬಬೇಕು. ಶಿಕ್ಷಕರಿಗೆ ತರಬೇತಿ ನೀಡಿ ಶಾಲೆಗಳಲ್ಲಿ ಸ್ಥಿರತೆ ಇರುವಂತೆ ನೋಡಿಕೊಳ್ಳಬೇಕು. ಮಕ್ಕಳಿಗೆ ಅರೆ ಬರೆ ಶಿಕ್ಷಣ ವ್ಯವಸ್ಥೆ ಬೇಕಾಗಿಲ್ಲ. ವಿದ್ಯಾರ್ಥಿಗಳ ಭವಿಷ್ಯವನ್ನು ಬೆಳಗಬಲ್ಲ ರೀತಿಯ ಶಿಕ್ಷಣ ವ್ಯವಸ್ಥೆಯನ್ನು ರೂಪಿಸುವುದು ರಾಜ್ಯ ಸರ್ಕಾರದ ಹೊಣೆಗಾರಿಕೆಯಾಗಿದೆ.

# ರಾಮಾಯಣ



## ದಶರಥ ರಾಯನ ಶರೀರವನ್ನು ಎಣ್ಣೆಯ ಕೊಪ್ಪರಿಗೆಯಲ್ಲಿ ಇಟ್ಟಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ನಾವು ನೀನೂ ಇಲ್ಲದೆ ಶ್ರೀರಾಮನೂ ಇಲ್ಲದೆ ದುಃಖವನ್ನು ಪಡೆದು ಕೈಕೇಯಿಯ ನಿಷ್ಟುರವಚನಗಳಿಗೆ ಒಳಗಾಗಿ ಹೇಗೆ ಬದುಕುವೆವು ಕೈಕೇಯಾದೇವಿಯು ನಿನ್ನನ್ನು ತಿರಸ್ಕರಿಸಿ ಸೀತಾಲಕ್ಷ್ಮಣರ ಸಮೇತನಾದ ಶ್ರೀರಾಮನನ್ನು ಹೊರಡಿಸಿದಳು ಎಂದು ಹಂಬಲಿಸುತ್ತಿದ್ದರು. ಆಗ ಅಯೋಧ್ಯಾಪಟ್ಟಣವು ನಕ್ಷತ್ರಗಳಿಲ್ಲದ ಆಕಾಶವುಳ್ಳ ರಾತ್ರಿಯಂತೆಯೂ ಪತಿಯಿಲ್ಲದ ಸ್ತ್ರೀಯಂತೆಯೂ ಕಾಣಿಸುತ್ತಿತ್ತು. ಎಲ್ಲಿ ನೋಡಿದರೂ ಹಾ ದಶರಥರಾಯ ಎಂದು ಹಂಬಲಿಸಿ ರೋದನ ಮಾಡುತ್ತಿದ್ದ ಸ್ತ್ರೀಯರುಳ್ಳ ಶೂನ್ಯವಾದ ಚೌಬೀದಿಗಳುಳ್ಳ, ಆ ಪಟ್ಟಣವು ಭಯಂಕರವಾಗಿತ್ತು. ಆ ಸಮಯದಲ್ಲಿ ಸೂರ್ಯನು ಅಸ್ತಂಗತನಾಗಲು ರಾತ್ರಿಯಾಯಿತು. ದಶರಥರಾಯನ ಆಪ್ತಮಿತ್ರರು ಆತನ ಮಕ್ಕಳು ಹೊರತು ಮತ್ತೊಬ್ಬರು ಆತನಿಗೆ ಅಗ್ನಿ ಸಂಸ್ಕಾರವನ್ನು ಮಾಡಬಾರದೆಂದು ನಿಶ್ಚಯಿಸಿ ಆ ರಾಯನ ಶರೀರವನ್ನು ತೈಲದ ಕೊಪ್ಪರಿಗೆಯಲ್ಲಿಟ್ಟು ಆ ಕೊಪ್ಪರಿಗೆ ಸಹಿತವಾಗಿ ಮಂಚದ ಮೇಲಿರಿಸಿದರು. ಆ ಸಮಯದಲ್ಲಿ ಸೂರ್ಯ ಪ್ರಭೆಯಿಲ್ಲದ ಆಕಾಶದಂತೆಯೂ, ನಕ್ಷತ್ರಗಳಿಲ್ಲದ ರಾತ್ರಿಯಂತೆಯೂ ಆ ನಗರವು ಮಂಕಾಗಿ ಪ್ರಕಾಶಿಸಲಿಲ್ಲ. ಎಲ್ಲಿ ನೋಡಿದರೂ ಪುರಜನಗಳು ಕೈಕೇಯಿದೇವಿಯನ್ನು ಬೈದು ಶಪಿಸುತ್ತ ರೋದನಮಾಡುತ್ತಿದ್ದರು. ಆಗ ರಾಜನ ಮರಣದಿಂದ ಜನರೆಲ್ಲರೂ ಶೋಕಪೀಡಿತರಾಗಿ ಅಶಾಂತರಾದರು.

**ದಶರಥನ ಪುರೋಹಿತ ಪ್ರಧಾನರು ಮಂತ್ರಾಲೋಚನೆ ಮಾಡಿದ್ದು :** ಈ ಪ್ರಕಾರದಲ್ಲಿ ಎಲ್ಲಿ ನೋಡಿದರೂ ರೋದನಮಾಡುತ್ತಿದ್ದ ಜನಸಮೂಹದಿಂದ ಕೂಡಿದ್ದ ಮಾರನೆಯ ರಾತ್ರಿಯು ಕಳೆದು ಸೂರ್ಯೋದಯವಾಯಿತು. ಆಗ ರಾಜಕಾರ್ಯವನ್ನು ನಿರ್ವಹಿಸತಕ್ಕ ಮಾರ್ಕಂಡೇಯ, ಮೌಲ್ಯ, ವಾಮದೇವ, ಕಾಶ್ಯಪ, ಕಾತ್ಯಾಯನ, ಗೌತಮ, ಜಾಬಾಲಿ ಮೊದಲಾದ ಋಷಿಗಳು ವಸಿಷ್ಠ ಮುನೀಶ್ವರರನ್ನು ಮುಂದಿಟ್ಟುಕೊಂಡು ಅರಮನೆಗೆ ಬಂದು ಪ್ರಧಾನಿಗಳನ್ನು ಕಂಡರು. ಅನಂತರ ಅವರೆಲ್ಲರೂ ವಸಿಷ್ಠರನ್ನು ಕುರಿತು ಹೀಗೆಂದರು : ವಸಿಷ್ಟರೆ, ಈ ಒಂದು ರಾತ್ರಿ ಅತ್ಯಂತ ದುಃಖಾತಿಶಯದಿಂದ ನೂರು ವರ್ಷಗಳಂತೆ ಕಳೆಯಿತು. ದಶರಥರಾಯನು ಸ್ವರ್ಗಸ್ಥನಾದನು. ಇನ್ನು ಮುಂದೆ ನಡೆಯುವ ಕೃತ್ಯಗಳನ್ನು ನಡೆಯಿಸಬೇಕು. ಶ್ರೀರಾಮಲಕ್ಷ್ಮಣರು ವನವಾಸಕ್ಕೆ ಹೋದರು. ಭರತಶತ್ರುಘ್ನರು ಕೇಶಯದೇಶದಲ್ಲಿ ತಮ್ಮ ಸೋದರಮಾವನ ಮನೆಯಲ್ಲಿದ್ದಾರೆ. ಇಕ್ಷ್ವಾಕುವಂಶದ ಸಂಸ್ಥಾನಕ್ಕೆ ಪಟ್ಟವನ್ನು ಕಟ್ಟಿ ಒಬ್ಬನನ್ನು ನಿಲ್ಲಿಸಬೇಕು. ಇಲ್ಲದ ಪಕ್ಷದಲ್ಲಿ ಒಡೆಯನಿಲ್ಲದೆ ರಾಜ್ಯವು ಕೆಡುವುದು. ಅರಸನಿಲ್ಲದ ರಾಜ್ಯದಲ್ಲಿ ವರುಣನು ಮಳೆಗರೆಯನು. ಮಳೆಯಿಲ್ಲದಿದ್ದರೆ ಕೃಷಿಯಾಗದು. ರಾಜ್ಯದಲ್ಲಿ ಅರಸನಿಲ್ಲದಿದ್ದರೆ ಮಕ್ಕಳು ತಾಯಿತಂದೆಗಳ ಮಾತನ್ನು ಕೇಳರು. ಸ್ತ್ರೀಯರು ಪುರುಷರ ಮಾತನ್ನು ಕೇಳರು.


ಅರಸನಿಲ್ಲದ ರಾಜ್ಯದಲ್ಲಿ ಧನವು ನಿಲ್ಲದು. ಸ್ತ್ರೀಯರು ಸದ್ವರ್ತನದಲ್ಲಿ ನಡೆಯರು. ಶ್ರೀರಾಮನು ವನವಾಸಕ್ಕೆ ಹೋಗಿ ದಶರಥರಾಯನೂ ಸ್ವರ್ಗಸ್ಥನಾಗಿ ರಾಜ್ಯಕ್ಕೆ ಒಡೆಯರಿಲ್ಲದಿದ್ದರೆ ದೊಡ್ಡ ಆಪತ್ತು ಬರುವುದು. ಅರಸನಿಲ್ಲದ ರಾಜ್ಯದಲ್ಲಿ ಜನರು ಅನ್ಯೋನ್ಯವಾಗಿರರು. ವನಗಳು ಪುಷ್ಪಿಸವು. ಅರಸನಿಲ್ಲದ ರಾಜ್ಯದಲ್ಲಿ ಬ್ರಾಹ್ಮಣರು ವ್ರತನಿಯಮಗಳಿಂದ ಯಾಗಾದಿ ಸತ್ಕರ್ಮಗಳನ್ನು ಮಾಡರು.

ಮುಂದುವರಿಯುವುದು...

# ವಿಟಮಿನ್ಸ್ ಮಾತ್ರೆಗಳನ್ನು ತೆಗೆದುಕೊಳ್ಳಬಾರದು!







ಜೀವಸತ್ವಗಳು ಅಂದರೆ ವಿಟಮಿನ್ಸ್ ಮಾತ್ರೆಗಳು ಕೆಲವೊಂದು ಕಾಯಿಲೆಗಳಿಗೆ ತೆಗೆದುಕೊಳ್ಳುವ ಔಷಧಿಗಳು ಎರಡೂ ತಮ್ಮದೇ ಆದ ಮಟ್ಟದಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ, ಆದರೆ ಇವುಗಳ ಸೇವನೆಯ ವಿಚಾರದಲ್ಲಿ ಬಹಳ ಎಚ್ಚರವಹಿಸಬೇಕು. ಯಾಕೆಂದ್ರೆ ಇಲ್ಲಿ ಸ್ವಲ್ಪ ಹೆಚ್ಚು ಕಡಿಮೆ ಆದರೂ, ಕೂಡ ಆರೋಗ್ಯದ ಮೇಲೆ ಅಡ್ಡಪರಿಣಾಗಳು ಕಾಣಿಸಿಕೊಳ್ಳಬಹುದು ಮನುಷ್ಯನ ದೇಹವು ಸರಿಯಾಗಿ ಕಾರ್ಯನಿರ್ವಹಿಸಬೇಕೆಂದರೆ, ಆರೋಗ್ಯಕ್ಕೆ ಬೇಕಾಗುವ ಪ್ರಮುಖ ವಿಟಮಿನ್‌ಗಳು ಹಾಗೂ ಖನಿಜಾಂಶಗಳು ಬೇಕೇ ಬೇಕು. ಸಾಮಾನ್ಯವಾಗಿ ನಾವು ಸೇವಿಸುವ ಹಲವಾರು ಬಗೆಯ ನೈಸರ್ಗಿಕ ಆಹಾರಪದಾರ್ಥಗಳಲ್ಲಿ ವಿಟಮಿನ್, ಖನಿಜಾಂಶಗಳು ಕಂಡುಬರುವುದು. ಆದರೆ ಕೆಲವೊಮ್ಮೆ ಈ ಪ್ರಮುಖ ವಿಟಮಿನ್ಸ್‌ಗಳ ಕೊರತೆ ಕಾಣಿಸಿಕೊಂಡರೆ ದೇಹದಲ್ಲಿ ಅನಾರೋಗ್ಯವು ಕಾಡುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಮನುಷ್ಯನ ಆರೋಗ್ಯಕ್ಕೆ ವಿಟಮಿನ್ ಹಾಗೂ ಖನಿಜಾಂಶಗಳು ಸರಿಯಾದ ಮಟ್ಟದಲ್ಲಿ ಇರುವುದು ಅತೀ ಅಗತ್ಯ.

**ವಿಟಮಿನ್ಸ್‌ಗಳ ಬಗ್ಗೆ ಹೇಳುವುದಾರೆ** ನಮ್ಮ ದೇಹಕ್ಕೆ ಜೀವಸತ್ವಗಳು ಅಥವಾ ವಿಟಮಿನ್ಸ್‌ಗಳು ಅತ್ಯಗತ್ಯ. ಇವು ರೋಗನಿರೋಧಕ ಶಕ್ತಿಯನ್ನು ಬಲಪಡಿಸುವುದಲ್ಲದೆ, ದೇಹದ ಅನೇಕ ಕಾರ್ಯಗಳ ಸರಿಯಾದ ಕಾರ್ಯ ನಿರ್ವಹಣೆಗೆ ಸಹಾಯ ಮಾಡುತ್ತವೆ. ಅನೇಕ ಜನರು ಜೀವಸತ್ವಗಳ ಕೊರತೆಯನ್ನು ನೀಗಿಸಲು ಮಲ್ಟಿವಿಟಮಿನ್‌ಗಳು ಅಥವಾ ಇತರ ಪೂರಕಗಳನ್ನು ತೆಗೆದುಕೊಳ್ಳಲು ಪ್ರಾರಂಭಿಸುತ್ತಾರೆ. ಅಂತಹ ಪರಿಸ್ಥಿತಿಯಲ್ಲಿ, ಕೆಲವು ಔಷಧಿಗಳು ಜೀವಸತ್ವಗಳನ್ನು ಒಟ್ಟಿಗೆ ತೆಗೆದುಕೊಳ್ಳುವುದರಿಂದ ಗಂಭೀರ ಅಡ್ಡಪರಿಣಾಮಗಳು ಉಂಟಾಗಬಹುದು. ಈ ಸಂಯೋಜನೆಯು ಮಾರಕವೂ ಆಗಿರಬಹುದು. ಇಂದಿನ ಲೇಖನದಲ್ಲಿ ಯಾವೆಲ್ಲಾ ಔಷಧಿಗಳು ಜೀವಸತ್ವಗಳನ್ನು ಅಂದರೆ ವಿಟಮಿನ್ಸ್‌ಗಳನ್ನು ಒಟ್ಟಿಗೆ ತೆಗೆದುಕೊಳ್ಳಬಾರದು ಎಂಬುದನ್ನು ನೋಡೋಣ ಬನ್ನಿ

**ದೇಹದ ಅಂಗಾಂಗಗಳಲ್ಲಿ ಹಾನಿ ಉಂಟಾಗಬಹುದು:** ನಿಮಗೆ ಗೊತ್ತಿರಲಿ ವಿಟಮಿನ್ಸ್‌ಗಳು ಮತ್ತು ಔಷಧಿಗಳ ನಡುವಿನ ರಾಸಾಯನಿಕ ಕ್ರಿಯೆಯು ದೇಹದಲ್ಲಿ ಅನೇಕ ಸಮಸ್ಯೆಗಳನ್ನು ಉಂಟುಮಾಡ ಬಹುದು.

ಯಾಕೆಂದರೆ ಕೆಲವೊಂದು ಬಗೆಯ ವಿಟಮಿನ್ಸ್‌ಗಳು, ಪರಿಣಾಮ ಕಾರಿತ್ವವನ್ನು ಕಡಿಮೆ ಮಾಡುತ್ತದೆ, ಅಥವಾ ಹೆಚ್ಚಿಸುತ್ತದೆ. ಇದರಿಂದಾಗಿ ಔಷಧವು ಅದರ ಪರಿಣಾಮವನ್ನು ತೋರಿಸಲು ಸಾಧ್ಯವಾಗುವುದಿಲ್ಲ ಅಥವಾ ದೇಹದ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ. ಕೆಲವು ಸಂಯೋಜನೆಗಳು ಯಕೃತ್ ಮತ್ತು ಮೂತ್ರ ಪಿಂಡಗಳನ್ನು (ಕಿಡ್ನಿಗಳು ಹಾಗೂ ಯಾಕೃತ್) ಅಗತ್ಯಕ್ಕಿಂತ ಹೆಚ್ಚು ಕೆಲಸ ಮಾಡಲು ಒತ್ತಾಯಿಸುತ್ತವೆ, ಇದು ಅಂಗಗಳಿಗೆ ಹಾನಿ ಯನ್ನುಂಟು ಮಾಡುತ್ತದೆ. ಅದರಲ್ಲೂ ವಿಟಮಿನ್ ಇ ಮತ್ತು ಒಮೆಗಾ-3 ಕೊಬ್ಬಿನಾಮ್ಲಗಳಂತಹ ಕೆಲವು ಪೂರಕಗಳು (ಅಂದರೆ ವಿಟಮಿನ್ಸ್ ಮಾತ್ರೆಗಳು) ಹೃದಯ ಔಷಧಿಗಳೊಂದಿಗೆ ಸೇವಿಸಿದಾಗ ರಕ್ತದೊತ್ತಡವನ್ನು ಅಸಮತೋಲನಗೊಳಿಸಬಹುದು.

**ಯಾವ ಔಷಧಿಗಳು ಮತ್ತು ವಿಟಮಿನ್‌ಗಳನ್ನು ಒಟ್ಟಿಗೆ ತೆಗೆದು ಕೊಳ್ಳ ಬಾರದು:** ದೆಹಲಿಯ ಜಿಟಿಬಿ ಆಸ್ಪತ್ರೆಯ ವೈದ್ಯಕೀಯ ವಿಭಾಗದ ಡಾ. ಅಜಿತ್ ಜೈನ್ ಅವರು ಒಟ್ಟಿಗೆ ತೆಗೆದುಕೊಳ್ಳಬಾರದ ಕೆಲವು ಔಷಧಿಗಳು ಮತ್ತು ವಿಟಮಿನ್‌ಗಳನ್ನು ಸೂಚಿಸಿದ್ದಾರೆ.

ರಕ್ತ ತೆಳುಗೊಳಿಸುವ ಔಷಧಿಗಳು + ವಿಟಮಿನ್ ಕೆ: ವಿಟಮಿನ್ ಕೆ ರಕ್ತ ಹೆಪ್ಪುಗಟ್ಟುವಿಕೆಗೆ ಸಹಾಯ ಮಾಡುತ್ತದೆ, ಆದರೆ ರಕ್ತ ತೆಳು ಗೊಳಿಸುವ ಔಷಧಿಗಳು ರಕ್ತವನ್ನು ತೆಳುಗೊಳಿಸುತ್ತವೆ. ಎರಡನ್ನೂ ಒಟ್ಟಿಗೆ ತೆಗೆದುಕೊಳ್ಳುವುದರಿಂದ ಔಷಧವು ನಿಷ್ಪರಿಣಾಮಕಾರಿ ಯಾಗಬಹುದು.

**ಆಂಟಿಬಯೋಟಿಕ್ಸ್ + ಕಬ್ಬಿಣ/ಕ್ಯಾಲ್ಸಿಯಂ ಪೂರಕಗಳು:** ಕಬ್ಬಿಣ, ಕ್ಯಾಲ್ಸಿಯಂ ದೇಹದಲ್ಲಿ ಪ್ರತಿಜೀವಕಗಳನ್ನು ಸಂಪೂರ್ಣವಾಗಿ ಹೀರಿಕೊಳ್ಳಲು ಅನುಮತಿಸುವುದಿಲ್ಲ, ಇದರಿಂದಾಗಿ ಸೋಂಕು ಗುಣವಾಗುವುದಿಲ್ಲ. ಮಧುಮೇಹ ಔಷಧ + ವಿಟಮಿನ್ ಬಿ3: ವಿಟಮಿನ್ ಬಿ3 ದೇಹದಲ್ಲಿ ರಕ್ತದಲ್ಲಿನ ಸಕ್ಕರೆಯನ್ನು ಹೆಚ್ಚಿಸಬಹುದು, ಇದು ಮಧುಮೇಹ ಔಷಧಿಗಳ ಪರಿಣಾಮಕಾರಿತ್ವವನ್ನು ಕಡಿಮೆ ಮಾಡುತ್ತದೆ.

**ಮೂತ್ರವರ್ಧಕ ಔಷಧಗಳು + ವಿಟಮಿನ್ ಡಿ:** ಮೂತ್ರವರ್ಧಕ ಔಷಧಗಳು ಮತ್ತು ವಿಟಮಿನ್ ಡಿ ಅನ್ನು ಒಟ್ಟಿಗೆ ತೆಗೆದುಕೊಳ್ಳುವುದರಿಂದ ದೇಹದಲ್ಲಿ ಕ್ಯಾಲ್ಸಿಯಂ ಪ್ರಮಾಣ ಹೆಚ್ಚಾಗಬಹುದು, ಇದು ಮೂತ್ರಪಿಂಡದ ಕಲ್ಲುಗಳ ಅಪಾಯವನ್ನು ಹೆಚ್ಚಿಸುತ್ತದೆ. ಆಂಟಾಸಿಡ್‌ಗಳು + ಕಬ್ಬಿಣಾಂಶದ ಪೂರಕಗಳು: ಆಂಟಾಸಿಡ್‌ಗಳು ಕಬ್ಬಿಣದ ಹೀರಿಕೊಳ್ಳುವಿಕೆಯನ್ನು ಕಡಿಮೆ ಮಾಡುತ್ತದೆ, ಇದು ರಕ್ತಹೀನತೆ ಅಥವಾ ದೌರ್ಬಲ್ಯಕ್ಕೆ ಕಾರಣವಾಗಬಹುದು.

# ಲೋಕ ಕಲ್ಯಾಣಕ್ಕಾಗಿ ವಿಶೇಷ ಪೂಜೆ ಪ್ರಾರ್ಥನೆ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದರು ತಮ್ಮ ಅಮೃತ ಹಸ್ತದಿಂದ ಲೋಕಕಲ್ಯಾಣಕ್ಕಾಗಿ ಶ್ರೀಮನ್ಮೂಲರಾಮ ಚಂದ್ರದೇವರ ಸಂಸ್ಥಾನ ಪೂಜೆಯೊಂದಿಗೆ ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಮಹಾ ಮಂಗಳಾರತಿಯನ್ನು ನೆರವೇರಿಸಿದರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು,

ತದನಂತರದಲ್ಲಿ ಪರಮಪೂಜ್ಯ ಶ್ರೀಪಾದಂಗಳವರು ಆಶೀರ್ವಚನವನ್ನು ನೀಡುತ್ತಾ ಪ್ರತಿಯೊಬ್ಬ ಭಕ್ತರು ಶ್ರೀ ಗುರು ರಾಘವೇಂದ್ರ ಸ್ವಾಮಿಗಳನ್ನು ಭಕ್ತಿಯಿಂದ ಜಪಿಸಿ ಪ್ರಾರ್ಥಿಸಿ, ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹವನ್ನು ಪಡೆದುಕೊಳ್ಳಿ ಎಂಬುದಾಗಿ ಭಕ್ತರಿಗೆ ಅನುಗ್ರಹ ಸಂದೇಶದೊಂದಿಗೆ ಸಾವಿರಾರು ಭಕ್ತರಿಗೆ ಫಲ ಮಂತ್ರಾಕ್ಷತೆ ಶೇಷ ವಸ್ತ್ರ ಅನುಗ್ರಹಿಸಿ ಮಂತ್ರಾಲಯ ಕ್ಷೇತ್ರಕ್ಕೆ ತೆರಳಿದರು.

ಈ ಸಂದರ್ಭದಲ್ಲಿ ಗುರುಗಳ ಪೂರ್ವಾಶ್ರಮದ ತಂದೆಯವರಾದ ಪಂಡಿತ ಕೇಸರಿ ರಾಜಾ. ಎಸ್. ಗಿರಿ ಆಚಾರ್ಯರು, ರಾಜಾ. ಕೆ ವಾದಿಂದ್ರಾಚಾರ್ಯರು, ಭಕ್ತರು ಈ ಪೂಜಾ ವೈಭವದ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.



# ಹಿಮ್ಮಡಿ ನೋವು ಇರುವವರೆಲ್ಲಾ ಇದನ್ನು ತಿಳಿಯಲೇ ಬೇಕು

ಹಿಮ್ಮಡಿ ನೋವಿನ ಸಮಸ್ಯೆ ಇದ್ಯಾ? ಇದಕ್ಕೆ ಕಾರಣವೇನು ಗೊತ್ತಾ? ಈ ಸಮಸ್ಯೆ ಇರುವವರು ತಮ್ಮ ಆಹಾರದಲ್ಲಿ ಈ ಕೆಲವು ಬದಲಾವಣೆಗಳನ್ನು ಮಾಡಿಕೊಂಡರೆ ಹಿಮ್ಮಡಿ ನೋವಿನಿಂದ ಪರಿಹಾರ ಪಡೆಯಬಹುದು. ನಡೆಯುವಾಗ ಹಿಮ್ಮಡಿ ನೋಯುತ್ತಾ? ಹಿಮ್ಮಡಿ ನೋವಿನ ಸಮಸ್ಯೆ ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಜನರನ್ನು ಕಾಡುತ್ತಿರುವ ಸಮಸ್ಯೆಯಾಗಿದೆ. ಅನೇಕ ಜನರು ಹಿಮ್ಮಡಿ ಸಮಸ್ಯೆಯಿಂದ ತೊಂದರೆಗೊಳಗಾಗಿದ್ದಾರೆ ಆದರೆ ಅದಕ್ಕೆ ಸರಿಯಾದ ಕಾರಣವೇನೆಂಬುವುದು ಅವರಿಗೆ ತಿಳಿದಿರುವುದಿಲ್ಲ. ಹಿಮ್ಮಡಿ ನೋವಿನ ಹಿಂದೆ ಹಲವು ಕಾರಣಗಳಿದ್ದರೂ, ನಿಮ್ಮ ಸೇವಿಸುವ ಆಹಾರದಿಂದ ಹಿಡಿದು ಹೆಚ್ಚಿನ ಯೂರಿಕ್ ಆಮ್ಲದವರೆಗೆ ಹಿಮ್ಮಡಿ ನೋವನ್ನು ಉಂಟುಮಾಡಬಹುದು.



**ಹಿಮ್ಮಡಿ ನೋವಿಗೆ ಕಾರಣ:** ಸಾಮಾನ್ಯ ಕಾರಣಗಳಲ್ಲಿ ಪ್ಲಾಂಟರ್ ಫ್ಯಾಸಿಟಿಸ್ ಕೂಡಾ ಒಂದು. ಇದರಿಂದಾಗಿ ಹಿಮ್ಮಡಿ ನೋವು ಜನರಲ್ಲಿ ತೀವ್ರವಾಗಿ ಪ್ರಚೋದಿಸುತ್ತದೆ. ನೀವು ಈ ಕಾರಣವನ್ನು ಅರ್ಥಮಾಡಿಕೊಂಡರೆ ಪ್ಲಾಂಟರ್ ಫ್ಯಾಸಿಟಿಸ್ ಸ್ಥಿತಿಯನ್ನು ತಪ್ಪಿಸಬಹುದು. ಹಾಗಾದ್ರೆ, ಏನಿದು ಪ್ಲಾಂಟರ್ ಫ್ಯಾಸಿಟಿಸ್ ಇದರ ಲಕ್ಷಣಗಳು ಹೇಗಿರುತ್ತವೆ ಎನ್ನುವುದನ್ನು ತಿಳಿಯೋಣ.

**ಪ್ಲಾಂಟರ್ ಫ್ಯಾಸಿಟಿಸ್ ಎಂದರೇನು:** ತಮ್ಮ ಪಾದಗಳ ಮೇಲೆ ಹೆಚ್ಚು ಸಮಯ ಕಳೆಯುವ ಅಥವಾ ಹೆಚ್ಚು ಹೊತ್ತು ನಿಲ್ಲುವ ಜನರು ಸಾಮಾನ್ಯವಾಗಿ ಪ್ಲಾಂಟರ್ ಫ್ಯಾಸಿಟಿಸ್‌ನಿಂದ ಬಳಲುತ್ತಿದ್ದಾರೆ, ಇದು ಹಿಮ್ಮಡಿ ನೋವಿನ ಸಾಮಾನ್ಯ ಕಾರಣಗಳಲ್ಲಿ ಒಂದಾಗಿದೆ. ಪಾದವು ಪ್ರಾಥಮಿಕ ಪೀಡಿತ ಪ್ರದೇಶವಾಗಿದ್ದರೂ, ಈ ರೋಗವು ಭಂಗಿ, ಚಲನಶೀಲತೆ ಮತ್ತು ಸಾಮಾನ್ಯ ಮಸ್ಕ್ಯುಲೋಸ್ಕೆಲಿಟಲ್ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ.

**ಪ್ಲಾಂಟರ್ ಫ್ಯಾಸಿಟಿಸ್ ಎಂದರೇನು ಗೊತ್ತಾ?**

ಪ್ಲಾಂಟರ್ ಫ್ಯಾಸಿಟಿಸ್ ನಡೆಯುವುದು, ಓಡುವುದು ಮತ್ತು ಹಿಮ್ಮಡಿ ಮೂಳೆಯ ಕೆಳಗಿನ ಭಾಗವು ಸವೆದು ಹೋಗುವುದರಿಂದ ಉಂಟಾಗುತ್ತದೆ.

**ಪೌಷ್ಟಿಕಾಂಶ ಭರಿತ ಆಹಾರದ ಕೊರತೆ:** ಪೌಷ್ಟಿಕಾಂಶದ ಕೊರತೆಯು ಜನರು ಹಿಮ್ಮಡಿ ನೋವಿನಿಂದ ಬಳಲುತ್ತಿರುವ ಕಾರಣಗಳನ್ನು ಸಹ ಪ್ರಚೋದಿಸಬಹುದು. ಅಂತಹ ಪರಿಸ್ಥಿತಿಯಲ್ಲಿ, ಈ ಕೆಲವು ಆಹಾರಗಳನ್ನು ಸೇವಿಸುವ ಮೂಲಕ ನೀವು ಹಿಮ್ಮಡಿ ನೋವನ್ನು ತಪ್ಪಿಸಬಹುದು.

ಆದ್ದರಿಂದ ನಿಮಗೆ ಹಿಮ್ಮಡಿ ನೋವು ಬರದಂತೆ ಆಹಾರದಲ್ಲಿ ಈ ಕೆಲವೊಂದು ಪೋಷಕಾಂಶಗಳನ್ನು ಗಮನದಲ್ಲಿಟ್ಟುಕೊಳ್ಳುವುದು ಬಹಳ ಮುಖ್ಯ.






**ನಿಮಗೆ ಹಿಮ್ಮಡಿ ನೋವು ಇದ್ದರೆ ಏನನ್ನು ತಿನ್ನಬೇಕು:** ಕ್ಯಾಲ್ಸಿಯಂ ಭರಿತ ಆಹಾರವನ್ನು ಸೇವಿಸುವುದರಿಂದ ಹಿಮ್ಮಡಿ ನೋವಿನ ಸಮಸ್ಯೆಯನ್ನು ಕಡಿಮೆ ಮಾಡಬಹುದು. ಹಾಲು, ಚೀಸ್, ಮೊಸರು, ಸೊಪ್ಪು ತರಕಾರಿಗಳ ಮತ್ತು ಬಲವರ್ಧಿತ ಸಸ್ಯ ಆಧಾರಿತ ಹಾಲು ಮೂಳೆಯ ಆರೋಗ್ಯವನ್ನು ಉತ್ತಮವಾಗಿಸುತ್ತದೆ. ಒಮೆಗಾ-3 ಭರಿತ ಆಹಾರವನ್ನು ಸೇವಿಸಿ. ನೀವು ಉರಿಯೂತವನ್ನು ಕಡಿಮೆ ಮಾಡುವ ಸಾಲ್ಮನ್, ಸಾರ್ಡೀನ್ ಮತ್ತು ಮ್ಯಾಕೆರೆಲ್ ನಂತಹ ಮೀನುಗಳನ್ನು ಸೇವಿಸಬೇಕು.

ಆಂಟಿಆಕ್ಸಿಡೆಂಟ್ ಭರಿತ ಆಹಾರವನ್ನು ಸೇವಿಸಿ. ಸೊಪ್ಪು ತರಕಾರಿಗಳು, ಬೆರಿಹಣ್ಣುಗಳು, ರಾಸ್ಪ್ಬೆರಿಗಳು ಮತ್ತು ದಾಳಿಂಬೆಯಂತಹ ಇತರ ಹಣ್ಣುಗಳು ಆಕ್ಸಿಡೇಟಿವ್ ಒತ್ತಡದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ಭರಿತ ಆಹಾರವನ್ನು ಸೇವಿಸಿ. ಸೊಪ್ಪು ತರಕಾರಿಗಳು, ಬಾದಾಮಿ, ಗೋಡಂಬಿ, ಕುಂಬಳಕಾಯಿ, ಎಳ್ಳು ಮುಂತಾದ ಬೀಜಗಳು ಸ್ನಾಯುಗಳನ್ನು ಸಡಿಲಗೊಳಿಸುತ್ತವೆ ಮತ್ತು ಉರಿಯೂತವನ್ನು ಕಡಿಮೆ ಮಾಡುತ್ತವೆ. ವಿಟಮಿನ್ ಡಿ ಭರಿತ ಆಹಾರವನ್ನು ಸೇವಿಸಿ. ಮೀನು, ಬಲವರ್ಧಿತ ಡೈರಿ ಉತ್ಪನ್ನಗಳು, ಅಣಬೆಗಳು ಮೂಳೆ ಸಾಂದ್ರತೆಯನ್ನು ಉತ್ತೇಜಿಸುತ್ತವೆ.

# ಬಾಯಿ ರುಚಿ ಹೆಚ್ಚಿಸುವ ಮಸಾಲೆ ನಿಪ್ಪಟ್ಟು!
## ಒಮ್ಮೆ ಸವಿದರೆ ಮತ್ತೆ ಮತ್ತೆ ಸವಿಯುತ್ತೀರಿ!



ಮಳೆಗಾಲ ಆರಂಭದಲ್ಲೇ ಅಬ್ಬರಿಸುತ್ತಿದೆ. ರಾಜ್ಯದ ಹಲವು ಭಾಗದಲ್ಲಿ ನಿತ್ಯವು ಮಳೆಯಾಗುತ್ತಿದೆ. ಇಷ್ಟು ದಿನದಿಂದ ಕಾಡುತ್ತಿದ್ದ ಬೇಸಿಗೆಯ ಬಿಸಿಲಿನಿಂದ ಕಂಗೆಟ್ಟಿದ್ದ ಮಂದಿ ಈಗ ಮಳೆಗಾಲದ ದಿನಗಳು ಸಂತಸ ತಂದಿವೆ. ಹಾಗೆ ಈ ಸಮಯದಲ್ಲಿ ರುಚಿ ರುಚಿಯಾಗಿ ಏನಾದರು ಸವಿಯಲು ಎಲ್ಲರೂ ಇಷ್ಟಪಡುತ್ತಾರೆ.

ಹೆಚ್ಚಿನ ಮಂದಿ ಸಂಜೆ ಸಮಯದಲ್ಲಿ ಸ್ನ್ಯಾಕ್ಸ್ ಆಗಿ ಹಾಗೆ ಊಟದ ಜೊತೆಗೆ ಯಾವುದಾದರು ರುಚಿ ರುಚಿಯ ರೆಸಿಪಿಗಳ ಸವಿಯಲು ಮುಂದಾಗುತ್ತಾರೆ. ಮಳೆಗಾಲದಲ್ಲಿ ಟೀ-ಕಾಫಿಯೊಂದಿಗೆ ಹಾಗೆ ಊಟದೊಂದಿಗೆ ಇಲ್ಲವೆ ಮಳೆಬರುವಾಗ ಖಾರ ಖಾರವಾಗಿ ನಾಲಗೆ ಮೇಲೆ ಏನಾದರು ಬಿದ್ದರೆ ಆ ದಿನ ಸ್ವರ್ಗದಂತಾಗುತ್ತೆ. ಹೀಗಾಗಿ ಮಂದಿ ಈ ಸಮಯದಲ್ಲಿ ಏನಾದರು ಸ್ನ್ಯಾಕ್ಸ್ ಸವಿಯಲು ಮುಂದಾಗುವುದು ನೋಡಬಹುದು. ನಾವಿಂದು ಅದ್ಭುತ ರುಚಿಯಲ್ಲಿ ಎಲ್ಲರು ಇಷ್ಟಪಡುವಂತಹ ರುಚಿ ರುಚಿಯ ನಿಪ್ಪಟ್ಟು ಮಾಡುವ ಕುರಿತಾಗಿ ತಿಳಿಯೋಣ. ನೀವು ಕೂಡ ಹಲವು ಬಾರಿ ನಿಪ್ಪಟ್ಟು ಸವಿದಿರುತ್ತೀರಿ.

ಅಂಗಡಿಗಳಲ್ಲಿ ವಿಶೇಷ ರುಚಿಯ ನಿಪ್ಪಟ್ಟು ಸಿಗಲಿದೆ, ಹಾಗೆ ಮನೆಯಲ್ಲೂ ನೀವು ಮಾಡಿ ಸವಿದಿರಬಹುದು.

ಆದ್ರೆ ನಾವಿಂದು ವಿಶೇಷ ರುಚಿ ನೀಡುವ ನಿಮ್ಮ ನಾಲಗೆಯೂ ಮತ್ತಷ್ಟು ಬೇಕೆನಿಸುವಂತಹ ರುಚಿಯಲ್ಲಿ ನಿಪ್ಪಟ್ಟು ಮಾಡುವ ಕುರಿತಾಗಿ ತಿಳಿದುಕೊಳ್ಳೋಣ. ಅದರಲ್ಲೂ ನಾವಿಂದು ಮಸಾಲೆ ಭರಿತ ನಿಪ್ಪಟ್ಟು ಮಾಡುವುದು ಹೇಗೆ ಅನ್ನೋದನ್ನು ತಿಳಿದುಕೊಳ್ಳೋಣ. ಈ ಮಸಾಲೆ ನಿಪ್ಪಟ್ಟು ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು? ಮಾಡುವ ವಿಧಾನವೇನು? ಎಷ್ಟು ಸಮಯ ಹಿಡಿಯಲಿದೆ ಎಂಬ ಕುರಿತು ಈ ಲೇಖದಲ್ಲಿ ತಿಳಿದುಕೊಳ್ಳೋಣ.

**ಮಸಾಲೆ ನಿಪ್ಪಟ್ಟು ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು?**

- ಶೇಂಗಾ ಬೀಜ
- ಹುರಿಗಡಲೆ
- ಕರಿಬೇವು
- ಎಣ್ಣೆ
- ಅಕ್ಕಿ ಹಿಟ್ಟು
- ಖಾರದ ಪುಡಿ
- ಜೀರಿಗೆ
- ಬಿಳಿ ಎಳ್ಳು

**ಮಸಾಲೆ ನಿಪ್ಪಟ್ಟು ಮಾಡುವುದು ಹೇಗೆ:** ಮೊದಲು ಬಾಣಲೆ ಇಟ್ಟು ಅದಕ್ಕೆ ಶೇಂಗಾ ಬೀಜ ಹಾಕಿ ಹುರಿದುಕೊಳ್ಳಬೇಕು, ಶೇಂಗಾ ಸಿಪ್ಪೆ ಹೋಗುವಷ್ಟು ಹುರಿದು ಬಳಿಕ ಅದನ್ನು ತೆಗೆದಿಟ್ಟುಕೊಳ್ಳಿ. ನಂತರ ಸಿಪ್ಪೆ ತೆಗೆದ ಕಾಲು ಕಪ್ ಶೇಂಗಾ ಒಂದು ಮಿಕ್ಸಿ ಜಾರ್‌ಗೆ ಹಾಕಿಕೊಳ್ಳಿ. ಈಗ ಅದೇ ಮಿಕ್ಸಿ ಜಾರ್‌ಗೆ ಕಾಲು ಕಪ್ ಹುರಿಗಡಲೆ ಕೂಡ ಹಾಕಿಕೊಂಡು ತರಿ ತರಿಯಾಗಿ ರುಬ್ಬಿಕೊಳ್ಳಿ. ಈಗ ಒಂದು ಬೌಲ್‌ಗೆ ಅಕ್ಕಿ ಹಿಟ್ಟು ಹಾಕಿಕೊಂಡು ಅದಕ್ಕೆ ತರಿ ತರಿಯಾಗಿ ರುಬ್ಬಿದ ಪುಡಿ ಹಾಕಿಕೊಳ್ಳಿ. ಸಣ್ಣದಾಗಿ ಕತ್ತರಿಸಿಕೊಂಡ ಕರಿಬೇವು, ಬಿಳಿ ಎಳ್ಳು, ಜೀರಿಗೆ, ಖಾರದ ಪುಡಿ, ಉಪ್ಪು ಹಾಕಿಕೊಂಡು ಡ್ರೈ ಮಿಕ್ಸ್ ಮಾಡಿಕೊಳ್ಳಿ. ಈಗ ಎರಡು ಸ್ಪೂನ್ ತಣ್ಣಗಿನ ಎಣ್ಣೆ ಕೂಡ ಇದಕ್ಕೆ ಹಾಕಿ ಕೈಯಿಂದ ನಿಧಾನಕ್ಕೆ ಮಿಕ್ಸ್ ಮಾಡಿಕೊಳ್ಳಿ. ಹಾಗೆ ಸ್ವಲ್ಪ ಸ್ವಲ್ಪವೇ ನೀರು ಹಾಕಿಕೊಳ್ಳುತ್ತಾ ಮಿಕ್ಸ್ ಮಾಡಿಕೊಳ್ಳಬೇಕು. ಈ ಹಿಟ್ಟು ಚಪಾತಿ ಹಿಟ್ಟಿಗಿಂತ ಸ್ವಲ್ಪ ಗಟ್ಟಿಯಾಗಿ ನೀರು ಹಾಕಿ ಕಲಸಿಕೊಳ್ಳಬೇಕು. ಇದು ಉಂಡೆ ಮಾಡಿದಾಗ ಗಟ್ಟಿಯಾಗಿರಬೇಕು. ಹಿಟ್ಟು ಹದ ಬಂದ ಬಳಿಕ ಈಗ ಪ್ಲಾಸ್ಟಿಕ್ ಕವರ್‌ಗೆ ಎಣ್ಣೆ ಹಚ್ಚಿಕೊಳ್ಳಿ. ಹಾಗೆ ಲಟ್ಟಣಿಗೆಗೂ ಎಣ್ಣೆ ಹಚ್ಚಿಕೊಂಡು ನಿಮಗೆ ಯಾವ ಗಾತ್ರಕ್ಕೆ ಬೇಕೋ ಆ ಗಾತ್ರಕ್ಕೆ ನಿಪ್ಪಟ್ಟು ಲಟ್ಟಿಸಿಕೊಳ್ಳಿ. ಕೈಯಲ್ಲಿ ಲಟ್ಟಿಸಲು ಹೋಗಬೇಡಿ ಬಹಳ ದಪ್ಪವಾಗುತ್ತೆ. ಅಂಗೈ ಅಗಲದಷ್ಟು ಗಾತ್ರವಿದ್ದರೆ ಉತ್ತಮ. ಈಗ ಬಾಣಲೆಯಲ್ಲಿ ಎಣ್ಣೆ ಹಾಕಿ ಕಾಯಲು ಬಿಡಿ.


ಅನಂತರ ನಿಪ್ಪಟ್ಟು ಹಾಕಿಕೊಂಡು ಕರಿಯಲು ಬಿಡಿ. ಒಂದು ಬಾರಿಗೆ ಒಂದೇ ನಿಪ್ಪಟ್ಟು ಕರಿದುಕೊಳ್ಳಿ ಚೆನ್ನಾಗಿ ಎರಡೂ ಕಡೆ ಕರಿದುಕೊಳ್ಳಬೇಕು. ಇಷ್ಟಾದರೆ ನಿಮ್ಮ ಮುಂದೆ ಮಸಾಲೆ ನಿಪ್ಪಟ್ಟು ರೆಡಿಯಾಗುತ್ತೆ. ನೀವು ಸಹ ಮನೆಯಲ್ಲಿ ಇದನ್ನು ಟ್ರೈ ಮಾಡಿ ನೋಡಿ.

# ಈ ಆಹಾರಗಳಿಂದ ಇನ್ಸುಲಿನ್ ಪ್ರತಿರೋಧತೆ ಹೆಚ್ಚು

ಒಂದು ವೇಳೆ ದೇಹದಲ್ಲಿ ಇನ್ಸುಲಿನ್ ಉತ್ಪತ್ತಿಯಾಗದ ಇದ್ದರೆ, ನಾವು ಸೇವಿಸುವ ಆಹಾರದಲ್ಲಿ ಕಂಡುಬರುವಂತಹ ಗ್ಲುಕೋಸ್ ಜೀವಕೋಶಗಳನ್ನು ತಲುಪುವುದಿಲ್ಲ! ಇಂತಹ ಸಂದರ್ಭದಲ್ಲಿ ದೇಹದಲ್ಲಿ ಇನ್ಸುಲಿನ್ ಪ್ರತಿರೋಧತೆ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಈ ಸಮಸ್ಯೆಯಿಂದ ಬಳಲುತ್ತಿರುವವರು, ಖಾಲಿ ಹೊಟ್ಟೆಯಲ್ಲಿ ಸೇವಿಸಬೇಕಾದ ಆಹಾರಗಳ ಬಗ್ಗೆ ಮಾಹಿತಿ ಇಲ್ಲಿದೆ ನೋಡಿ ದೇಹದಲ್ಲಿ ಉತ್ಪತ್ತಿಯಾಗುವ ಇನ್ಸುಲಿನ್ ಸಮರ್ಪಕವಾಗಿ ಉತ್ಪತ್ತಿಯಾಗದಿದ್ದರೆ ಅಥವಾ ನಮ್ಮ ದೇಹದಲ್ಲಿ ಇನ್ಸುಲಿನ್ ಸರಿಯಾಗಿ ಬಳಕೆಯಾಗದಿದ್ದರೆ, ಅಂತಹ ಸಂದರ್ಭದಲ್ಲಿ ನಾವು ದಿನನಿತ್ಯ ಸೇವಿಸುವ ಆಹಾರಪದಾರ್ಥಗಳಲ್ಲಿ ಕಂಡುಬರುವಂತಹ ಗ್ಲುಕೋಸ್ ಅಂಶವು ನಮ್ಮ ದೇಹದ ಪ್ರಮುಖ ಜೀವಕೋಶಗಳಿಗೆ ತಲುಪುವಲ್ಲಿ ವಿಫಲಗೊಳ್ಳುತ್ತವೆ! ಅಷ್ಟೇ ಅಲ್ಲದೆ ಇವು ದೇಹದಲ್ಲಿ ಶಕ್ತಿಯನ್ನಾಗಿ ಬಳಕೆಗೆ ಬರುವುದಿಲ್ಲ. ಅಂದರೆ ಸರಳವಾಗಿ ಹೇಳಬೇಕೆಂದರೆ, ನಮ್ಮ ಆಹಾರಗಳಲ್ಲಿ ಸಿಗುವಂತಹ ಗ್ಲುಕೋಸ್ ಅಂಶ ಜೀವಕೋಶಗಳಿಗೆ ತಲುಪಲು ಸಾಧ್ಯವಾಗದೇ ಇರುವ ಪರಿಸ್ಥಿತಿಯನ್ನು ಇನ್ಸುಲಿನ್ ಪ್ರತಿ ರೋಧತೆ ಎಂದು ಕರೆಯಲಾಗುತ್ತದೆ. ಇಲ್ಲಿ ಒಂದು ವಿಚಾರ ನೆನಪಿಟ್ಟುಕೊಳ್ಳಬೇಕು ಯಾವಾಗ ಇನ್ಸುಲಿನ್ ಉತ್ಪತ್ತಿ ಕಡಿಮೆಯಾಗುತ್ತದೆಯೋ ಅಂತಹ ಸಂದರ್ಭದಲ್ಲಿ ಮಧುಮೇಹ ಕಾಯಿಲೆಯನ್ನು ನಿಯಂತ್ರಿಸಲು ಸಾಧ್ಯವಾಗುವುದಿಲ್ಲ.

**ಇನ್ಸುಲಿನ್ ಪ್ರತಿರೋಧ:** ನಮ್ಮ ದೇಹದ ಜೀವಕೋಶಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುವ ಹಾರ್ಮೋನ್ ಇನ್ಸುಲಿನ್‌ಗೆ ತಮ್ಮ ಸೂಕ್ಷ್ಮತೆಯನ್ನು ಕಳೆದುಕೊಂಡಾಗ ಇನ್ಸುಲಿನ್ ಪ್ರತಿರೋಧ ಎಂದು ಕರೆಯಲ್ಪಡುವ ಚಯಾಪಚಯ ಸ್ಥಿತಿ ಉಂಟಾಗುತ್ತದೆ. ನಂತರ ರಕ್ತದಲ್ಲಿನ ಗ್ಲೂಕೋಸ್ ಮಟ್ಟಗಳು ಹೆಚ್ಚಾಗುವುದರಿಂದ ಟೈಪ್ 2 ಮಧುಮೇಹದ ಬೆಳವಣಿಗೆಗೆ ಉಂಟಾಗುವ ಸಾಧ್ಯತೆ ಹೆಚ್ಚಿರುತ್ತದೆ. ಇದರ ಜೊತೆಗೆ ಅಧಿಕ ರಕ್ತದೊತ್ತಡ, ಹೃದ್ರೋಗ ಮತ್ತು ಪಾರ್ಶ್ವವಾಯು ಸೇರಿದಂತೆ ಇತರ ಆರೋಗ್ಯ ಸಮಸ್ಯೆಗಳು ಇನ್ಸುಲಿನ್ ಪ್ರತಿರೋಧದಿಂದ ಉಂಟಾಗಬಹುದು. ಬೊಜ್ಜು, ಜಡ ಜೀವನಶೈಲಿ ಮತ್ತು ಕಳಪೆ ಆಹಾರ ಪದ್ಧತಿಗಳು ಇದಕ್ಕೆ ಕಾರಣವಾಗುವ ಜೀವನ ಶೈಲಿ ಹಾಗೂ ಕೆಲವೊಮ್ಮೆ ಅನುವಂಶಿಕವಾಗಿಯೂ ಕೂಡ ಈ ಸಮಸ್ಯೆ ಕಾಣಿಸಿಕೊಳ್ಳುತ್ತದೆ. **ಬೆಳಗಿನ ಸಮಯದಲ್ಲಿ ಖಾಲಿ ಹೊಟ್ಟೆಗೆ ಸೇವಿಸಬೇಕಾದ ಆಹಾರಗಳು:** ಇತ್ತೀಚಿನ ದಿನಗಳಲ್ಲಿ ಇನ್ಸುಲಿನ್ ಪ್ರತಿರೋಧತೆ ಸಾಮಾನ್ಯವಾಗಿ ಹೆಚ್ಚಿನವರಲ್ಲಿ ಕಂಡುಬರುತ್ತಿದೆ. ಹೀಗಾಗಿ ಈ ಸಮಸ್ಯೆ ಇರುವವರು ಬೆಳಗಿನ ಸಮಯದಲ್ಲಿ ಖಾಲಿ ಹೊಟ್ಟೆಯಲ್ಲಿ ಮೆಂತೆಕಾಳುಗಳನ್ನು ನೆನೆಸಿಟ್ಟ ನೀರು ಕುಡಿಯುವುದರ ಜೊತೆಗೆ ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು, ಇನ್ಸುಲಿನ್ ಕಾರ್ಯವನ್ನು ಹೆಚ್ಚಿಸಲು ಮತ್ತು ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುವ ದಾಲ್ಚಿನ್ನಿ ನೀರು ಸೇರಿದಂತೆ ಇನ್ನೂ ಕೆಲವೊಂದು ಬಗೆಯ ಆಹಾರಪದ್ಧತಿಗಳ ಮಾಹಿತಿ ಪೌಷ್ಟಿಕತಜ್ಞ ರಜತ್ ಜೈನ್ ಅವರು ಹಂಚಿಕೊಂಡಿದ್ದಾರೆ,

**ನೆನೆಹಾಕಿದ ವಾಲ್ನಟ್ ಹಾಗೂ ಬಾದಾಮಿ ಬೀಜಗಳು :** ದಿನಾ ರಾತ್ರಿ ಮಲಗುವ ಮುನ್ನ ಮೂರು-ನಾಲ್ಕು ವಾಲ್ನಟ್ ಹಾಗೂ ಬಾದಾಮಿ ಬೀಜಗಳನ್ನು ರಾತ್ರಿ ಪೂರ್ತಿ ನೆನೆಹಾಕಿ, ಬೆಳಗ್ಗೆ ಎದ್ದ ಕೂಡಲೇ ಈ ಬೀಜಗಳ ಸಿಪ್ಪೆ ತೆಗೆದು ಖಾಲಿ ಹೊಟ್ಟೆಯಲ್ಲಿ ತಿನ್ನುವುದರಿಂದ ದೇಹ ದಲ್ಲಿ ಇನ್ಸುಲಿನ್ ಸೂಕ್ಷ್ಮತೆ ಹೆಚ್ಚುತ್ತದೆ ಎನ್ನುತ್ತಾರೆ ಪೌಷ್ಟಿಕತಜ್ಞ ರಜತ್ ಜೈನ್ ಅವರು. **ನಲ್ಲಿಕಾಯಿ ಜ್ಯೂಸ್ :** 1/4 ಕಪ್ ನೀರಿನೊಂದಿಗೆ 1 ಮಧ್ಯಮ ಗಾತ್ರದ ಆಮ್ಲಾ ಅಥವಾ ನೆಲ್ಲಿಕಾಯಿ: ಇದು ಮೇದೋಜ್ಜೀರಕ ಗ್ರಂಥಿಯ ಕಾರ್ಯವನ್ನು ಬಲಪಡಿಸುತ್ತದೆ ಮತ್ತು ರಕ್ತದಲ್ಲಿನ ಸಕ್ಕರೆಯನ್ನು ನೈಸರ್ಗಿಕವಾಗಿ ಸ್ಥಿರಗೊಳಿಸಲು ಸಹಾಯ ಮಾಡುತ್ತದೆ ಎನ್ನುತ್ತಾರೆ ತಜ್ಞರು. ಇನ್ನು ಮುಖ್ಯವಾಗಿ ಗಮನಿಸಬೇಕಾದ ಸಂಗತಿ ಏನೆಂದರೆ ಈ ಪುಟ್ಟ ನೆಲ್ಲಿಕಾಯಿಯಲ್ಲಿ ಅಧಿಕ ಪ್ರಮಾಣದಲ್ಲಿ ವಿಟಮಿನ್ ಸಿ ಮತ್ತು ಆಂಟಿ ಆಕ್ಸಿಡೆಂಟ್‌ಗಳು ಕಂಡುಬರುತ್ತದೆ. ಇವುಗಳು ಇನ್ಸುಲಿನ್ ಸೂಕ್ಷ್ಮತೆಯನ್ನು ವೃದ್ಧಿಸಿ ಆಕ್ಸಿಡೇಟಿವ್ ಒತ್ತಡವನ್ನು ನಿಯಂತ್ರಣ ಮಾಡುತ್ತವೆಯಂತೆ. ಹೀಗಾಗಿ ದಿನಕ್ಕೆ ಒಮ್ಮೆ ಅರ್ಧ ಲೋಟ ನೆಲ್ಲಿಕಾಯಿ ಜ್ಯೂಸ್ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ



● ಸೇವೆ ಖಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮುಷ್ಕರ

# ಪೌರ ಕಾರ್ಮಿಕರ ಮುಷ್ಕರ: ರಸ್ತೆಗಳಲ್ಲಿ ಕಸದ ರಾಸಿ, ಸ್ವಚ್ಛತೆ ಕಾಣದ ಪಟ್ಟಣ

• **ಉದಯವಾಹಿನಿ ಔರಾದ**


ಉದಯವಾಹಿನಿ ಚಿತ್ರ

ಸೇವೆ ಖಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಪೌರ ಕಾರ್ಮಿಕರು ನಡೆಸುತ್ತಿರುವ ಮುಷ್ಕರ ಶುಕ್ರವಾರ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ ಪಟ್ಟಣದ ರಸ್ತೆಗಳಲ್ಲಿ ಕಸದ ರಾಶಿ ಬಿದ್ದು ಜನ ಸಂಚಾರ ಮಾಡಲು ತೊಡಕು ಉಂಟಾಗಿದೆ.

ಬೆಳಿಗ್ಗೆಯೇ ಜನ ಎದ್ದೇಳುವ ಮುಂಚೆ ಸ್ವಚ್ಚತೆಯಲ್ಲಿ ತೊಡಗುವ ಪೌರ ಕಾರ್ಮಿಕರು ಒಂದು ದಿನ ಕೆಲಸ ಮಾಡದಿದ್ದರೆ ನಗರದಲ್ಲಿ ಎಂತಹ ಕ್ಲಿಷ್ಟಕರ ಪರಿಸ್ಥಿತಿ ನಿರ್ಮಾಣವಾಗಲಿದೆ ಎನ್ನುವುದನ್ನು ಊಹಿಸಿಕೊಳ್ಳಲು ಆಗುವುದಿಲ್ಲ. ಚರಂಡಿ ಸ್ವಚ್ಚಗೊಳಿಸುವುದರಿಂದ ಹಿಡಿದು ಶೌಚಾಲಯ ಗುಂಡಿಯನ್ನು ಶುಚಿಗೊಳಿಸುವವರು ಪೌರ ಕಾರ್ಮಿಕರು ಆದರೂ ಸರ್ಕಾರ ಕಡೆಗಣಿಸುತ್ತಿರುವುದು ಸರಿಯಲ್ಲ ಎಂದು ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಮೊಹಮ್ಮದ್ ಸಮಿ ಅಸಮಾಧಾನ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಕಸದ ರಾಶಿಯನ್ನು ತುಂಬಿ ಗೊಬ್ಬು ವಾಸನೆ ಬರುತ್ತಿದೆ ಪಟ್ಟಣದ ಜನರು ಮೂಗು ಮುಚ್ಚುಕೊಂಡು ತಿರುಗಾಡುವಂತಾಗಿದೆ, ಕಸದ ರಾಶಿಯನ್ನು ಸ್ಥಳಾಂತರಿಸದ ಕಾರಣ ಜನರು ಸಮಸ್ಯೆ ಎದುರಿಸುತ್ತಿದ್ದಾರೆ. ಪಟ್ಟಣ ಪಂಚಾಯತ ನೌಕರರು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ರಾಜ್ಯದಾದ್ಯಂತ ಪೌರ ಕಾರ್ಮಿಕರ ಅನಿರ್ದಿಷ್ಟ ಮುಷ್ಕರ 4ನೇ ದೀನ ಕಾಲಿಟ್ಟಿದೆ.

ಆರೋಗ್ಯ ಹದಗೆಡುವಂತಹ ಕೆಲಸ ಮಾಡುವ ಪೌರ ಕಾರ್ಮಿಕರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಸರ್ಕಾರದಿಂದ ವೇತನ ಕೊಡಬೇಕು. ಗುತ್ತಿಗೆ, ಹೊರ ಗುತ್ತಿಗೆ ಬೇಡ.

ಮೂರು ದಿನಗಳಿಂದ ಪೌರ ಕಾರ್ಮಿಕರು ಮುಷ್ಕರ ನಡೆಸುತ್ತಿರುವುದಕ್ಕೆ ನಗರದಲ್ಲಿ ಎಲ್ಲೆಂದರಲ್ಲಿ ಕಸದ ರಾಶಿಗಳು ಬಿದ್ದಿವೆ. ನಗರ ಸ್ವಚ್ಚತೆಯಲ್ಲಿ ತೊಡಗುವ ಪೌರ ಕಾರ್ಮಿಕರಿಗೂ ಜ್ಯೋತಿ ಸಂಜೀವಿನಿ ಮತ್ತು ಆರೋಗ್ಯ ಸಂಜೀವಿನಿಯಂತ ಸ್ಕೀಂಗಳು ಸಿಗಬೇಕು. ಯಾವುದೆ ಕಾರಣಕ್ಕೂ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪೌರ ಕಾರ್ಮಿಕರ ಮುಷ್ಕರವನ್ನು ಹಗುರವಾಗಿ ತೆಗೆದುಕೊಳ್ಳಬಾರದೆಂದು ಆಗ್ರಹಿಸಿದರು.

ಪಟ್ಟಣದ 20 ವಾರ್ಡುಗಳು ಸ್ವಚ್ಚತೆ ಇಲ್ಲದೆ ಸಮಸ್ಯೆ ಯಾವಾಗ ಸರಿಪಡಿಸುತ್ತಾರೆ ಎಂದು ತಿಳಿಯುವುದಿಲ್ಲ ಹೀಗೆ ಮುಂದುವರೆದರೆ ಪಟ್ಟಣದ ಜನರ ಆರೋಗ್ಯ ಸಮಸ್ಯೆಯನ್ನು ಕೆಡುವುದರಲ್ಲಿ ಯಾವುದೇ ಸಂಶಯವಿಲ್ಲ ಕೂಡಲೇ ಪಟ್ಟಣ ಪಂಚಾಯತ್ ಅಧಿಕಾರಿ ಪರ್ಯಾಯ ವ್ಯವಸ್ಥೆಯನ್ನು ಕಂಡುಕೊಂಡು ಪಟ್ಟಣದ ಸ್ವಚ್ಛತೆ ಕಡೆ ಗಮನಹರಿಸಬೇಕೆಂದು ಪಟ್ಟಣದ ನಾಗರಿಕರ ಆಗ್ರಹ ವಾಗಿದೆ.

ಪೌರಕಾರ್ಮಿಕರ ಮುಷ್ಕರದಿಂದ ಪಟ್ಟಣ ಪಂಚಾಯಿತಿಯ ಸಿಬ್ಬಂದಿಗಳು ಕೆಲಸಕ್ಕೆ ಹಾಜರಾಗದೆ ಇರುವುದರಿಂದ ಪಟ್ಟಣದ ನಾಗರಿಕರ ಕಛೇರಿಯ ಕೆಲಸ ಕಾರ್ಯಗಳಿಗೆ ಮುಷ್ಕರ ಸಂಕಷ್ಟ ತಂದು ಒಡ್ಡಿದೆ, ಮುಷ್ಕರ ಅಂತ್ಯಗೊಳ್ಳುವ ತನಕ ಪಟ್ಟಣದ ನಾಗರಿಕರು ಸಮಸ್ಯೆಯಲ್ಲಿ ಸಿಲುಕಿ ಕೊಳ್ಳುವುದು ಗ್ಯಾರಂಟಿಯಾಗಿದೆ.

ಇದನ್ನು ಪ.ಪಂಚಾಯತ್ ಮುಖ್ಯ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ನಾಗರಿಕರ ಸೇವೆಗಳು ಒದಗಿಸಲು ಕಚೇರಿಯಲ್ಲಿ ಬೇರೆ ಸಿಬ್ಬಂದಿಯನ್ನು ನಿಯುಕ್ತಿ ಮಾಡಿ ಜನರ ಸಮಸ್ಯೆಗೆ ಸಹಕರಿಸಬೇಕೆಂದು ನಾಗರಿಕರ ಒತ್ತಾಯವಾಗಿದೆ.

**ಎಲ್ಲೆಂದರಲ್ಲಿ ಕಸದ ರಾಶಿ**

**ನಾವು ಬೆಳಿಗ್ಗೆ ಏಳುವ ಮುಂಚೆ ಎದ್ದು ತನ್ನ ಪ್ರಾಣದ ಹಂಗನ್ನು ತೊರೆದು ಪಟ್ಟಣದ ಸ್ವಚ್ಛತೆ ಕಾಪಾಡುವ ಪೌರ ಕಾರ್ಮಿಕರು ಚರಂಡಿ ರಸ್ತೆ ಸ್ವಚ್ಛತೆ ಕಾರ್ಯದಲ್ಲಿ ತೊಡಗುತ್ತಾರೆ ಇವರಿಗೆ ಸರ್ಕಾರ ಆರೋಗ್ಯ ಸಂಜೀವಿನಿ ನೀಡಬೇಕು. ಅವರ ಮುಷ್ಕರದ ಪರಿಣಾಮ ಪಟ್ಟಣದಲ್ಲಿ ಸ್ವಚ್ಛತೆ ಮರೆಯಾಗಿದೆ ಸರ್ಕಾರ ಶೀಘ್ರವೇ ಅವರ ಬೇಡಿಕೆಗಳನ್ನು ಈಡೇರಿಸಬೇಕು.**

**-ಸರುಬಾಯಿ ಘುಳೆ**
**ಪ.ಪಂ.ಅಧ್ಯಕ್ಷರು ಔರಾದ(ಬಾ)**

**ಪೌರ ಕಾರ್ಮಿಕರನ್ನು ಖಾಯಂಗೊಳಿಸಬೇಕು. ಹೊರಗುತ್ತಿಗೆ ರದ್ದುಪಡಿಸಿ ನೇರ ನೇಮಕಾತಿ ಮಾಡಿಕೊಳ್ಳಬೇಕು. ನೀರಗಂಟಿಗಳು, ವಾಹನ ಚಾಲಕರು, ಪೌರ ಕಾರ್ಮಿಕರು ಜೀವನ ಭದ್ರತೆಯಿಲ್ಲದೆ ದುಡಿಯುತ್ತಿದ್ದಾರೆ. ಅದೇ ಒಬ್ಬ ಬಿಲ್ ಕಲೆಕ್ಟರ್ ಬಡ್ತಿ ಪಡೆದು ಮುಖ್ಯಾಧಿಕಾರಿಯಾಗಬಹುದು. ಪೌರ ಕಾರ್ಮಿಕರಿಗೆ ಯಾವ ಬಡ್ತಿಯೂ ಇಲ್ಲ. ಇದ್ಯಾವ ನ್ಯಾಯ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪೌರ ಕಾರ್ಮಿಕರಿಗೂ ಕನಿಷ್ಟ ಗೌರವ ಕೊಡಬೇಕು**

**-ಮೊಹಮ್ಮದ್ ಸಮಿ, ಅಧ್ಯಕ್ಷರು**
**ಪೌರ ಕಾರ್ಮಿಕರ ಸಂಘ ಔರಾದ.**

**ಪೌರಕಾರ್ಮಿಕರ ಮುಷ್ಕರದಿಂದ ಪಟ್ಟಣದಲ್ಲಿ ಸ್ವಚ್ಛತೆ ಮಾಡಲು ಆಗುತ್ತಿಲ್ಲ ಮತ್ತು ಕಚೇರಿಯ ಕೆಲಸವನ್ನು ನಿಲ್ಲಿಸಲಾಗಿದೆ, ಪಟ್ಟಣದ ಸ್ವಚ್ಛತೆಗಾಗಿ ಖಾಸಗಿ ವ್ಯಕ್ತಿಗಳ ಸಹಾಯ ಪಡೆದು ಸ್ವಚ್ಛತೆಯನ್ನು ಮಾಡಲು ನಮ್ಮ ಮೇಲಾಧಿಕಾರಿಗಳ ನಿರ್ದೇಶನಗೋಸ್ಕರ ಕಾಯುತ್ತಿದ್ದೇವೆ**

**-ಸ್ವಾಮಿದಾಸ,**
**ಪಪಂ ಮುಖ್ಯಾಧಿಕಾರಿ**

## ಪರಿಷತ್ ಸದಸ್ಯರಿಗೆ ಸದಸ್ಯತ್ವದಿಂದ ಅಮಾನತ್ತುಗೊಳಿಸುವಂತೆ ಪ್ರತಿಭಟನೆ

• **ಉದಯವಾಹಿನಿ ಚಿಂಚೋಳಿ**

ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಧಿಕಾರಿಗಳಿಗೆ ಹಾಗೂ ಸೇನಾಧಿಕಾರಿ ಅವರನ್ನು ಅಸಂವಿಧಾನಿಕ ಪದಗಳಿಂದ ನಿಂದಿಸಿರುವ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹಾಗೂ ಎನ್. ರವಿಕುಮಾರ ಅವರನ್ನು ಪರಿಷತ್ ಸದಸ್ಯತ್ವದಿಂದ ಅಮಾನತುಗೊಳಿಸುವಂತೆ ಆಗ್ರಹಿಸಿ ತಾಲ್ಲೂಕಾ ಸರ್ವಧರ್ಮ ಸಮನ್ವಯ ಸಮಿತಿ ವತಿಯಿಂದ ತಹಶೀಲ್ ಎದುರು ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಹೋರಾಟಗಾರರು ಮನವಿ ಪತ್ರ ಸಲ್ಲಿಸಿದರು.

**ಸಚಿವರಿಗೆ ಮತ್ತು ಜಿಲ್ಲಾಧಿಕಾರಿಗೆ ಅಸಂವಿಧಾನಿಕ ಪದ ಬಳಕೆ**

ಹೋರಾಟದ ನೇತೃತ್ವ ವಹಿಸಿದ ಅಬ್ದುಲ್ ಬಾಷೀದ್ ಮಾತನಾಡಿ ಭಾರತ ಪ್ರಜಾಪ್ರಭುತ್ವ ರಾಷ್ಟ್ರ ವಿಶ್ವದಲ್ಲಿ ಭಾರತಕ್ಕೆ ತನ್ನದೆಯಾದ ಇತಿಹಾಸವಿದೆ ಶಾಂತಿ ಸುವ್ಯವಸ್ಥೆಗೆ ಹೆಸರಾಗಿರುವಂತಹ ರಾಜ್ಯವಾಗಿದೆ. ಯಾವುದೇ ಜಾತಿ ಮತ ಭೇಧ ಪಂಥವಿಲ್ಲದೆ ಜನರು ನೆಮ್ಮದಿಯಿಂದ ಬದುಕು ಜೀವನಸಾಗಿಸುತ್ತಿದ್ದಾರೆ.

ಅದರಂತೆ ಕರ್ನಾಟಕ ಸರಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿಬಿಟಿ ಮತ್ತು ಕಲಬುರಗಿ ಉಸ್ತುವಾರಿ ಸಚಿವ ಪ್ರೀಯಾಂಕ್ ಖರ್ಗೆ ಅವರು ಸಂವಿಧಾನದ ಮೂಲ ಪರಿಕಲ್ಪನೆಯಂತೆ ಎಲ್ಲಾ ಜನಾಂಗದ ಉದ್ಧಾರಕ್ಕಾಗಿ ಮತ್ತು ರಾಜ್ಯದ ಅಭಿವೃದ್ಧಿಗಾಗಿ ಶ್ರಮವಹಿಸಿ ಕೆಲಸ ನಿರ್ವಹಿಸುತ್ತಿರುವುದು ರಾಜ್ಯ ಬಿಜೆಪಿ ಪಕ್ಷದ ನಾಯಕರಿಗೆ ಅರಗಿಸಿಕೊಳ್ಳಲು ಸಾಧ್ಯವಾಗದೇ ಅವರ ವಿರುದ್ಧ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಅಸಂವಿಧಾನಿಕ ಪದ ಬಳಕೆ ಮಾಡಿ ನಿಂದಿಸಲಾಗಿದೆ ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಅವರು ದಲಿತ ಸಮುದಾಯದವರು ಇದ್ದ ಕಾರಣಕ್ಕೆ ಬಿಜೆಪಿಯವರು ಗುರಿಯಾಗಿಸಿಕೊಂಡು ನಿಂದಿನೆ ಮಾಡುತ್ತಿದ್ದು ಖಂಡನೀಯವಾಗಿದೆ.


ಉದಯವಾಹಿನಿ ಚಿತ್ರ

**ಕ್ರಿಮಿನಲ್ ಪ್ರಕರಣ ದಾಖಲಿಸಲು ಆಗ್ರಹ**

**ಪಾಕಿಸ್ತಾನದ ಉಗ್ರರನ್ನು ಸದೇ ಬಡೆಯಲು ಆಪರೇಷನ್ ಸಿಂಧೂರ ನೇತೃತ್ವ ವಹಿಸಿ ಉಗ್ರರನ್ನು ಸದೇ ಬಡೆದಿರುವ ಸೇನಾಧಿಕಾರಿ ಸೋಫೀಯಾ ಖುರೇಶಿ ಹಾಗೂ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ರವರು ದಕ್ಷ ಹಾಗೂ ಪ್ರಾಮಾಣಿಕ ಸೇವೆ ಸಲ್ಲಿಸುತ್ತಿದ್ದು ಇವರ ಸೇವೆಯನ್ನು ಪರಿಗಣಿಸಿ ಕೇಂದ್ರ ಸರಕಾರವೇ ಉತ್ತಮ ಆಡಳಿತಗಾರರು ಎಂದು ರಾಷ್ಟ್ರಪತಿ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ,ಇತಂಹ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವಂತಹ ಅಧಿಕಾರಿಗಳನ್ನು ಮುಸ್ಲಿಂ ಜನಾಂಗದವರು ಆಗಿರುವ ಕಾರಣಕ್ಕೆ ಅವರನ್ನು ಬಿಜೆಪಿ ನಾಯಕರು ಪಾಕಿಸ್ತಾನದಿಂದ ಬಂದಿದ್ದಾರೆಂದು ನಿಂದನೆ ಮಾಡಿ ಅವಮಾನಿಸಿರುವ ಪರಿಷತ್ ಸದಸ್ಯ ಎನ್.ರವಿಕುಮಾರ ಹಾಗೂ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹಾಗೂ ರಾಜ್ಯದ ಬಿಜೆಪಿ ಮುಖಂಡರ ವರ್ತನೆಯನ್ನು ಖಂಡಿಸಿ ಇವರ ಮೇಲೆ ಸೂಕ್ತ ಕ್ರಮತೆಗೆದುಕೊಳ್ಳುವಂತೆ ಆಗ್ರಹಿಸಿ,ಕೂಡಲೇ ಇವರ ವಿಧಾನ ಪರಿಷತ್ ಸದಸ್ಯತ್ವವನ್ನು ರದ್ದುಪಡಿಸಿ,ಕ್ರಿಮಿನಲ್ ಪ್ರಕರಣ ದಾಖಲಿಸಬೇಕೆಂದು ಆಗ್ರಹಿಸಿದ್ದರು.**

## ನಾಲ್ಕನೇ ದಿನಕ್ಕೆ ಕಾಲಿಟ್ಟ ಪುರಸಭೆ ಪೌರ ನೌಕರರ ಅನಿರ್ಧಿಷ್ಟಾವಧಿ ಹೋರಾಟ

• **ಉದಯವಾಹಿನಿ, ಚಿಂಚೋಳಿ**

ಪುರಸಭೆಯ ಪೌರ ನೌಕರರ ಎಲ್ಲಾ ಬೇಡಿಕೆಗಳನ್ನು ರಾಜ್ಯ ಸರ್ಕಾರ ಶೀಘ್ರದಲ್ಲೇ ಈಡೇರಿಸಬೇಕು ಇಲ್ಲಾದಿದ್ದರೆ ಪೌರ ನೌಕರರ ಜೋತೆಗೂಡಿ ಪೌರಾಡಳಿತ ಸಚಿವರ ಮನೆ ಮುಂದೆ ಪ್ರತಿಭಟನೆ ಮಾಡಲಾಗುವುದು ಎಂದು ಪರಿಶೀಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿಯ ರಾಜ್ಯ ಸಂಚಾಲಕ ಗೋಪಾಲರಾವ ಕಟ್ಟಿಮನಿ ಆಗ್ರಹಿಸಿದರು.

ಪಟ್ಟಣದ ಪುರಸಭೆ ಕಛೇರಿ ಎದುರು ಪೌರ ನೌಕರರ ಸಂಘದಿಂದ ಹಮ್ಮಿಕೊಂಡ ಅನಿರ್ಧಿಷ್ಟಾವಧಿ ಹೋರಾಟದಲ್ಲಿ ಬೆಂಬಲ ಸೂಚಿಸಿ ಮಾತನಾಡಿದ ಅವರು,ರಾಜ್ಯ ಕಾಂಗ್ರೆಸ್ ಸರ್ಕಾರವು ಇಬ್ಭಾಗ ನೀತಿ ಅನುಸರಿಸಿ ತಾರತಮ್ಯ ಮಾಡುತ್ತಿದೆ, ಬಿಬಿಎಂಪಿಯಲ್ಲಿ ಸರ್ಕಾರಿ ನೌಕರರುವೆಂದು ಪರಿಗಣಿಸಿ ಪುರಸಭೆ ಪಟ್ಟಣ ಪಂಚಾಯಿತಿ ಸೇರಿದಂತೆ ಇನ್ನುಳಿದ ಪೌರ ನೌಕರರಿಗೆ ನೇಮಕ ಮಾಡದೆ ಇಭ್ಭಾಗ ನೀತಿ ಅನುಸರಿಸಿದೆ. ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ನೌಕರರಿಗೂ ಖಾಯಂ ಮಾಡಿಕೊಳ್ಳಬೇಕು, ಹೋರಾಟ ಮಾಡುತ್ತಿರುವುದರಿಂದ ಪಟ್ಟಣವೆಲ್ಲಾ ಕಸ-ಕಡ್ಡಿಗಳಿಂದ ಹೊಲಸು ತುಂಬಿಹೋಗಿದೆ, ಸ್ವಚ್ಛತೆ ಮರಿಚಿಕೆಯಾಗಿದೆ ಶೀಘ್ರದಲ್ಲೇ ಸರ್ಕಾರ ಮತ್ತು ಸಂಬಂಧಿಸಿದ ಇಲಾಖೆ ಸಚಿವರು ಗಮನಹರಿಸಿ ಪೌರ ನೌಕರರ ಸಮಸ್ಯೆಗಳು ಈಡೇರಿಸಬೇಕು ಎಂದು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ಬಿಜೆಪಿ ಹಿರಿಯ ಮುಖಂಡ ಕೆಎಂ ಬಾರಿ, ಜೆಡಿಎಸ್ ಅಧ್ಯಕ್ಷ ರವಿಶಂಕರರೆಡ್ಡಿ ಮುತ್ತಂಗಿ, ಹಣಮಂತ ಪೂಜಾರಿ,ಮಾರುತಿ ಗಂಜಗಿರಿ ಮಾತನಾಡಿ ಪೌರ ನೌಕರರ ಸಮಸ್ಯೆಗಳಿಗೆ ಸ್ವಂದಿಸಿ ಸರ್ಕಾರಿ ನೌಕರರೆಂದು ಖಾಯಂ ಮಾಡುವಂತೆ ಆಗ್ರಹಿಸಿದರು. ಪೌರ ನೌಕರರ ಸಂಘದ ಅಧ್ಯಕ್ಷ ಗುಂಡಪ್ಪ, ಅಯೇಜಾಜ್, ನಿಂಗಮ್ಮ ಬಿರಾದಾರ, ಶ್ರೀ ಕಾಂತ, ಶಂಭುಲಿಂಗ ಕಣ್ಣೆ,ಆನಂದ ಕಾಂಬ್ಳೆ, ಸುಮತ್, ಜಗನ್ನಾಥ, ಸತೀಶ, ಸೋಮಶೇಖರ, ಮಹಾನಂದ, ದಶರಥ, ಶಿವಪ್ಪ, ಶರಣಮ್ಮ, ಯಲ್ಲಾಲಿಂಗ, ತುಳಜಮ್ಮ, ಗಂಗಮ್ಮ, ರೇಷ್ಮಾ ಬಾಯಿ, ಸೀನಾಬಾಯಿ, ಅನೇಕರಿದ್ದರು.

## ಮುರ ಜಂಕ್ಷನ್‌ನಲ್ಲಿ ನಿರಂತರ ಅಪಘಾತ: ಇಒಗೆ ಮನವಿ

• **ಉದಯವಾಹಿನಿ ಪುತ್ತೂರು**

ಮಾಣಿ-ಮೈಸೂರು ರಾಷ್ಟ್ರೀಯ ಹೆದ್ದಾರಿಯ ಕಬಕ ಗ್ರಾಮ ಪಂಚಾಯತ್‌ಗೆ ವ್ಯಾಪ್ತಿಯ ಮುರ ಜಂಕ್ಷನ್‌ನಲ್ಲಿ ವಾಹನ ಅಪಘಾತ ನಿರಂತರವಾಗಿ ನಡೆಯುತ್ತಿದ್ದು, ಇದನ್ನು ತಡೆಗಟ್ಟುವಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಕಬಕ ಗ್ರಾಪಂ ಹಾಗೂ ಸಾರ್ವಜನಿಕರು ತಾಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರಿಗೆ ಮನವಿ ಸಲ್ಲಿಸಿದರು.

ಮುರ ಜಂಕ್ಷನ್‌ನಿಂದ ಕೆದಿಲಕ್ಕೆ ತೆರಳುವ ರಸ್ತೆಗೆ ಈ ಹಿಂದೆ ಇದ್ದ ರಸ್ತೆಯನ್ನು ಬದಲಿಸಿ ಹೊಸದಾಗಿ ರೈಲ್ವೆ ಮೇಲ್ವೇತುವೆ ನಿರ್ಮಾಣಗೊಂಡು ಆ ರಸ್ತೆಯಲ್ಲಿ ವಾಹನ ಸಂಚಾರ ಪ್ರಾರಂಭಗೊಂಡ ದಿನದಿಂದ ಇಂದಿನವರೆಗೂ ನಿರಂತರವಾಗಿ ಒಂದಲ್ಲ ಒಂದು ರೀತಿಯಲ್ಲಿ ಈ ಸ್ಥಳ ಅಪಘಾತಗಳು ನಡೆಯುತ್ತಲೇ ಇದೆ. ಅವೈಜ್ಞಾನಿಕವಾಗಿ ನಿರ್ಮಾಣವಾದ ರೈಲ್ವೆ ಮೇಲ್ವೇತುವೆಯಿಂದಾಗಿ ಮುರದಿಂದ ಕೆದಿಲ ರಸ್ತೆಗೆ ತಿರುಗುವಲ್ಲಿ ವಾಹನಗಳು ಮುಖ್ಯರಸ್ತೆಗೆ ಸೇರುವಾಗ ಅಥವಾ ಮುಖ್ಯ ರಸ್ತೆಯಿಂದ ತಿರುಗಿ ಹೋಗುವಾಗ ಅತ್ಯಂತ ಹೆಚ್ಚಿನ ಅಪಘಾತಗಳು ಆಗುತ್ತಿವೆ. ರಸ್ತೆ ಭಾಗದಲ್ಲಿರುವ ಮರಗಳಿಂದ ಅಡ್ಡ ರಸ್ತೆಯಿಂದ ಬರುವ ವಾಹನಗಳು ಕಾಣುತ್ತಿಲ್ಲ. ಈ ಸ್ಥಳ ರೈಲ್ವೇ ಇಲಾಖೆಗೆ ಸೇರಿದೆ. ಅವರಿಗೂ ಹಲವಾರು ಬಾರಿ ಮನವಿ ಸಲ್ಲಿಸಲಾಗಿದೆ. ಆದರೆ ಯಾವ ಪ್ರಯೋಜನವೂ ಆಗಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.


ಉದಯವಾಹಿನಿ ಚಿತ್ರ

**ತಿಂಗಳಲ್ಲಿ ಮೂರು ಅಪಘಾತ:** ಇಲ್ಲಿ ಕಳೆದ ಒಂದು ತಿಂಗಳಿನಲ್ಲಿ ಮೂರು ಗಂಭೀರವಾದಂತಹ ಅಪಘಾತವಾಗಿದ್ದು, ವಾರದಲ್ಲಿ ಒಂದೆರಡು ಅಪಘಾತ ಆಗುತ್ತಲೇ ಇರುತ್ತದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರ ಮನವಿಗೆ ಸ್ಪಂದಿಸಿದ ಸಂಚಾರಿ ಠಾಣೆಯ ಪೋಲೀಸರು ಹಂಪ್‌ಗಳನ್ನು ನಿರ್ಮಾಣ ಮಾಡಿದ್ದರೂ ಅದನ್ನು ಕಾನೂನಿನ ಚೌಕಟ್ಟಿನಲ್ಲಿ ಪರಿಗಣಿಸದೆ ರಾಷ್ಟ್ರೀಯ ಹೆದ್ದಾರಿ ಇಲಾಖೆಯವರು ತೆರವುಗೊಳಿಸಿದ್ದಾರೆ. ಆದರೆ ಯಾವುದೇ ಮುಂಜಾಗರೂಕತೆ ಕೈಗೊಂಡಿರುವುದಿಲ್ಲ. ಸಾರ್ವಜನಿಕರು ಪ್ರತಿಭಟನೆಯನ್ನು ನಡೆಸಿದರೂ ಅಂತಹ ಮನವಿಗಳಿಗೆ ಕೂಡ ಸರ್ಕಾರ ಮತ್ತು ಇಲಾಖೆ ಕಿವುಡುತನವನ್ನು ಪ್ರದರ್ಶಿಸಿದೆ.

## ಗ್ರಾಮ ಪಂಚಾಯತ್ ಅಧಿಕಾರಿಗಳೇ, ಜನಪ್ರತಿನಿಧಿಗಳೇ ಎಲ್ಲಿದ್ದೀರಿ?

• **ಉದಯವಾಹಿನಿ, ಚಿಕ್ಕ ಮಲ್ಲಿಗಾವಾಡ**

ಧಾರವಾಡ ಜಿಲ್ಲೆ, ಧಾರವಾಡ ತಾಲ್ಲೂಕು, ಚಿಕ್ಕ ಮಲ್ಲಿಗಾವಾಡ, ಕಲಘಟಗಿ ಮತಕ್ಷೇತ್ರ ಕೆ ಬರುವ ಕೃಷಿ ವಿಶ್ವವಿದ್ಯಾಲಯ ಹತ್ತಿರ ಇರುವ ಹಿರೇಮಠ ಲೇಔಟ್ ನ ರಸ್ತೆಯ ಕರ್ಮಕಾಂಡ! ವರ್ಷದ ಶಾಲೆಗಳ ಆರಂಭ ಮಕ್ಕಳು ಖುಷಿ ಖುಷಿಯಾಗಿ ಲವಲವಿಕೆಯಿಂದ ಶಾಲೆಗೆ ತೆರಳಬೇಕಾದ ಸಮಯದಲ್ಲಿ ರಸ್ತೆಯ ಮೇಲೆ ಶಾಲಾ ವಾಹನಕೆಸರಿನಲ್ಲಿ ಸಿಕ್ಕಿಹಾಕಿಕೊಂಡಿದ್ದು ಗಂಟೆಗಳ ಕಾಲ ಮಕ್ಕಳು ನಡುರಸ್ತೆಯಲ್ಲಿ ಶಾಲಾ ವಾಹನದಲ್ಲೇ ಕುಳಿತು ಸಮಯ ಕಳೆಯಬೇಕಾಗಿತ್ತು. ಇದಕ್ಕೆ ಮೂಲ ಕಾರಣ ರಸ್ತೆ ಅಭಿವೃದ್ಧಿ ಆಗದೇ ಇರುವುದು.

ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಹತ್ತಿರ ಇರುವ ಮತ್ತು ಚಿಕ್ಕಮಲ್ಲಿಗವಾಡ ಗ್ರಾಮ ಪಂಚಾಯತ ಹದ್ದಿನಲ್ಲಿರುವ ಹಿರೇಮಠ ಲೇಔಟಿನ ಮುಖ್ಯ ರಸ್ತೆಯು 24X 7 ನೀರಿನ ಸಂಪರ್ಕಕ್ಕಾಗಿ ಸಂಬಂಧಿಸಿ ಗುತ್ತಿಗೆದಾರರು ಸುಮಾರು 5 ಅಡಿ ಆಳ ರಸ್ತೆ ಅಗೆದು ನೀರಿನ ಪೈಪ್ ಅಳವಡಿಸಿದ ನಂತರ ರಸ್ತೆಯನ್ನು ಸರಿಯಾಗಿ ಮುಚ್ಚದೆ ಕಾಟಾಚಾರಕ್ಕೆ ಅದರ ಮೇಲೆ ಮಣ್ಣು ಹಾಕಿರುತ್ತಾರೆ ಇದರಿಂದ ಅಲ್ಲಿನ ನಿವಾಸಿಗಳಿಗೆ ಓಡಾಡುವುದಕ್ಕೆ ಆಗಾದಷ್ಟು ರಸ್ತೆ ಹದಗೆಟ್ಟಿರುತ್ತದೆ ಮತ್ತು ಅಲ್ಲಿನ ನಿವಾಸಿಗಳ ವಾಹನಗಳು ಸೇರಿ ಶಾಲಾ ವಾಹನಗಳು ಕೇಸರಲ್ಲಿ ಸಿಕ್ಕಿಹಾಕಿಕೊಳ್ಳುತ್ತಿವೆ ಇದರಿಂದಾಗಿ ವಿದ್ಯಾರ್ಥಿಗಳು ಸಮಯಯಕ್ಕೆ ಸರಿಯಾಗಿ ಶಾಲೆಗೆ ತಲುಪಲು ಕಷ್ಟವಾಗುತ್ತಿದೆ ಅದಕ್ಕೆ ಉದಾಹರಣೆ ಇತ್ತೀಚಿಗೆ ಎರಡು ಶಾಲಾ ವಾಹನಗಳು ಸದರಿ ರಸ್ತೆಯಲ್ಲಿನ ಕೇಸರಿನಲ್ಲಿ ಸಿಕ್ಕಿ ಹಾಕಿಕೊಂಡಿದ್ದರಿಂದ ವಾಹನದ ಚಾಲಕರು ಸ್ಥಳೀಯ ನಿವಾಸಿಗಳ ಜೊತೆ ಸೇರಿ ಸುಮಾರು 2 ಗಂಟೆ ಕಾಲ ಹರಸಾಹಸ ಮಾಡಿ ಶಾಲಾ ವಾಹನಗಳನ್ನ ಕೇಸರಿನಿಂದ ಹೊರ ತೆಗೆದಿದ್ದಾರೆ ಮತ್ತು ಶಾಲಾ ವಾಹನದಲ್ಲಿದ ಚಿಕ್ಕ ಮಕ್ಕಳು ಕೆಲ ಹೊತ್ತು ಆಂತಕದಲ್ಲಿಯೇ ಇದ್ದಿದ್ದು ಮಕ್ಕಳ ಪಾಲಕರು ಸಂಬಂಧಿಸಿದ ಅಧಿಕಾರಿಯವರಿಗೆ ಮತ್ತು ಸರ್ಕಾರಕ್ಕೆ ಹಿಡಿ ಶಾಪ ಹಾಕುತ್ತಿದ್ದಾರೆ.



ಉದಯವಾಹಿನಿ ಚಿತ್ರ

ಈಗಲಾದರೂ ಸಂಬಂಧಿಸಿದ ಅಧಿಕಾರಗಳು ಎಚ್ಚೆತ್ತುಕೊಂಡು ಸದರಿ ಹಿರೇಮಠ್ ಲೇಔಟಿನ ಮುಖ್ಯ ರಸ್ತೆಯನ್ನು ಸರಿಪಡಿಲು ಚಿಕ್ಕಮಲ್ಲಿಗವಾಡ ಗ್ರಾಮ ಪಂಚಾಯಿತ ಅಧಿಕಾರಿಗಳಲ್ಲಿ ಮತ್ತು ಸರ್ಕಾರಕ್ಕೆ ಹಿರೇಮಠ ಲೇಔಟಿನ ನಿವಾಸಿಗಳು ಒತ್ತಾಯಿಸುತ್ತಿದ್ದಾರೆ.

**ಜನಪ್ರತಿನಿಧಿಗಳಿಗೆ ಹಿಡೀ ಶಾಪ**

**ಶಾಲೆಯ ಮಕ್ಕಳಿಗೆ ಅನಾನುಕೂಲವಾಗಿರುವುದನ್ನು ಕಂಡ ಸಾರ್ವಜನಿಕರು ಗ್ರಾಮ ಪಂಚಾಯತ್ ಅಧಿಕಾರಿಗಳಿಗೂ, ಜನಪ್ರತಿನಿಧಿಗಳಿಗೆ ಹಿಡೀ ಶಾಪ ಹಾಕಿರುತ್ತಾರೆ. ಕೂಡಲೇ ಈ ರಸ್ತೆಗಳ ಗುಂಡಿಗಳನ್ನು ಮುಚ್ಚುವುದು ಡಾಂಬರ್ ಹಾಕುವುದು ಸಾರ್ವಜನಿಕರಿಗೆ ತೊಂದರೆ ಆಗದಂತೆ ಸರಿಪಡಿಸಬೇಕೆಂದು ಮನವಿಯನ್ನು ಕೂಡ ಮಾಡಿರುತ್ತಾರೆ. ಹಾಗೂ ರಸ್ತೆ ಅಭಿವೃದ್ಧಿ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಜರುಗಿಸುವಂತೆ ಮೇಲಧಿಕಾರಿಗಳಿಗೂ, ಸ್ಥಳೀಯ ಶಾಸಕರಿಗೂ ವಿನಂತಿಸಿರುತ್ತಾರೆ.**

## ಬಕ್ರೀದ ಹಬ್ಬ ಶಾಂತಿಯುತವಾಗಿ ಆಚರಿಸಿ

• **ಉದಯವಾಹಿನಿ, ಚನ್ನಮ್ಮನ ಕಿತ್ತೂರು**

ಬಕ್ರೀದ ಹಬ್ಬವನ್ನು ಶಾಂತಿ ಭಂಗವಾಗದಂತೆ ಸಡಗರ-ಸಂಭ್ರಮದಿಂದ ಆಚರಿಸಿ. ನಮ್ಮ ಇಲಾಖೆ ತಮ್ಮ ಜೊತೆಗೆ ಇದೆ. ಕಾನೂನು ಮೀರಿದವರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು. ಅದಕ್ಕೆ ಅವಕಾಶ ನೀಡದೇ ಹಬ್ಬ ಆಚರಿಸಿ ಇದಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯವೆಂದು ಪ್ರಥಮ ಸಭೆಗೆ ನೂತನವಾಗಿ ಆಗಮಿಸಿದ ಡಿಎಸ್ಪಿ ವೀರಯ್ಯಾ ಹಿರೇಮಠ ಹೇಳಿದರು.

ಪೋಲಿಸ್ ಠಾಣಾ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ಬಕ್ರೀದ ಹಬ್ಬದ ಶಾಂತಿ ಪಾಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿ ಹಬ್ಬ ಎಲ್ಲರೂ ತಮ್ಮ ಪಟ್ಟಣ-ಗ್ರಾಮಗಳಲ್ಲಿ ಶಾಂತಿ-ಸೌಹಾರ್ದತೆಯಿಂದ ಆಚರಿಸಬೇಕು. ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಎಲ್ಲರೂ ಸಹಕರಿಸಿ. ಸಣ್ಣ-ಪುಟ್ಟ ಘಟನೆ ನಡೆದರೆ ಹಿರಿಯರೇ ಬಗೆಹರಿಸಿಕೊಳ್ಳಿ ಒಂದೇ ವೇಳೆ ತಮ್ಮ ಮಾತು ಕೇಳದಿದ್ದರೆ ನಮಗೆ ತಿಳಿಸಿ. ಅಂತವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ. ಇದಕ್ಕೆ ಅವಕಾಶ ನೀಡಬೇಡಿ ಎಂದರು.

ಸಿಪಿಐ ಶಿವಾನಂದ ಗುಡಗನಟ್ಟಿ ಬಕ್ರೀದ ಹಬ್ಬ ಕುರಿತು ಮಾತನಾಡಿ ಪೋಲಿಸ್ ಗಮನಕ್ಕೆ ಬರದೇ ಇರುವ ವಿಷಯ ಸಾರ್ವಜನಿಕರು ನಮ್ಮ ಗಮನಕ್ಕೆ ತಂದರೆ ತನಿಖೆ ನಡೆಸಿ ಯಾವುದೇ ಮುಲಾಜಿಲ್ಲದೇ ಕಾನುನೂ ಕ್ರಮ ಜರುಗಿಸಲಾಗುವುದೆಂದರು.

ಈ ವೇಳೆ ಪಪಂ ಸದಸ್ಯ ಎಫ್.ಎಂ.ಜಕಾತಿ, ಅಬ್ದುಲ್ ಸುತಾರ ಗಟಕರಿ ಕಿರಣ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

●ಬಲ್ಲಾವಾದಿ ರೈತ ಹೋರಾಟ ಸಮಿತಿ ಹಾಗೂ ವಿವಿಧ ಸಂಘಟನೆಗಳ ಹೋರಾಟಕ್ಕೆ ಸಿಕ್ಕ ಅಭೂತಪೂರ್ವ ಜಯ

# ರೈತರು ಯುವ ಮುಖಂಡರ ಹೋರಾಟಕ್ಕೆ ಜಯ: ಡಾ. ಮಹೇಶಕುಮಾರ ರಾಠೋಡ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಜೇವರ್ಗಿ**

ಸುಧೀರ್ಘ ಹೋರಾಟದ ಪ್ರತಿಫಲವಾಗಿ ಬಲ್ಲಾವಾದಿ ರೈತ ಹೋರಾಟ ಸಮಿತಿ ಹಾಗೂ ವಿವಿಧ ಸಂಘಟನೆಗಳ ಹೋರಾಟಕ್ಕೆ ಸಿಕ್ಕ ಅಭೂತಪೂರ್ವ ಜಯ ಎಂದು ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಕಾರ್ಯದರ್ಶಿಗಳಾದ ಮಹೇಶ್ ಕುಮಾರ ರಾಠೋಡ ತಿಳಿಸಿದ್ದಾರೆ. ನಿರಂತರವಾಗಿ ಸುಧೀರ್ಘವಾದ ಮೂರು ವರ್ಷಗಳ ಜೇವರ್ಗಿ ಹಾಗೂ ಯಡ್ರಾಮಿ ತಾಲ್ಲೂಕಿನ ವಿವಿಧ ಹಳ್ಳಿಗಳ ರೈತರು ಹಾಗೂ ಯುವ ಮುಖಂಡರ ಹೋರಾಟದ ಫಲವಾಗಿ ಏತ ನೀರಾವರಿ ಯೋಜನೆಯ ಬಾಕಿ ಕಾಮಗಾರಿಗಳ ಟೆಂಡರ್‌ಗಳನ್ನು ಕರೆಯಲಾಗಿದೆ. ಇದರಿಂದ ರೈತರಲ್ಲಿ ಮುಖದಲ್ಲಿ ಹರ್ಷ ಉಂಟಾಗಿದೆ.

ಜೇವರ್ಗಿ ಹಾಗೂ ಯಡ್ರಾಮಿ ಭಾಗದ ನಮ್ಮ ರೈತರ ಬಾಳಿಗೆ ಬೆಳಕನ್ನು ತರುವ ಯೋಜನೆಯ ಗುಣಮಟ್ಟದ ಹೆಸರಿನಲ್ಲಿ ಬ್ಲಾಕ್ ಮೇಲ್ ದಂದೆ ಮತ್ತು ಅವ್ಯವಾರ ಆಗುವ ಸಾಧ್ಯತೆಗಳಿದ್ದು ಯೋಜನೆಯನ್ನು ಪ್ರಾಮಾಣಿಕವಾಗಿ ಹಾಗೂ ಪಾರದರ್ಶಕವಾಗಿ ನಿರ್ವಹಿಸಬೇಕು. ಇಲ್ಲಿ ಯಾವುದೇ ರೀತಿಯ ಪಕ್ಷಪಾತ ಅಥವಾ ಭ್ರಷ್ಟಾಚಾರಕ್ಕೆ ಅವಕಾಶ ಮಾಡಿಕೊಡದಂತೆ, ಮಲ್ಲಾಬಾದ ಏತ ನೀರಾವರಿ ರೈತ ಹೋರಾಟ ಸಮಿತಿಯು ಕಾವಲುಗಾರವಾಗಿ ಕೆಲಸ ಮಾಡಲು ಮುಂದಾಗಿದೆ. ಟೆಂಡರ್ ಪಡೆಯುವ ಗುತ್ತಿಗೆದಾರರಿಗೆ, ನೀರಾವರಿ ಕಾಮಗಾರಿ ಬೇರೆ ಯೋಜನೆ ಕಾಮಗಾರಿ ನಡೆಸಿದಂತೆ ಬೇಕಾಬಿಟ್ಟಿಯಾಗಿ ನಡೆಸಿದರೆ ಅದಕ್ಕೆ ನಾವು ಅವಕಾಶ ಕೊಡುವು ದಿಲ್ಲ, ನಾವು ಹೆಜ್ಜೆ-ಹೆಜ್ಜೆಗೂ ಗುಣಮಟ್ಟದ ಕಾಮಗಾರಿ ಆಗುವಂತೆ ಕಾಯುತ್ತೇವೆ, ನೀವೇನಾದರೂ ಜನಪ್ರತಿನಿಧಿಗಳಿಗೆ-ಭ್ರಷ್ಟ ಅಧಿಕಾರಿಗಳಿಗೆ ಪರ್ಸೆಂಟೇಜ್ ಕೊಟ್ಟು ಕಳಪೆ ಕಾಮಗಾರಿ ನಡೆಸುವ ಯೋಚನೆ ಇಟ್ಟುಕೊಂಡರೆ ಅದು ಸಾಧ್ಯವಾಗುವದಿಲ್ಲ.

ಏಕೆಂದರೆ, ಇಲ್ಲಿ ಮಲ್ಲಾಬಾದ ಏತ ನೀರಾವರಿ ರೈತ ಹೋರಾಟ ಸಮಿತಿಯ ಮುಖಂಡರು ಮತ್ತು ಮಲ್ಲಾಬಾದ ನೀರಾವರಿ ಜಮೀನುಗಳ ನೀರು ಬಳಕೆದಾರರ ಸಂಘ, ನಮ್ಮ ರೈತರ ಅಭಿವೃದ್ಧಿ ಯೋಜನೆಗೆ ಯಾರೇ ಯಾವದೇ ರೀತಿಯ ಅಡ್ಡಿ ಮಾಡಿದರೆ ಅದನ್ನು ಸಹಿಸುವದಿಲ್ಲ. ನಮಗೆ ನಮ್ಮ ರೈತರೇ ಎಲ್ಲಕ್ಕಿಂತ ಮುಖ್ಯ.

ಹೋರಾಟದ ಯಶಸ್ಸಿಗೆ ಪ್ರತ್ಯಕ್ಷವಾಗಿ, ಪರೋಕ್ಷವಾಗಿ ಕಾರಣರಾದ ಎಲ್ಲರಿಗೂ ಮಲ್ಲಾಬಾದ ಏತ ನೀರಾವರಿ ರೈತ ಹೋರಾಟ ಸಮಿತಿಯ ವತಿಯಿಂದ ಮುಖಂಡರಾದ ಡಾ. ಮಹೇಶಕುಮಾರ ರಾಠೋಡ,ಬಾಬು ಬಿ ಪಾಟೀಲ, ಇಬ್ರಾಹಿಂ ಪಟೇಲ್ ಯಾಳವಾರ, ರಾಜಾ ಪಟೇಲ್, ಯಾಳವಾರ, ಗುರಾನಾಥ್ ಸಾಹು ರಾಜವಾಳ, ಮಹಮ್ಮದ್ ಚೌದರಿ, ಬಿ ಎಸ್ ಮಾಲಿ ಪಾಟೀಲ್. ಮತ್ತು ಸಂಪೂರ್ಣ ಮಲ್ಲಾಬಾದ ಏತ ನೀರಾವರಿ ರೈತ ಹೋರಾಟ ಸಮಿತಿಯ ಸಮಸ್ತ ಸಂಚಾಲಕರು, ಸದಸ್ಯರು, ಮತ್ತು ಎಲ್ಲಾ ರೈತ ಮುಖಂಡರು.ತುಂಬು ಹೃದಯದ ಅಭಿನಂದನೆಗಳನ್ನು ತಿಳಿಸಿದ್ದಾರೆ.

ಹೋರಾಟದೊಂದಿಗೆ, ಕೈ ಜೋಡಿಸಿ ಹೋರಾಟ ಯಶಸ್ವಿಗೊಳಿಸಿದ ಎಲ್ಲಾ ರೈತ ಬಾಂಧವರಿಗೆ, ಪ್ರಗತಿಪರ ಸಂಘಟನೆಗಳ ಪದಾಧಿಕಾರಿಗಳಿಗೆ, ವಿಶೇಷವಾಗಿ ಆದರ್ಶ ಗ್ರಾಮ ಸಮಿತಿ, ಯಾಳವಾರದ ಅಧ್ಯಕ್ಷ, ಹಾಗೂ ಎಲ್ಲಾ ಸದಸ್ಯರಿಗೆ, ಹೋರಾಟದೊಂದಿಗೆ ಕೈ ಜೋಡಿಸಿದ ವಿವಿಧ ಗ್ರಾಮಗಳ ಗ್ರಾಮಸ್ಥರಿಗೆ, ಮತ್ತು ಯಾವತ್ತು ನಮ್ಮ ಹೋರಾಟಕ್ಕೆ ಜೊತೆಗೂಡಿ ಹೆಜ್ಜೆ ಹಾಕಿರುವ ಎಲ್ಲರಿಗೂ ಹೃದಯ ತುಂಬಿ ಅಭಿನಂದನೆಗಳು.

**ಶಾಸಕರಲ್ಲಿ ಮನವಿ:**

**ರೈತರ ಬಾಳಿನಲ್ಲಿ ಬೆಳಕನ್ನು ತರುವ ಮಹತ್ವದ ಯೋಜನೆಯಲ್ಲಿ ಅವ್ಯವಹಾರ ಭ್ರಷ್ಟಾಚಾರ ನಡೆಯದಂತೆ ಎಚ್ಚರ ವಹಿಸಬೇಕು, ಅದಕ್ಕಾಗಿಯೇ ನಮ್ಮ ರೈತರು ಹಾಗೂ ಸಾರ್ವಜನಿಕರು ಸೇರಿದಂತೆ ತೆರಿಗೆದಾರರ ಹಣದಲ್ಲಿ ಲಕ್ಷಗಟ್ಟಲೆ ಸಂಬಳ ಮತ್ತು ಇತರೆ ಭತ್ಯೆ ಕೊಡುತ್ತಿರುವದು. ಶಾಸಕರಾಗಿ ನಿಮ್ಮ ಕರ್ತವ್ಯ ಸರಿಯಾಗಿ ನಿರ್ವಹಿಸಬೇಕು, ಮತ್ತು ಇಐ ಸಂಸ್ಥೆಯ ವತಿಯಿಂದ ಜೇವರ್ಗಿ ಮತಕ್ಷೇತ್ರದ ವಿವಿಧ ಕಾಮಗಾರಿಗಳಲ್ಲಿ ಲೂಟಿ ಮಾಡಿದಂತೆ ಮಾಡಲು ಅವಕಾಶ ಮಾಡಿಕೊಡಬಾರದು.**

**ನಮ್ಮ ನಿರಂತರ ಒತ್ತಾಯದ ಹಿಂದೆ ಇರುವ ಕಾಳಜಿಯನ್ನು ಅರ್ಥ ಮಾಡಿಕೊಂಡು ಟೆಂಡರ್ ಪ್ರಕ್ರಿಯೆಯನ್ನು ಆರಂಭಿಸಿದ ಎಲ್ಲಾ ನೀರಾವರಿ ಇಲಾಖೆಯ ಅಧಿಕಾರಿ ವರ್ಗಕ್ಕೆ, ತಾವು ಮಾತು ಕೊಟ್ಟಂತೆ ಮಂಡಳಿ ಸಭೆಯಲ್ಲಿ ಅನುಮೋದನೆ ಕೊಡಿಸುವಲ್ಲಿ ಮುತುವರ್ಜಿ ವಹಿಸಿದ ರಾಜ್ಯದ ನೀರಾವರಿ ಸಚಿವರಾದ ಹಾಗೂ ಉಪಮುಖ್ಯ ಮಂತ್ರಿಯಾದ ಶ್ರೀ ಡಿ ಕೆ ಶಿವಕುಮಾರ್ ಅವರಿಗೆ,ಮಂಡಳಿಯ ಅಧ್ಯಕ್ಷರಾದ ರಾಜ್ಯದ ಮುಖ್ಯ ಮಂತ್ರಿಗಳಾದ ಸನ್ಮಾನ್ಯ ಸಿದ್ದರಾಮಯ್ಯ ನವರಿಗೆ ಜೇವರ್ಗಿ ಮತ್ತು ಯಡ್ರಾಮಿಯ ಎಲ್ಲಾ ಜನರ ಪರವಾಗಿ ಸಂಘ- ಸಂಸ್ಥೆಗಳ ಪರವಾಗಿ ಮತ್ತು ವಿಶೇಷವಾಗಿ ಮಲ್ಲಾಬಾದ ಏತ ನೀರಾವರಿ ರೈತ ಹೋರಾಟ ಸಮಿತಿಯ ಪರವಾಗಿ ಅಭಿನಂದನೆಗಳು.**

**-ಡಾ.ಮಹೇಶಕುಮಾರ ರಾಠೋಡ**
**ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಕಾರ್ಯದರ್ಶಿ**

## ಮಿನಿ ನ್ಯೂಸ್

### ಧಾರಾಕಾರ ಮಳೆಗೆ ಜಿಲ್ಲೆಯ ನದಿ ಪ್ರದೇಶಗಳಲ್ಲಿ ಪ್ರವಾಹ ಭೀತಿ

• **ಉದಯವಾಹಿನಿ ಕಲಬುರಗಿ**

ಜಿಲ್ಲೆಯಲ್ಲಿ ನಿರಂತರ ಮಳೆ ಬೀಳುತ್ತಿದ್ದು, ನೆರೆಯ ಮಹಾರಾಷ್ಟ್ರದಲ್ಲಿಯೂ ಸಹ ಭಾರೀ ಮಳೆ ಸುರಿಯುತ್ತಿರುವುದರಿಂದ ಜಿಲ್ಲೆಯ ಭೀಮಾ ನದಿ ಸೇರಿದಂತೆ ವಿವಿಧ ನದಿ ಪ್ರದೇಶಗಳಲ್ಲಿ ಪ್ರವಾಹ ಭೀತಿಯುಂಟಾಗಿದೆ.

ಭಾರೀ ಮಳೆಯಿಂದಾಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ಹಿಪ್ಪರಗಾ ಗ್ರಾಮದ ಸೇತುವೆ ಮುಳುಗಡೆಯಾಗಿದ್ದು, ಕುದಮೂಡ ಹಾಗೂ ಕಲಕುಟಗಾ ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ. ಮಳೆಯಿಂದಾಗಿ ಸೇತುವೆ ಮುಳುಗಡೆ ಹಿನ್ನೆಲೆಯಲ್ಲಿ ವಾಹನ ಸವಾರರ ಪರದಾಟ ನಡೆದಿದ್ದು, ಗ್ರಾಮೀಣ ಭಾಗದಲ್ಲಿ ಸುರಿದ ಮಳೆಯಿಂದಾಗಿ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ನೆರೆಯ ಮೇಲ್ಭಾಗದ ಮಹಾರಾಷ್ಟ್ರದಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಭೀಮಾ ನದಿಗೆ ಭಾರೀ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲಾಗಿದೆ. ಭೀಮೆಗೆ ನೀರು ಬಿಡುಗಡೆ ಮಾಡಲಾಗಿದೆ. ತುಂಬಿ ಹರಿಯುತ್ತಿರುವ ಹಿನ್ನೆಲೆ, ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಸೇತುವೆ ಮುಳುಗಡೆ ಹಂತಕ್ಕೆ ಬಂದಿದ್ದು, ಅಲ್ಲಿನ ನಿವಾಸಿಗಳು ಪ್ರವಾಹದ ಭೀತಿಯನ್ನು ಎದುರಿಸುತ್ತಿದ್ದಾರೆ.

ಇನ್ನೂ ಮಹಾರಾಷ್ಟ್ರದಿಂದ ಅಪಾರ ಪ್ರಮಾಣದಲ್ಲಿ ಭೀಮೆಗೆ ನೀರು ಹರಿಬಿಟ್ಟ ಪರಿಣಾಮವಾಗಿ ಭೀಮಾ ನದಿಯ ತಟದ ಜನರಲ್ಲಿ ಪ್ರವಾಹದ ಆತಂಕ ಮನೆಮಾಡಿದೆ.

### ಕಾಂಗ್ರೆಸ್ ಪಕ್ಷದ ಫ್ಲೆಕ್ಸ್ ಅಳವಡಿಕೆ ಶಾಸಕರು ಕೆಂಡಾಮಂಡಲ

• **ಉದಯವಾಹಿನಿ ಹಗರಿಬೊಮ್ಮನಹಳ್ಳಿ**

ಪಟ್ಟಣದ ಎಪಿಎಂಸಿ ಆವರಣದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ ಹತ್ತಿರ ಅಳವಡಿಸಲಾಗಿದ್ದ ಕಾಂಗ್ರೆಸಿನ ಫ್ಲೆಕ್ಸ್ ನೋಡಿ ಶಾಸಕ ಕೆ. ನೇಮಿರಾಜ್ ನಾಯ್ಕ್ ಕೆಂಡಾಮಂಡಲರಾಗಿ ಪುರಸಭೆಯ ಮುಖ್ಯಾಧಿಕಾರಿ ಪ್ರಭಾಕರ ಪಾಟೀಲರನ್ನು ತರಾಟಗೆ ತೆಗೆದುಕೊಂಡರು.

ಇದು ಸರ್ಕಾರಿ ಕಾರ್ಯಕ್ರಮ ಇಲ್ಲಿ ಒಂದು ಪಕ್ಷದ ಫ್ಲೆಕ್ಸ್ ಅಳವಡಿಸಲು ಹೇಗೆ ಬಿಟ್ಟಿದ್ದೀರಿ. ನಿಮಗೆ ಸಾಮಾನ್ಯ ಜ್ಞಾನ ಇಲ್ಲವೇ. ಶಿಷ್ಟಾಚಾರದ ಬಗ್ಗೆ ಮಾಹಿತಿ ಗೊತ್ತಿಲ್ಲ. ನಿಮ್ಮಂಥ ಅಧಿಕಾರಿಗಳು ಮನೆಗೆ ಹೋಗುವುದು ಉತ್ತಮ ಎಂದು ಹಿಗ್ಗಾ ಮಗ್ಗಾ ಕ್ಲಾಸ್ ತೆಗೆದುಕೊಂಡುರು. ಶಾಸಕರ ಕೆಂಡಾಮಂಡಲ ನೋಡಿ ಸಂಸದ ಈ ತುಕಾರಾಮ ಗಲಿಬಿಲಿಗೊಂಡರು. ಸರ್ಕಾರಿ ಕಾರ್ಯಕ್ರಮದಲ್ಲಿ ಈ ರೀತಿಯ ಯಾರು ಮಾಡಬಾರದು. ಇಂಥ ವಿಷಯಗಳನ್ನು ನಾನು ಬೆಂಬಲಿಸುವುದಿಲ್ಲ ಈ ರೀತಿ ಮಾಡಬಾರದು ಎಂದು ಕಾಂಗ್ರೆಸ್ ಕಾರ್ಯಕರ್ತರಿಗೆ ತಿಳಿ ಹೇಳಿ ಶಾಸಕರನ್ನು ಸಮಾನಪಡಿಸಿ ಅಲ್ಲಿಂದ ಕರೆದುಕೊಂಡು ಹೋದರು. ಭೀಮ ನಾಯ್ಕ್ ಬೆಂಬಲಿಗರ ಅತಿರೇಕದಿಂದ ಇಂತಹ ಘಟನೆ ನಡೆದಿದೆ ಎಂದು ಅಲ್ಲಿ ನೆರೆದಿದ್ದ ಸಾರ್ವಜನಿಕರು ಮಾತಾಡಿಕೊಂಡರು. ತಕ್ಷಣ ಅಲ್ಲಿ ಹಾಕಲಾಗಿದ್ದ ಫ್ಲೆಕ್ಸನ್ನು ಪುರಸಭೆಯ ಪೌರ ಕಾರ್ಮಿಕರು ತೆರವುಗೊಳಿಸಿದರು.

### ಬೇಡಿಕೆ ಈಡೇರಿಕೆಗೆ ಒತ್ತಾಯ

• **ಉದಯವಾಹಿನಿ ಗಂಗಾವತಿ**

ನಗರಸಭೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವ ಪೌರಸೇವಾ ನೌಕರರಿಗೆ ಜ್ಯೋತಿ ಸಂಜೀವಿನಿ, ನಗದು ರಹಿತ ಚಿಕಿತ್ಸಾ, ಎಸ್‌ಎಫ್‌ಸಿ ವೇತನ ನಿಧಿಯಿಂದ ವೇತನ ಪಾವತಿ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ, ನಗರಸಭೆ ಕಚೇರಿ ಎದುರು ಪೌರಸೇವಾ ನೌಕರರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಸಂಘಟನೆ ಅಧ್ಯಕ್ಷ ವಹೀದ್ ಖಾನ್ ಮಾತನಾಡಿ, ಪೌರಸೇವಾ ನೌಕರರ ಸಂಘ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಸಂಘವಾಗಿದೆ. ಸರ್ಕಾರಿ ನೌಕರರಿಗೆ ನೀಡಬೇಕಾದ ಸವಲತ್ತು ನೀಡದಿದ್ದರೂ ಹಲವು ವರ್ಷಗಳಿಂದ ಕೆಲಸ ಮಾಡಲಾಗುತ್ತಿದೆ. ಸರ್ಕಾರ ಮಾತ್ರ ನಮ್ಮತ್ತ ಚಿತ್ತಹರಿಸುತ್ತಿಲ್ಲ. ಹಾಗಾಗಿ ಪೌರಸೇವಾ ನೌಕರರ ಸಂಘ ರಾಜ್ಯದ ಎಲ್ಲೆಡೆ ಕಾರ್ಯ ಸ್ಥಗಿತಗೊಳಿಸಿ, ಬೇಡಿಕೆಗಳ ಈಡೇರಿಕೆಗೆ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುತ್ತಿದೆ' ಎಂದರು.

### ಕಾಂಗ್ರೆಸ್ ಮುಸ್ಲಿಮರ ಓಲೈಕೆ ಬಿಡಲಿ

• **ಉದಯವಾಹಿನಿ ಶಿವಮೊಗ್ಗ**



ಹುಬ್ಬಳ್ಳಿಯಲ್ಲಿ ಗಲಭೆಯಲ್ಲಿ ಪಾಲ್ಗೊಂಡ ಮುಸ್ಲಿಮರ ಮೇಲಿನ ಪ್ರಕರಣಗಳ ಹಿಂತೆಗೆತದ ತೀರ್ಮಾನ ರದ್ದುಗೊಳಿಸಿ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಕಪಾಳಮೋಕ್ಷ ಮಾಡಿದೆ. ಇನ್ನಾದರೂ ಕಾಂಗ್ರೆಸ್ ಮುಸ್ಲಿಮರ ಓಲೈಕೆ ಬಿಡಲಿ' ಎಂದು ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಆಗ್ರಹಿಸಿದರು. ಕಾಂಗ್ರೆಸ್ ತನ್ನ ಮನಸ್ಥಿತಿ ಬದಲಾಯಿಸಿಕೊಳ್ಳದಿದ್ದರೆ ಜನರು ದಂಗೆ ಏಳುವ ಕಾಲ ದೂರವಿಲ್ಲ' ಎಂದು ಎಚ್ಚರಿಸಿದರು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಸ್ಲಿಂ ಯುವಕನ ಕೊಲೆಯಾಗಿದೆ. ಅದು ತಪ್ಪು. ಈ ಹಿಂದೆ ಹಿಂದೂಗಳ ಕೊಲೆಗಳು ನಡೆದವಲ್ಲ, ಆಗ ಸರ್ಕಾರ ಏನು ಮಾಡುತ್ತಿತ್ತು. ಮುಸ್ಲಿಂ ಮುಖಂಡರು ಈಗ ಕಾಂಗ್ರೆಸ್ ಪಕ್ಷಕ್ಕೆ ಸಾಮೂಹಿಕವಾಗಿ ರಾಜೀನಾಮೆ ಕೊಡುವ ಹೇಳಿಕೆ ನೀಡಿದ ಮೇಲೆ ಸರ್ಕಾರಕ್ಕೆ ಬುದ್ಧಿ ಬಂದಿದೆಯೇ ಕಾನೂನು-ಸುವ್ಯವಸ್ಥೆ ಮಾತು ಈಗ ಕೇಳುತ್ತಿದೆ. ಪೊಲೀಸರ ವರ್ಗಾವಣೆ ಮಾಡಲಾಗುತ್ತಿದೆ ಎಂದು ವ್ಯಂಗ್ಯವಾಡಿದರು.

### ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ನಿರಂತರ ಮಳೆ-ಆಸ್ತಿಪಾಸ್ತಿ ಹಾನಿ

• **ಉದಯವಾಹಿನಿ ಬಂಟ್ವಾಳ**

ತಾಲೂಕಿನಾದ್ಯಂತ ದಿನವಿಡೀ ಸಾಧಾರಣ ಮಳೆಯಾಗಿದ್ದು, ಮಳೆಹಾನಿ ಮುಂದುವರಿದಿದೆ. ಬಾಳ್ತಿಲ ಗ್ರಾಮದ ಯಶೋದರವರ ಮನೆಯ ಹಿಂದೆ ಬರೆಯ ಮಣ್ಣು ಜರಿದು ಬಿದ್ದು ನಷ್ಟ ಸಂಭವಿಸಿದೆ.ಮೇರಮಜಲು ಗ್ರಾಮದ ತೇವುಕಾಡು ನಿವಾಸಿ ರೇವತಿ ಯವರ ಮನೆಗೆ ತಾಗಿದ ಆವರಣ ಗೋಡೆ ಕುಸಿದಿದ್ದು ಮನೆಗೆ ಹಾನಿ ಸಂಭವ ಇದೆ.


ಉದಯವಾಹಿನಿ ಚಿತ್ರ

ಕಡೇಶ್ವಾಲ್ಯ ಗ್ರಾಮದ ಪಾರ್ವತಿ ಯವರ ಮನೆಗೆ ಭಾಗಶಃ ಹಾನಿಯಾಗಿದೆ. ಪಾಣೆ ಮಂಗಳೂರು ಗ್ರಾಮದ ತೆಕ್ಕಿಗುಡ್ಡೆ ಎಂಬಲ್ಲಿ ಮೋಕ್ಷಿತ ರವರ ವಾಸ್ತವ್ಯದ ಮನೆಗೆ ಮಳೆ ಗಾಳಿಯಿಂದ ಹಾನಿಯಾಗಿದ್ದು, ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ನಷ್ಟ ಅಂದಾಜಿಸಿದ್ದಾರೆ.



# ಈ ಸಲ ಕಪ್ ನಮ್ದೆ ಇದಕ್ಕೆ ಸಾಕ್ಷಿ ಈ ಅಂಕಿ ಅಂಶಗಳು..!

ಐಪಿಎಲ್ ಪ್ಲೇಆಫ್‌ನ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಭರ್ಜರಿ ಜಯ ಸಾಧಿಸಿದೆ. ಮುಲ್ಲನ್‌ಪುರ್‌ನ ಪಿಸಿಎ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಂಜಾಬ್ ಕಿಂಗ್ಸ್ ತಂಡವು 101 ರನ್‌ಗಳಿಸಿ ಆಲೌಟ್ ಆಯಿತು. ಈ ಗುರಿಯನ್ನು ಆರ್‌ಸಿಬಿ 10 ಓವರ್‌ಗಳಲ್ಲಿ ಚೇಸ್ ಮಾಡಿ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರಾಯಲ್ಲಾಗಿಯೇ ಫೈನಲ್‌ಗೆ ಎಂಟ್ರಿ ಕೊಟ್ಟಿದೆ. ಅದು ಕೂಡ 10 ಓವರ್‌ಗಳಲ್ಲಿ ಪಂದ್ಯ ಮುಗಿಸಿ. ಅಂದರೆ ಐಪಿಎಲ್ ಇತಿಹಾಸದಲ್ಲೇ ಯಾವುದೇ ತಂಡ 10 ಓವರ್‌ಗಳಲ್ಲಿ ಪ್ಲೇಆಫ್ ಪಂದ್ಯ ಮುಗಿಸಿ ಫೈನಲ್‌ಗೇರಿದ ಇತಿಹಾಸವಿಲ್ಲ. ಆದರೆ ಈ ಬಾರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಹೊಸ ಇತಿಹಾಸ ನಿರ್ಮಿಸಿ ಫೈನಲ್ ಫೈಟ್‌ಗೆ ಎಂಟ್ರಿ ಕೊಟ್ಟಿದೆ. ಈ ಎಂಟ್ರಿಯೊಂದಿಗೆ ಈ ಸಲ ಕಪ್ ನಮ್ದೆ ಎಂಬ ಘೋಷವಾಕ್ಯ ಕೂಡ ಜೋರಾಗಿ ಕೇಳಿ ಬರುತ್ತಿದೆ. ಈ ಘೋಷವಾಕ್ಯದೊಂದಿಗೆ ಆರ್‌ಸಿಬಿ ಟ್ರೋಫಿ ಎತ್ತಿ ಹಿಡಿಯುವುದು ಬಹುತೇಕ ಖಚಿತ. ಏಕೆಂದರೆ ಈ ಹಿಂದಿನ ಅಂಕಿ ಅಂಶಗಳನ್ನು ಗಮನಹರಿಸಿದರೆ, ಈ ಬಾರಿ ಟ್ರೋಫಿ ಗೆಲ್ಲುವ ಫೇವರೇಟ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು. **ಇದಕ್ಕೆ ಸಾಕ್ಷಿ...**



- **ಐಪಿಎಲ್ ಇತಿಹಾಸದಲ್ಲಿ ಅಂಕ ಪಟ್ಟಿಯಲ್ಲಿ ದ್ವಿತೀಯ ಸ್ಥಾನ ಅಲಂಕರಿಸಿದ ತಂಡದ ಕಪ್ ಗೆಲ್ಲುವ ಫೇವರೇಟ್ ಆಗಿ ಗುರುತಿಸಿಕೊಂಡಿದೆ. ಈ ಬಾರಿ ಆರ್‌ಸಿಬಿ ಅಂಕ ಪಟ್ಟಿಯಲ್ಲಿ ದ್ವಿತೀಯ ಸ್ಥಾನವನ್ನು ಅಲಂಕರಿಸಿದೆ.**
- **ಅಂಕ ಪಟ್ಟಿಯಲ್ಲಿ ದ್ವಿತೀಯ ಸ್ಥಾನ ಅಲಂಕರಿಸಿದ ತಂಡ ಎಲ್ಲಾ ಸೀಸನ್‌ನಲ್ಲೂ ಫೈನಲ್‌ಗೇರಿದೆ. ಅದರಂತೆ ಈ ಬಾರಿ ಕೂಡ ಆರ್‌ಸಿಬಿ ಫೈನಲ್‌ಗೆ ಎಂಟ್ರಿ ಕೊಟ್ಟಿದೆ.**
- **ಪಾಯಿಂಟ್ಸ್ ಟೇಬಲ್‌ನಲ್ಲಿ ದ್ವಿತೀಯ ಸ್ಥಾನ ಅಲಂಕರಿಸಿದ ತಂಡ ಬಹುತೇಕ ಬಾರಿ ಕಪ್ ಗೆದ್ದಿದೆ. ಅಂಕ ಪಟ್ಟಿಯಲ್ಲಿ 2ನೇ ಸ್ಥಾನದಲ್ಲಿದ್ದ ತಂಡವು ಐಪಿಎಲ್‌ನಲ್ಲಿ ಕಪ್ ಗೆಲ್ಲುವ ಸಾಧ್ಯತೆ 57 ರಷ್ಟು. ಅದೇ ಮೊದಲ ಸ್ಥಾನದಲ್ಲಿದ್ದ ತಂಡದ ಚಾನ್ಸ್ ಶೇ.35 ರಷ್ಟು ಮತ್ತು ಮೂರನೇ ಸ್ಥಾನದಲ್ಲಿ ಕಾಣಿಸಿಕೊಂಡ ತಂಡದ ಚಾನ್ಸ್ ಶೇ. 7 ರಷ್ಟಿದೆ. ಅಂದರೆ ಇಲ್ಲಿ ದ್ವಿತೀಯ ಸ್ಥಾನದಲ್ಲಿದ್ದ ತಂಡಗಳೇ ಹೆಚ್ಚಿನ ಬಾರಿ ಟ್ರೋಫಿ ಗೆದ್ದಿದೆ.**
- **ಐಪಿಎಲ್ ಇತಿಹಾಸದಲ್ಲಿ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಗೆದ್ದ ತಂಡವು 11 ಬಾರಿ ಟ್ರೋಫಿಯನ್ನು ಎತ್ತಿ ಹಿಡಿದಿದೆ. ಈ ಬಾರಿ ಮೊದಲ ಕ್ವಾಲಿಫೈಯರ್ ಪಂದ್ಯ ಗೆದ್ದ ತಂಡ ಆರ್‌ಸಿಬಿ.**
- **ಇನ್ನು ಕಳೆದ 7 ವರ್ಷಗಳಿಂದ ಮೊದಲ ಕ್ವಾಲಿಫೈಯರ್ ಪಂದ್ಯವನ್ನು ಗೆದ್ದ ತಂಡ ಫೈನಲ್‌ನಲ್ಲಿ ಸೋತಿಲ್ಲ. ಹೀಗಾಗಿ ಈ ಬಾರಿ ಆರ್‌ಸಿಬಿ ತಂಡ ಗೆಲ್ಲುವ ಸಾಧ್ಯತೆ ಹೆಚ್ಚಿದೆ.**

ಈ ಮೇಲಿನ ಅಂಕಿ ಅಂಶಗಳ ಪ್ರಕಾರ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಕಪ್ ಗೆಲ್ಲುವುದು ಬಹುತೇಕ ಖಚಿತ. ಅದರಂತೆ ಜೂನ್ 3 ರಂದು ಅಹಮದಾಬಾದ್‌ನ ನರೇಂದ್ರ ಮೋದಿಯಲ್ಲಿ ಈ ಸಲ ಕಪ್ ನಮ್ದೆ ಎನ್ನುವ ಘೋಷವಾಕ್ಯ ಮೊಳಗುವುದರಲ್ಲಿ ಡೌಟೇ ಇಲ್ಲ ಎನ್ನಬಹುದು.

# ಇದೆಂಥ ಕೀಳುಮಟ್ಟದ ವರ್ತನೆ

## ಕೊಹ್ಲಿ ವಿರುದ್ಧ ಆಕ್ರೋಶ

ಇಂಡಿಯನ್ ಪ್ರೀಮಿಯರ್ ಲೀಗ್‌ನ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಗೆದ್ದು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೈನಲ್‌ಗೆ ಪ್ರವೇಶಿಸಿದೆ. ಮುಲ್ಲನ್‌ಪುರ್‌ನ ಪಿಸಿಎ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಂಜಾಬ್ ಕಿಂಗ್ಸ್ ತಂಡವು ನಿರೀಕ್ಷಿತ ಪ್ರದರ್ಶನ ನೀಡಿರಲಿಲ್ಲ. ಆರ್‌ಸಿಬಿ ವೇಗಿಗಳ ಮಾರಕ ದಾಳಿಗೆ ತತ್ತರಿಸಿದ ಪಂಜಾಬ್ ಪಡೆ 60 ರನ್‌ಗಳಿಗೆ 6 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಈ ಹಂತದಲ್ಲಿ ಪಂಜಾಬ್ ಕಿಂಗ್ಸ್ ಇಂಪ್ಯಾಕ್ಟ್ ಸಬ್ ಆಗಿ ಮುಶೀರ್ ಖಾನ್ ಅವರನ್ನು ಕಣಕ್ಕಿಳಿಸಿದ್ದರು. ವಿಶೇಷ ಎಂದರೆ ಇದು ಮುಶೀರ್ ಅವರ ಚೊಚ್ಚಲ ಐಪಿಎಲ್ ಪಂದ್ಯವಾಗಿತ್ತು. ಇತ್ತ ಮೊದಲ ಪಂದ್ಯವಾಡಲು ಕ್ರೀಸ್‌ಗೆ ಆಗಮಿಸಿದ ಯುವ ಆಟಗಾರನನ್ನು ವಿರಾಟ್ ಕೊಹ್ಲಿ ಅಪಹಾಸ್ಯ ಮಾಡುತ್ತಿರುವುದು ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಮುಶೀರ್ ಖಾನ್ ಬ್ಯಾಟಿಂಗ್‌ಗೆ ಸಜ್ಜಾಗುತ್ತಿದ್ದರೆ, ಅತ್ತ ಸ್ಲಿಪ್‌ನಲ್ಲಿದ್ದ ವಿರಾಟ್ ಕೊಹ್ಲಿ ಇವನು ನೀರು ಕೊಡುವವನು ಎಂದು ಹೀಯಾಳಿಸಿದ್ದಾರೆ. ಇತರೆ ಆಟಗಾರರನ್ನು ಕರೆದು ಕೊಹ್ಲಿ ನೀರು ಕೊಡುವವನು ಎಂದು ಅಪಹಾಸ್ಯ ಮಾಡುತ್ತಿರುವ ವಿಡಿಯೋ ಇದೀಗ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಮುಶೀರ್ ಖಾನ್ ಕಳೆದ 14 ಪಂದ್ಯಗಳಲ್ಲಿ ಇಂಪ್ಯಾಕ್ಟ್ ಸಬ್ ಲಿಸ್ಟ್‌ನಲ್ಲಿ ಕಾಣಿಸಿಕೊಂಡಿದ್ದರು. ಈ ವೇಳೆ ಅವರು ಪಂಜಾಬ್ ಕಿಂಗ್ಸ್ ಪ್ಲೇಯಿಂಗ್ ಇಲೆವೆನ್‌ನ ಆಟಗಾರರಿಗೆ ನೀರು ತಂದುಕೊಡುತ್ತಿದ್ದರು. ಇದನ್ನೇ ಪ್ರಸ್ತಾಪಿಸಿ ವಿರಾಟ್ ಕೊಹ್ಲಿ, ಮುಶೀರ್ ಅವರನ್ನು ಹೀಯಾಳಿಸಿದ್ದಾರೆ. ವಿರಾಟ್ ಕೊಹ್ಲಿಯ ಈ ವರ್ತನೆಗೆ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಭಾರೀ ಆಕ್ರೋಶಗಳು ವ್ಯಕ್ತವಾಗುತ್ತಿದೆ. ಕ್ರಿಕೆಟ್ ಅಂಗಳದ ಕಿಂಗ್ ಎನಿಸಿಕೊಂಡವನಿಂದ ಮೂಡಿಬಂದ ಈ ವರ್ತನೆ ನಿಜಕ್ಕೂ ಅಸಹ್ಯ ಎಂದು ಅನೇಕರು ಹೇಳಿದರೆ, ಇನ್ನೂ ಕೆಲವರು ಎಲ್ಲಾರೂ ಬಾಲ್ ಬಾಯ್, ವಾಟರ್ ಬಾಯ್ ಆಗಿಯೇ ಕ್ರಿಕೆಟ್ ಅಂಗಳಕ್ಕೆ ಕಾಲಿಟ್ಟಿದ್ದಾರೆ ಎಂದು ಪ್ರತಿಕ್ರಿಯಿಸಿದ್ದಾರೆ.

ಇನ್ನೂ ಕೆಲವರು ಬಾಲ್ ಬಾಯ್ ಆಗಿದ್ದ ಸಚಿನ್ ತೆಂಡೂಲ್ಕರ್ ಅವರ ಉದಾಹರಣೆಯನ್ನು ನೀಡಿ ವಿರಾಟ್ ಕೊಹ್ಲಿ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಮತ್ತೆ ಕೆಲವರು ವಿರಾಟ್ ಕೊಹ್ಲಿಯ ಫ್ಯಾನ್ಸ್ ಎಂದಿರುವ ಮುಶೀರ್ ಖಾನ್ ಅವರ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ಒಟ್ಟಿನಲ್ಲಿ ಚೊಚ್ಚಲ ಪಂದ್ಯವಾಡಲು ಆಗಮಿಸಿದ ಯುವ ಆಟಗಾರನನ್ನು ವಿನಾಕಾರಣ ಅಪಹಾಸ್ಯ ಮಾಡುವ ಮೂಲಕ ವಿರಾಟ್ ಕೊಹ್ಲಿ ತಮ್ಮ ಘನತೆಯನ್ನು ಕುಗ್ಗಿಸಿಕೊಂಡಿರುವುದಂತು ಸುಳ್ಳಲ್ಲ. ಇಂತಹ ಕೀಳು ವರ್ತನೆ ಕ್ರಿಕೆಟ್ ಅಂಗಳದ ಕಿಂಗ್ ಎನಿಸಿಕೊಂಡವರಿಗೆ ಶೋಭೆಯಲ್ಲ.



# ಜಿಟಿ ವಿರುದ್ಧ ಮುಂಬೈಗೆ ರೋಚಕ ಗೆಲುವು



ರೋಚಕ ಹಣಾಹಣಿಯಲ್ಲಿ ಆರ್‌ಸಿಬಿಗೆ ಕಪ್ ಗೆಲ್ಲಲು ಇನ್ನೊಂದೇ ಮೆಟ್ಟಿಲು ಬಾಕಿ ಇದೆ. ಸೀಸನ್ 18 ಅಲ್‌ಮೋಸ್ಟ್ ಮುಕ್ತಾಯದ ಹಂತಕ್ಕೆ ಬಂದಿದ್ದು, ಕ್ಲೈಮ್ಯಾಕ್ಸ್‌ನಲ್ಲಿ ಕಪ್ ಗೆಲ್ಲೋ ರೇಸ್‌ನಲ್ಲಿ 3 ತಂಡಗಳು ಜಿದ್ದಿಗೆ ಬಿದ್ದಿವೆ. ಗೆದ್ದ ತಂಡ ಕ್ವಾಲಿಫೈಯರ್ 2 ಪಂದ್ಯದಲ್ಲೂ ಗೆಲ್ಲಲೇಬೇಕು. ಅದಾದ ಮೇಲೆ ಖಡಃಗೆ ಫೈನಲ್ ಸವಾಲು ಎದುರಾಗಲಿದೆ. ಆರ್‌ಸಿಬಿ ಸೀಸನ್ 18ರ ಎಲಿಮಿನೇಟರ್ ಪಂದ್ಯ ಕೂಡ ರೋಚಕ ಹಣಾಹಣಿಗೆ ಸಾಕ್ಷಿಯಾಗಿದೆ. ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು.

ರೋಹಿತ್ ಶರ್ಮಾ ಅವರ ಅಮೋಘ ಬ್ಯಾಟಿಂಗ್ ಪ್ರದರ್ಶನದಿಂದ ಮುಂಬೈ ತಂಡ ಗುಜರಾತ್ ಟೈಟಾನ್ಸ್‌ಗೆ ಬಿಗ್ ಟಾರ್ಗೆಟ್ ನೀಡುವಲ್ಲಿ ಯಶಸ್ವಿಯಾಗಿದೆ. ಟಾರ್ಗೆಟ್ ಜೊತೆಗೆ ಉತ್ತಮ ಬೌಲಿಂಗ್ ಪ್ರದರ್ಶನದೊಂದಿಗೆ ಮುಂಬೈ ಇಂಡಿಯನ್ಸ್ 20 ರನ್‌ಗಳಿಂದ ಗೆದ್ದು ಬೀಗಿದೆ. ನಾಯಕ ಹಾರ್ದಿಕ್ ಪಾಂಡ್ಯ ನಿರೀಕ್ಷೆಯಂತೆ ಮುಂಬೈ ಇಂಡಿಯನ್ಸ್‌ಗೆ ಉತ್ತಮ ಆರಂಭವೇ ಸಿಕ್ಕಿದೆ. ಬೌಂಡರಿ, ಸಿಕ್ಸರ್‌ಗಳನ್ನು ಸಿಡಿಸಿದ ರೋಹಿತ್ ಶರ್ಮಾ ಅವರು ಗುಜರಾತ್ ಬೌಲರ್‌ಗಳನ್ನ ಮನಬಂದಂತೆ ದಂಡಿಸಿದರು.ಅರ್ಧ ಶತಕ ಸಿಡಿಸಿದ ರೋಹಿತ್ ಶರ್ಮಾ ಅವರು ಮುಂಬೈ ಇಂಡಿಯನ್ಸ್ ಉತ್ತಮ ಸ್ಕೋರ್ ಕಲೆ ಹಾಕಲು ನೆರವಾದರು. 50 ಬಾಲ್‌ಗಳನ್ನು ಎದುರಿಸಿದ ರೋಹಿತ್ ಶರ್ಮಾ, 4 ಸಿಕ್ಸರ್, 9 ಬೌಂಡರಿಗಳನ್ನು ಸಿಡಿಸಿದರು.

81 ರನ್ ಗಳಿಸಿದ್ದ ರೋಹಿತ್ ಶರ್ಮಾ ಅವರು ಪ್ರಸಿದ್ಧ್ ಕೃಷ್ಣ ಅವರಿಗೆ ಔಟ್ ಆದರು. ಮುಂಬೈ ಇಂಡಿಯನ್ಸ್ 5 ವಿಕೆಟ್ ನಷ್ಟಕ್ಕೆ 228 ರನ್ ಗಳಿಸಿ ಗುಜರಾತ್ ಟೈಟನ್ಸ್‌ಗೆ ಬಿಗ್ ಟಾರ್ಗೆಟ್ ಮುಂದಿಟ್ಟಿತು. 229 ರನ್‌ಗಳ ಟಾರ್ಗೆಟ್ ಗುಜರಾತ್ ಟೈಟನ್ಸ್‌ಗೆ ಅತಿ ದೊಡ್ಡ ಸವಾಲಾಗಿತ್ತು. ಆರಂಭದಲ್ಲಿ ಶುಭ್ಮನ್ ಗಿಲ್ ಔಟ್ ಆಗೋ ಮೂಲಕ ಆಘಾತಕ್ಕೆ ಒಳಗಾಯಿತು. ಗುಜರಾತ್ ಒತ್ತಡದಲ್ಲಿ ಇದ್ದರೂ ಸಾಯಿ ಸುದರ್ಶನ್ ತಂಡಕ್ಕೆ ಆಸರೆಯಾದರು. ಅರ್ಧ ಶತಕ ಬಾರಿಸಿದ ಸಾಯಿ ಸುದರ್ಶನ್ ಅವರು ಬರೋಬ್ಬರಿ 10 ಬೌಂಡರಿಗಳ ನೆರವಿನಿಂದ 80 ರನ್‌ಗಳ ಕಾಣಿಕೆ ನೀಡಿದರು. ಸಾಯಿ ಸುದರ್ಶನ್ ಅವರು ಔಟ್ ಆಗುತ್ತಿದ್ದಂತೆ ಗುಜರಾತ್ ಟೈಟಾನ್ಸ್ ಟೆನ್ಷನ್ ಹೆಚ್ಚಾಯಿತು. ಕೊನೇ ಓವರ್ ವರೆಗೂ ಗೆಲ್ಲಲು 2 ತಂಡಗಳ ಹೋರಾಟ ರೋಚಕವಾಗಿತ್ತು. ಆದರೆ ಕೊನೆ ಕ್ಷಣದಲ್ಲಿ ಎಡವಿದ ಗುಜರಾತ್ ಐಪಿಎಲ್ ಟೂರ್ನಿಯಿಂದ ಔಟ್ ಆಗಿದೆ. ಮುಂಬೈ ಇಂಡಿಯನ್ಸ್ 20 ರನ್‌ಗಳಿಂದ ಗೆಲುವು ಸಾಧಿಸಿದೆ. ಗೆದ್ದ ಮುಂಬೈ ಇಂಡಿಯನ್ಸ್ ಭಾನುವಾರ ಅಂದ್ರೆ ಜೂನ್ 1ಕ್ಕೆ ಕ್ವಾಲಿಫೈಯರ್ 2 ಪಂದ್ಯ ಆಡಬೇಕು.

# ಆರ್‌ಸಿಬಿಗೆ ಕಪ್ ಗೆಲ್ಲಿಸಿ ಕೊಡುವುದೇ ಗುರಿ..!

## ಐಪಿಎಲ್ ಆರಂಭಕ್ಕೂ ಮುನ್ನ ಫಿಟ್



ಐಪಿಎಲ್‌ನ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನ ರೂವಾರಿಗಳಲ್ಲಿ ಸುಯಶ್ ಶರ್ಮಾ ಕೂಡ ಒಬ್ಬರು. ಏಕೆಂದರೆ ಈ ಪಂದ್ಯದಲ್ಲಿ ಅತ್ಯುತ್ತಮ ಸ್ಪಿನ್ ದಾಳಿ ಸಂಘಟಿಸಿದ ಸುಯಶ್ 3 ಓವರ್‌ಗಳಲ್ಲಿ 17 ರನ್ ನೀಡಿ 3 ವಿಕೆಟ್ ಕಬಳಿಸಿದ್ದರು.

ಈ ಮೂರು ವಿಕೆಟ್‌ಗಳು ಯಾವುದೆಂದರೆ ಡೇಂಜರಸ್ ಮಾರ್ಕಸ್ ಸ್ಟೊಯಿನಿಸ್, ಹೊಡಿಬಡಿ ದಾಂಡಿಗ ಶಶಾಂಕ್ ಸಿಂಗ್ ಹಾಗೂ ಮುಶೀರ್ ಖಾನ್ ಅವರದ್ದು. ಹೀಗೆ ಬ್ಯಾಕ್ ಟು ಬ್ಯಾಕ್ ವಿಕೆಟ್ ಕಬಳಿಸುವ ಮೂಲಕ ಸುಯಶ್ ಪಂಜಾಬ್ ಕಿಂಗ್ಸ್ 101 ರನ್‌ಗಳಿಗೆ ಆಲೌಟ್ ಆಗುವಲ್ಲಿ ಪ್ರಮುಖ ಪಾತ್ರವಹಿಸಿದರು.

ವಿಶೇಷ ಎಂದರೆ ಈ ಬಾರಿಯ ಐಪಿಎಲ್‌ಗೆ ಆಯ್ಕೆಯಾಗಿದ್ದ ಸುಯಶ್ ಶರ್ಮಾ ಟೂರ್ನಿಗೆ ಅಲಭ್ಯರಾಗುವ ಸ್ಥಿತಿಯಲ್ಲಿದ್ದರು. ಏಕೆಂದರೆ ಐಪಿಎಲ್ ಆರಂಭಕ್ಕೂ ಕೆಲ ತಿಂಗಳುಗಳ ಮುಂಚೆ ಸುಯಶ್ ಹರ್ನಿಯಾ ಸಮಸ್ಯೆಯಿಂದ ಬಳಲುತ್ತಿದ್ದರು. ಹೀಗಾಗಿ ಅವರು ಈ ಬಾರಿಯ ಐಪಿಎಲ್‌ನಿಂದ ಹೊರಗುಳಿಯಲು ನಿರ್ಧರಿಸಿದ್ದರು. ಈ ವಿಷಯ ತಿಳಿಯುತ್ತಿದ್ದಂತೆ ಆರ್‌ಸಿಬಿ ಫ್ರಾಂಚೈಸಿ ಸುಯಶ್ ಶರ್ಮಾ ಅವರ ನೆರವಿಗೆ ನಿಂತರು. ಅಲ್ಲದೆ ಉತ್ತಮ ಚಿಕಿತ್ಸೆಗಾಗಿ ಅವರನ್ನು ಲಂಡನ್‌ಗೆ ಕಳುಹಿಸಿದರು. ಇದರ ಖರ್ಚು ವೆಚ್ಚಗಳನ್ನು ಆರ್‌ಸಿಬಿ ಫ್ರಾಂಚೈಸಿಯೇ ನೋಡಿಕೊಂಡಿತು.

ಅಷ್ಟೇ ಅಲ್ಲದೆ ಆರ್‌ಸಿಬಿ ಫಿಸಿಯೋ ಜೇಮ್ಸ್ ಪೈಪಿ ಲಂಡನ್‌ನಲ್ಲಿ ಸುಯಶ್ ಶರ್ಮಾ ಅವರ ಆರೋಗ್ಯದ ಬಗ್ಗೆ ಕಾಳಜಿವಹಿಸಿದರು. ಐಪಿಎಲ್ ಆರಂಭಕ್ಕೂ ಮುನ್ನ ಫಿಟ್ ಆಗುವಂತೆ ನೋಡಿಕೊಂಡರು.

# ಮತ್ತೆ ಬರಲಿದೆ 96

## ಸೇತುಪತಿ ಬದಲು ಹೊಸ ನಾಯಕ?

## ಹೊಸ ತಲೆಮಾರಿನ ಮೆಚ್ಚಿನ ನಾಯಕ



2018 ರಲ್ಲಿ ಬಿಡುಗಡೆ ಆಗಿದ್ದ ವಿಜಯ್ ಸೇತುಪತಿ ಮತ್ತು ತ್ರಿಷಾ ನಟನೆಯ '96' ಸಿನಿಮಾ ಭಾರಿ ದೊಡ್ಡ ಹಿಟ್ ಆಗಿತ್ತು. ಸರಳವಾದ ಪ್ರೇಮಕತೆ ಹಾಗೂ ಅದ್ಭುತವಾದ ಸಂಗೀತವನ್ನು ಈ ಸಿನಿಮಾ ಹೊಂದಿತ್ತು. ಇದೀಗ ಈ ಸಿನಿಮಾದ ಎರಡನೇ ಭಾಗ ನಿರ್ಮಾಣ ಆಗಲಿದೆ. ಆದರೆ ವಿಜಯ್ ಸೇತುಪತಿ ಬದಲಿಗೆ ಹೊಸ ನಾಯಕ ನಟಿಸಲಿದ್ದಾರೆ ಎನ್ನುವ ಸುದ್ದಿ ಹರಿದಾಡುತ್ತಿದೆ. ವಿಜಯ್ ಸೇತುಪತಿ , ತ್ರಿಷಾ ನಟಿಸಿದ್ದ ತಮಿಳು ಸಿನಿಮಾ '96' ಭಾರಿ ದೊಡ್ಡ ಹಿಟ್ ಆಗಿತ್ತು. ಇಬ್ಬರು ಮಾಜಿ ಪ್ರೇಮಿಗಳು ಬಹಳ ವರ್ಷಗಳ ಬಳಿಕ ಭೇಟಿಯಾಗಿ ಒಂದು ರಾತ್ರಿ ಒಟ್ಟಿಗೆ ಕಳೆಯುವ ಸರಳವಾದ ಆದರೆ ಮನಸ್ಸಿಗೆ ತಟ್ಟುವ ಕತೆಯನ್ನು '96' ಸಿನಿಮಾ ಒಳಗೊಂಡಿತ್ತು. ಸಿನಿಮಾದ ಹಾಡು, ಹಿನ್ನೆಲೆ ಸಂಗೀತ ಪ್ರೇಕ್ಷಕರಿಗೆ ಬಹುವಾಗಿ ಹಿಡಿಸಿತ್ತು. ಈ ಸಿನಿಮಾ ಕನ್ನಡಕ್ಕೂ ರೀಮೇಕ್ ಆಗಿ ಗೋಲ್ಡನ್ ಸ್ಟಾರ್ ಗಣೇಶ್ ಈ ಸಿನಿಮಾನಲ್ಲಿ ನಟಿಸಿದ್ದರು. ಇದೀಗ ಇದೇ ಸಿನಿಮಾದ ಎರಡನೇ ಭಾಗ ಬರುತ್ತಿದೆ. '96' ಸಿನಿಮಾದ ಎರಡನೇ ಭಾಗ ತಮಿಳಿನಲ್ಲಿ ಬರುತ್ತಿದ್ದು, ಹಾಗೆಂದು ಮೊದಲ ಸಿನಿಮಾದ ಕತೆಯ ಮುಂದುವರೆಕೆ ಇದಲ್ಲ. ಇದೇ ಪ್ರತ್ಯೇಕ ಕತೆ ಆದರೆ ಎರಡೂ ಸಿನಿಮಾದ ಥೀಮ್ ಒಂದೇ ಆಗಿರಲಿದೆ. ಭಗ್ನ ಪ್ರೇಮಿಗಳ ಕತೆಯನ್ನೇ '96' ಎರಡನೇ ಭಾಗ ಸಹ ಹೊಂದಿರಲಿದೆ. ಈ ಸಿನಿಮಾನಲ್ಲಿ ವಿಜಯ್ ಸೇತುಪತಿ ಬದಲಿಗೆ ಹೊಸ ನಾಯಕನನ್ನು ಆಯ್ಕೆ ಮಾಡಲಾಗಿದೆ ಎಂಬ ಸುದ್ದಿ ಹರಿದಾಡುತ್ತಿದೆ. 'ಡ್ರ್ಯಾಗನ್', 'ಲವ್ ಟುಡೆ' ಸಿನಿಮಾಗಳ ಮೂಲಕ ತಮಿಳು ಚಿತ್ರರಂಗದಲ್ಲಿ ಹೊಸ ಅಲೆ ಎಬ್ಬಿಸಿರುವ, ಹೊಸ ತಲೆಮಾರಿನ ಮೆಚ್ಚಿನ ನಾಯಕ ನಟನಾಗಿರುವ ಪ್ರದೀಪ್ ರಂಗನಾಥನ್ ಅವರು '96' ಎರಡನೇ ಭಾಗದ ನಾಯಕನಾಗಿ ಆಯ್ಕೆ ಮಾಡಲಾಗಿದೆ ಎಂಬ ಸುದ್ದಿ ಹರಿದಾಡುತ್ತಿದೆ. ಆದರೆ ಈ ಬಗ್ಗೆ ಸ್ಪಷ್ಟನೆ ನೀಡಿರುವ '96' ಸಿನಿಮಾದ ನಿರ್ದೇಶಕ ಪ್ರೇಮ್ ಕುಮಾರ್ ಹೇಳಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಸಂದೇಶವೊಂದನ್ನ ಸಹ ಅವರು ಹಂಚಿಕೊಂಡಿದ್ದಾರೆ.



# ದೊಡ್ಡವರೆಲ್ಲ ಜಾಣರಲ್ಲ ಕ್ಷಮೆ ಕೇಳಿದ್ರೆ ಸಣ್ಣವರಾಗಲ್ಲ

## ಕಮಲ್ ಹೇಳಿಕೆಗೆ ರಚಿತಾ ರಾಮ್ ತಿರುಗೇಟು





ತಮಿಳಿನಿಂದ ಕನ್ನಡ ಹುಟ್ಟಿತು ಎಂದು ನಟ ಕಮಲ್ ಹಾಸನ್ ಹೇಳಿಕೆಗೆ ವ್ಯಾಪಕ ಟೀಕೆ ವ್ಯಕ್ತವಾಗುತ್ತಿದೆ. ಕನ್ನಡದ ಹಿರಿಯ ನಟ-ನಟಿಯರು ಕಮಲ್ ಹಾಸನ್ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇದೀಗ ನಟಿ ರಚಿತಾ ರಾಮ್ ದೊಡ್ಡವರೆಲ್ಲ ಜಾಣರಲ್ಲ, ಚಿಕ್ಕವರೆಲ್ಲಾ ಕೋಣರಲ್ಲ ಎಂಬ ಗಾಥೆ ಮೂಲಕ ತಿರುಗೇಟು ನೀಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ರಚಿತಾ ರಾಮ್ ಅವರು, ಎಲ್ಲಾದರೂ ಇರು ಎಂತಾದರೂ ಇರು, ಎಂದೆಂದಿಗೂ ನೀ ಕನ್ನಡವಾಗಿರು.. ಹಾಡಿನ ಮೂಲಕ ಮಾತು ಆರಂಭಿಸಿದರು.

ಕನ್ನಡ, ಕರ್ನಾಟಕ ಅಂತ ಬಂದರೆ ಪ್ರತಿಯೊಬ್ಬ ಕನ್ನಡಿಗನಿಗೂ ಇದು ಒಂದು ಎಮೋಷನ್. ನಮ್ಮ ಕನ್ನಡ ಭಾಷೆಯ ಬಗ್ಗೆ ಯಾರಾದರೂ ಟೀಕೆ ಮಾಡುತ್ತಿದ್ದಾರೆ ಎಂದರೆ ನಾವು ಸುಮ್ಮನೆ ಕೂರೋಕೆ ಆಗಲ್ಲ. ನಾವು ಕನ್ನಡದವರು ಎಷ್ಟು ವಿಶಾಲ ಹೃದಯದವರು ಎಂದರೆ ಎಲ್ಲಾ ಭಾಷೆಯ ಸಿನಿಮಾ ನೋಡುತ್ತೇವೆ, ಪ್ರತಿ ಭಾಷೆಯ ಸಿನಿಮಾ ಹಾಡುಗಳನ್ನು ಕೇಳುತ್ತೇವೆ. ಕಲಾವಿದರಿಗೆ ಬೆಂಬಲ ಕೊಡುತ್ತೇವೆ. ಆದರೆ ನಮ್ಮ ಭಾಷೆ ಬಗ್ಗೆ ಯಾರಾದರೂ ಮಾತನಾಡಿದರೆ ನಾವು ಯಾಕೆ ಧ್ವನಿ ಎತ್ತಬಾರದು ಎಂದರು. ನಾವು ಭಾಷೆ ಬಗ್ಗೆ ಕೆಟ್ಟದಾಗಿ ಮಾತನಾಡಲ್ಲ. ಎಲ್ಲಾ ಭಾಷೆಯನ್ನೂ ನಾವು ಗೌರವಿಸುತ್ತೇವೆ. ಕನ್ನಡದ ಬಗ್ಗೆ ಯಾರೂದರೂ ಕೆಟ್ಟದಾಗಿ ಮಾತನಾಡಿದರೆ ನಾವು ಎದ್ದು ನಿಲ್ಲಬೇಕು. ದೊಡ್ಡವರೆಲ್ಲ ಜಾಣರಲ್ಲ, ಚಿಕ್ಕವರೆಲ್ಲ ಕೋಣರಲ್ಲ ಎಂಬ ಕನ್ನಡದ ಹಾಡು ಕೂಡ ನನಗೆ ನೆನಪಿಗೆ ಬರುತ್ತಿದೆ.

# ನನ್ನಂತೆ ಯಾರಿರಲಿಲ್ಲ ಮುಂದೆ ಯಾರೂ ಬರಲ್ಲ

## ಇಳಯರಾಜ ಹೇಳಿಕೆ ಕೇಳಿ ಬಂತು ನೆಗೆಟಿವ್ ಕಮೆಂಟ್



ಇಳಯರಾಜ ಅವರಿಗೆ ಈಗ 81 ವರ್ಷ ವಯಸ್ಸು. ಅವರ ಜನ್ಮದಿನದ ಸಂದರ್ಭದಲ್ಲಿ ಅವರು ನೀಡಿದ 'ನನ್ನಂತೆ ಮೊದಲು ಯಾರೂ ಇರಲಿಲ್ಲ, ಮುಂದೆ ಯಾರೂ ಬರಲ್ಲ' ಎಂಬ ಹೇಳಿಕೆ ದೊಡ್ಡ ಚರ್ಚೆಗೆ ಕಾರಣವಾಗಿದೆ. ಕೆಲವರು ಇದನ್ನು ಅತಿ ಆತ್ಮವಿಶ್ವಾಸ ಎಂದು ಟೀಕಿಸಿದರೆ, ಇನ್ನು ಕೆಲವರು ಅವರ ಸಾಧನೆಗಳನ್ನು ಗಮನಿಸಿ ಅವರ ಹೇಳಿಕೆಯನ್ನು ಸಮರ್ಥಿಸುತ್ತಿದ್ದಾರೆ. ಸಂಗೀತ ಸಂಯೋಜಕ ಇಳಯರಾಜ ಅವರಿಗೆ ಈಗ 81 ವರ್ಷ. ಇನ್ನು ಕೆಲವೇ ದಿನಗಳಲ್ಲಿ (ಜೂನ್ 3) ಅವರಿಗೆ 82 ವರ್ಷ ತುಂಬಲಿದೆ. ಅವರು ಅನೇಕ ಹಾಡುಗಳಿಗೆ ಜೀವ ತುಂಬಿದ್ದಾರೆ. ಅವರ ಬಗ್ಗೆ ಅವರಿಗೇ ಹೆಮ್ಮೆ ಇದೆ. ಈಗ ಅವರು ನೀಡಿರುವ ಒಂದು ಹೇಳಿಕೆ ಚರ್ಚೆ ಹುಟ್ಟುಹಾಕಿದೆ.

'ನನ್ನಂತೆ ಈ ಮೊದಲು ಯಾರೂ ಇರಲಿಲ್ಲ, ಮುಂದೆ ಯಾರೂ ಬರೋದಿಲ್ಲ' ಎಂದು ಹೇಳಿದ್ದಾರೆ. ಅನೇಕರು ಇದನ್ನು ತಪ್ಪಾಗಿಅರ್ಥೈಸಿಕೊಂಡಿದ್ದು, ಇಳಯರಾಜ ಅವರಿಗೆ ಧಿಮಾಕು ಎಂದಿದ್ದಾರೆ. ಇಳಯರಾಜ ಅವರು ಇತ್ತೀಚೆಗೆ ರಾಜೇಂದ್ರ ಪ್ರಸಾದ್ ಅವರ 'ಶಷ್ಟಿಪೂರ್ತಿ' ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಿದರು. ಈ ಸಿನಿಮಾ ಮೇ 30 ರಿಲೀಸ್ ಆಗಿದೆ. ಈ ಸಿನಿಮಾದ ಎಲ್ಲಾ ಹಾಡುಗಳು ಮೆಚ್ಚುಗೆ ಪಡೆದವು. ಈ ಸಿನಿಮಾದ ಸಂದರ್ಶನದಲ್ಲಿ ಅವರು ತಮ್ಮನ್ನು ತಾವು ಹೊಗಳಿದ್ದಾರೆ. 'ನನ್ನಂತೆ ಯಾರೂ ಬರೋದಿಲ್ಲ' ಎಂದಿದ್ದಾರೆ. 'ನನ್ನ ಬಗ್ಗೆ ನಾನೇ ಮಾತನಾಡಬೇಕು. ಏಕೆಂದರೆ ನನ್ನಂತೆ ಈ ಮೊದಲು ಯಾರೂ ಇರಲಿಲ್ಲ, ಮುಂದೆ ಯಾರೂ ಬರಲ್ಲ. ಸಂಗೀತ ಲೋಕದಲ್ಲಿ ಅನೇಜ ದಿಗ್ಗಜರು ಇದ್ದಾರೆ. ಆದರೆ, ನಾನು ತಲುಪಿದ ಹಂತಕ್ಕೆ ಯಾರೂ ಬಂದಿಲ್ಲ' ಎಂದು ಹೇಳಿಕೊಂಡಿದ್ದಾರೆ.

# 2ನೇ ಮಗುವಿನ ನಿರೀಕ್ಷೆಯಲ್ಲಿ ನಟಿ ಇಲಿಯಾನಾ

ಬಾಲಿವುಡ್ ಬೆಡಗಿ ಇಲಿಯಾನಾ ಗುಡ್ ನ್ಯೂಸ್ ಕೊಟ್ಟಿದ್ದಾರೆ. ನಟಿ 2ನೇ ಮಗುವಿನ ನಿರೀಕ್ಷೆಯಲ್ಲಿರುವುದನ್ನ ಖಚಿತಪಡಿಸಿದ್ದಾರೆ. ಗೆಳತಿಯೊಂದಿಗೆ ಬೇಬಿ ಬಂಪ್ ಕಾಣುವ ಫೋಟೋವನ್ನು ಇನ್ಸ್ಟಾ ಸ್ಟೋರಿಯಲ್ಲಿ ಶೇರ್ ಮಾಡಿ, 'ಬಂಪ್ ಬುಡ್ಡೀಸ್' ಎಂದು ಕ್ಯಾಪ್ಷನ್ ನೀಡಿದ್ದಾರೆ. ಫ್ಯಾನ್ಸ್ ನಟಿಗೆ ಶುಭಾಶಯ ಹಾರೈಸುತ್ತಿದ್ದಾರೆ. ಮೈಕಲ್ ಡೋಲನ್ ಜೊತೆ 2023ರಲ್ಲಿ ನಟಿ ಮದುವೆಯಾಗಿದ್ದರು. 2023ರ ಆಗಸ್ಟ್‌ನಲ್ಲಿ ಮೊದಲ ಮಗುವನ್ನು ನಟಿ ಬರಮಾಡಿಕೊಂಡರು. ಬಾಲಿವುಡ್, ಸೌತ್‌ನಿಂದ ಬಿಗ್ ಆಫರ್‌ಗಳಿದ್ದಾಗಲೇ ಬಣ್ಣದ ಲೋಕಕ್ಕೆ ಗುಡ್ ಬೈ ಹೇಳಿದ್ದರು.

# ಪುಷ್ಪ ಮಾಡಲು ಉಪೇಂದ್ರ ಸ್ಫೂರ್ತಿ





'ಪುಷ್ಪ' ಅಥವಾ ನನ್ನ ಇತರೆ ಸಿನಿಮಾಗಳ ಚಿತ್ರಕಥೆ ಚೆನ್ನಾಗಿದೆ ಎಂದರೆ ಅದಕ್ಕೆ ಉಪೇಂದ್ರ ಸಿನಿಮಾಗಳೇ ಸ್ಫೂರ್ತಿ ಎಂದು ತೆಲುಗಿನ ಖ್ಯಾತ ನಿರ್ದೇಶಕ ಸುಕುಮಾರ್ ಕೊಂಡಾಡಿದ್ದಾರೆ. ಅರ್ಜುನ್ ಸರ್ಜಾ ನಿರ್ದೇಶನದ 'ಸೀತಾ ಪಯಣಂ' ಚಿತ್ರದ ಟೀಸರ್ ಲಾಂಚ್ ಕಾರ್ಯಕ್ರಮದಲ್ಲಿ ಸುಕುಮಾರ್ ಮತ್ತು ಉಪೇಂದ್ರ ಅತಿಥಿಗಳಾಗಿ ಭಾಗಿಯಾಗಿದ್ದರು. ಈ ವೇಳೆ ಸುಕುಮಾರ್ ಮಾತನಾಡಿ, ಉಪೇಂದ್ರ ಅವರು ತಮ್ಮ ಚಿತ್ರಗಳಲ್ಲಿ ತರುವ ಮ್ಯಾಡ್‌ನೆಸ್ ಅನ್ನು ನಾನು ಯಾವುದೇ ನಿರ್ದೇಶಕರಲ್ಲಿ ನೋಡಿಲ್ಲ. ನಾನು ಕೂಡ ಅವರಂತೆ ನಿರ್ದೇಶಿಸಿದ್ದರೆ ಖುಷಿಯಿಂದ ನಿವೃತ್ತಿ ಹೊಂದುತ್ತಿದ್ದೆ ಎಂದಿದ್ದಾರೆ. 'ಪುಷ್ಪ' ಅಥವಾ ನನ್ನ ಇತರೆ ಸಿನಿಮಾಗಳ ಚಿತ್ರಕಥೆ ಚೆನ್ನಾಗಿದೆ ಎಂದರೆ ಅದಕ್ಕೆ ಉಪ್ಪಿ ಸಿನಿಮಾಗಳೇ ಪ್ರೇರಣೆ. ಅದನ್ನು ಯಾವುದೇ ಸಂಕೋಚವಿಲ್ಲದೇ ಹೇಳುತ್ತೇನೆ ಎಂದು ಉಪೇಂದ್ರ ಕುರಿತು ಸುಕುಮಾರ್ ಹೊಗಳಿದ್ದಾರೆ. ನಿರ್ದೇಶಕನ ಮಾತು ಉಪ್ಪಿ ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ತೆಲುಗಿನ ಆಂಧ್ರ ಕಿಂಗ್ ತಾಲೂಕಾ, ಭಾರ್ಗವ, 45 ಸಿನಿಮಾ, ಕೂಲಿ ಸೇರಿದಂತೆ ಹಲವು ಚಿತ್ರಗಳು ಉಪೇಂದ್ರ ಕೈಯಲ್ಲಿವೆ.


**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**